18 February 2026 Wednesday

SINCE 1957

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

# ವರ್ತಮಾನ

ಸಂಪಾದಕ: ಕೆ.ಎನ್.ರವಿ

ಭವಿಷ್ಯದ ಮುನ್ನುಡಿ

**ಭಾವನಾಂತರಂಗ**

ನಮ್ಮಲ್ಲಿರುವ ಬಲ ಮತ್ತು
ಬಲಹೀನತೆ ಎರಡನ್ನೂ
ಗುರುತಿಸಿಕೊಳ್ಳುವದೇ ಯಶಸ್ವಿ
ಬದುಕಿನ ರಹಸ್ಯ!
–ಸ್ನೇಹಾ ಆನಂದ್

info.varthaman@gmail.com



ಕೆಪಿಎಸ್ ಮ್ಯಾಗ್ನೆಟ್ ಶಾಲೆಗೆ ಸರ್ಕಾರಿ ಶಾಲೆಗಳ ವಿಲೀನಕ್ಕೆ ವಿರೋಧ — ಪುಟ ಸಂ. 2



ಕಾಂಗೆಸ್ ಸೇವಾದಳ, ಆರ್‌ಎಸ್‌ಎಸ್ ಭಿನ್ನತೆಗೆ ನೂರುವರ್ಷ: ಡಾ.ಬಿಜೆವಿ — ಪುಟ ಸಂ. 3




ವಿವಿಧೆಡೆ ಸಡಗರ ಸಂಭ್ರಮದ ಶಿವರಾತ್ರಿ ಹಬ್ಬ ಆಚರಣೆ — ಪುಟ ಸಂ. 4

9742504916 | ಮೈಸೂರು | ಮಂಡ್ಯ | ಬೆಂಗಳೂರು | ಹಾಸನ | ಚಾಮರಾಜನಗರ | ರಾಮನಗರ | ಬೆಂಗಳೂರು ಗ್ರಾಮಾಂತರ | ಕೊಡಗು | ಕಾರ್ಯನಿರ್ವಾಹಕ ಸಂಪಾದಕ - ಕೆ.ಆರ್.ಮಿಹಿರ್ ಆಕಾಶ್

VARTHAMAN Volume: 69 Issue: 102 Pages: 06 KA/SK/MYS/1098/2023-2025 R.N.I. No.3577/1957 www.varthaman.in Price-3

# ಸಮಯ ಬಂದಾಗ ಸಿದ್ದು ಸಂದೇಶ

## ನಾಯಕತ್ವ ವಿಚಾರಕ್ಕೆ ಡಿಸಿಎಂ ಡಿ.ಕೆ.ಶಿವಕುಮಾರ್ ಮಾರ್ಮಿಕ ಮಾತು



**ಬೆಂಗಳೂರು:** ನಾಯಕತ್ವ ವಿಚಾರ ವಾಗಿ ತೀರ್ಮಾನ ಏನು ಎಂಬುದು ಸಮಯ ಬಂದಾಗ ತಿಳಿಯು ತ್ತದೆ. ಇದು ಕದ್ದುಮುಚ್ಚಿ ಮಾಡಿ ಕೊಂಡಿರುವ ಗುಟ್ಟು ವ್ಯವಹಾರವಲ್ಲ. ಸಮಯ ಬಂದಾಗ ಸಿದ್ದ ರಾಮಯ್ಯ ಅವರೇ ರಾಜ್ಯದ ಜನ ರಿಗೆ ಸಂದೇಶ ನೀಡುತ್ತಾರೆ ಎಂದು ಡಿಸಿಎಂ ಡಿ.ಕೆ.ಶಿವ ಕುಮಾರ್ ತಿಳಿಸಿದರು.

ಮಾಧ್ಯಮಗಳ ಜೊತೆ ಮಂಗಳವಾರ ಮಾತ ನಾಡಿದ ಅವರು, ನಾಯ ಕತ್ವ ವಿಚಾರ ಗುಟ್ಟಾಗಿ ನಡೆದಿರುವುದಲ್ಲ. ನಾನು, ಸಿದ್ದ ರಾಮಯ್ಯ ಅವರು ಹಾಗೂ ಹೈಕಮಾಂಡ್ ಎಲ್ಲರೂ ಸೇರಿ ತೆಗೆದುಕೊಂಡಿರುವ ತೀರ್ಮಾನ ಎಂದು ಡಿಕೆಶಿ ಅವರು, ಅಧಿಕಾರ ಹಂಚಿಕೆಯ ಒಪ್ಪಂದದ ಬಗ್ಗೆ ಸ್ಪಷ್ಟವಾಗಿ ತಿಳಿಸಿದರು.

ಶಾಸಕರ ವಿದೇಶ ಪ್ರವಾಸದ ಬಗ್ಗೆ ಕೇಳಿದಾಗ, ನನಗೆ ಯಾವ ಪ್ರವಾಸದ ಬಗ್ಗೆಯೂ ಮಾಹಿತಿ ಇಲ್ಲ. ಈ ಬಗ್ಗೆ ನನಗೆ ಮಾಧ್ಯಮಗಳಿಂದಷ್ಟೇ ತಿಳಿದಿದೆ. ಇದು ಅವರ ವೈಯಕ್ತಿಕ ಪ್ರವಾಸವೋ, ಬೇರೆಯವರು ಅವರನ್ನು ಪ್ರವಾಸಕ್ಕೆ ಕಳುಹಿಸುತ್ತಿದ್ದಾರೋ ಗೊತ್ತಿಲ್ಲ. ಇದು ಪ್ರವಾಸ ಕಳುಹಿಸುತ್ತಿರುವವರು ಉಂಟು ಹಾಗೂ ಪ್ರವಾಸ ಹೋಗುತ್ತಿರುವವರು ಉಂಟು. ಪಕ್ಷದ ಅಧ್ಯಕ್ಷನಾಗಿ ನಾನು ಇದರಲ್ಲಿ ಹಸ್ತಕ್ಷೇಪ ಮಾಡುವುದಿಲ್ಲ ಎಂದು ತಿಳಿಸಿದರು.



ಕಾಂಗ್ರೆಸ್ ಭವನಗಳಿಗೆ ಸರ್ಕಾರಿ ಜಮೀನು ಬಳಸಿಕೊಳ್ಳಲಾಗುತ್ತಿದೆ ಎಂಬ ಬಿಜೆಪಿ ನಾಯಕರ ಆರೋಪದ ಬಗ್ಗೆ ಕೇಳಿದಾಗ, ಖಂಡಿತವಾಗಿ ನಾವು ಕಾಂಗ್ರೆಸ್ ಭವನಗಳಿಗೆ ಸರ್ಕಾರಿ ಜಾಗ ಬಳಸಿಕೊಳ್ಳುತ್ತಿದ್ದೇವೆ. ನಾವು ಮಹಾತ್ಮಾ ಗಾಂಧೀಜಿ ಅವರು ಕಾಂಗ್ರೆಸ್ ಪಕ್ಷದ ಅಧ್ಯಕ್ಷತೆಯ ಶತಮಾನೋತ್ಸವ ಹಿನ್ನೆಲೆಯಲ್ಲಿ 100 ಕಾಂಗ್ರೆಸ್ ಭವನ ನಿರ್ಮಾಣಕ್ಕೆ ಮುಂದಾಗಿದ್ದೇವೆ. ನಾವು 5–10 ಸಾವಿರ ಚದರ ಅಡಿಗಳಷ್ಟು ಜಾಗವನ್ನು ಮಂಜೂರು ಮಾಡುತ್ತಿದ್ದೇವೆ. ಬಿಜೆಪಿ ಆಡಳಿತ ಅವಧಿಯಲ್ಲಿ ಬೆಂಗಳೂರು ನಗರದಲ್ಲಿ 100ಕ್ಕೂ ಹೆಚ್ಚು ಕಡೆಗಳಲ್ಲಿ ವಿವಿಧ ಟ್ರಸ್ಟ್ ಗಳ ಹೆಸರಿನಲ್ಲಿ ಜಾಗ ಪಡೆದಿದ್ದಾರೆ. ಚಾಣಾಕ್ಯ ವಿವಿಗೆ ನೀಡಿರುವ ಜಾಗ ಪ್ರತಿ ಎಕರೆಗೆ 10 ಕೋಟಿ ರೂಪಾಯಿ ಬೆಳೆಬಾಳುತ್ತದೆ. ಆದರೆ ಬಿಜೆಪಿಯವರು ಪ್ರತಿ ಎಕರೆಗೆ 50 ಲಕ್ಷದ ದರದಲ್ಲಿ 100 ಎಕರೆ ಜಾಗ ಮಂಜೂರು ಮಾಡಿದ್ದಾರೆ. ಸಿಎಸ್‌ಆರ್ ನಿಧಿ ಮೂಲಕ ಕೋಟ್ಯಂತರ ರೂಪಾಯಿ ಸಂಗ್ರಹಿಸಿದ್ದಾರೆ.

ಪುಟ 2ಕ್ಕೆ

## ಎಚ್‌ಸಿಎಂ ನಮ್ಮ ಹೈಕಮಾಂಡ್!

**ಬೆಂಗಳೂರು:** ಸಚಿವ ಎಚ್.ಸಿ.ಮಹದೇವಪ್ಪ ಅವರೂ ಈಗ ನಮ್ಮ ಹೈಕಮಾಂಡ್ ಭಾಗವಾಗಿದ್ದಾರೆ. ಅವರ ಬಗ್ಗೆ ನಾನು ಏನನ್ನೂ ಮಾತನಾಡುವುದಿಲ್ಲ. ಈ ಬಗ್ಗೆ ಪಕ್ಷವೇ ತೀರ್ಮಾನ ಮಾಡಲಿದೆ ಎಂದು ಡಿ.ಕೆ.ಶಿವಕುಮಾರ್ ಲೇವಡಿ ಮಾಡಿದರು.

ಸಚಿವ ಎಚ್.ಸಿ.ಮಹದೇವಪ್ಪ ಅವರು ಅಧಿಕಾರ ಹಂಚಿಕೆ ವಿಚಾರವಾಗಿ ಮಾತನಾಡುವವರನ್ನು ಬೀದಿ ನಾಯಿಗಳಿಗೆ ಹೋಲಿಕೆ ಮಾಡಿರುವ ಬಗ್ಗೆ ಮಾಧ್ಯಮಗಳ ಪ್ರಶ್ನೆಗಳಿಗೆ ಪ್ರತಿಕ್ರಿಯೆ ನೀಡಿದ ಅವರು, ಈ ಬಗ್ಗೆ ಸಿಎಂ ಹಾಗೂ ಹೈಕಮಾಂಡ್ ಕ್ರಮಕೈಗೊಳ್ಳುತ್ತಾರೆ. ನಾನು ಮಹದೇವಪ್ಪ ಅಥವಾ ಬೇರೆಯವರಿಗೆ ಉತ್ತರ ನೀಡಲು ತಯಾರಿಲ್ಲ ಎಂದು ಡಿಕೆಶಿ ಹೇಳಿದರು.



## 6 ಸೆಕೆಂಡ್ ಆಡಿಯೋ ಬಿಡುಗಡೆ

**ಮೈಸೂರು:** ಮೂಡಾ ಅಕ್ರಮ ನಿವೇಶನ ಹಂಚಿಕೆ ಹಗರಣದಲ್ಲಿ ಹೋರಾಟ ನಡೆಸುತ್ತಿರುವ ಹಣದ ಅಮಿಷ ಒಡ್ಡಲು ಮುಡಾದ ಮಾಜಿ ಆಯುಕ್ತ ಪ್ಲಾನ್ ಮಾಡಿದ್ದರು ಎನ್ನುವಂತೆ ಅನುಮಾನ ಬರುವ ಆಡಿಯೋವನ್ನು



ಸ್ನೇಹಮಹಿ ಕೃಷ್ಣ ಮಾಧ್ಯಮಗಳಿಗೆ ಮಂಗಳವಾರ ಬಿಡುಗಡೆ ಮಾಡಿದ್ದಾರೆ. 6 ಸೆಕೆಂಡ್ ಆಡಿಯೊ ಮಾತ್ರ ಬಿಡುಗಡೆ ಮಾಡಿರುವ ಸ್ನೇಹಮಯಿ ಕೃಷ್ಣ, ಸಂಪೂರ್ಣ ಆಡಿಯೋವನ್ನು ಪ್ರಕರಣದ ತನಿಖೆ ನಡೆಸುತ್ತಿರುವ ಲೋಕಾಯುಕ್ತಗೆ ನೀಡುತ್ತೇನೆ ಎಂದು ಹೇಳಿದ್ದಾರೆ. 6 ಸೆಕೆಂಡ್ ಆಡಿಯೋದಲ್ಲಿ ಸ್ನೇಹಮಯಿ ಕೃಷ್ಣನ್ನು ಏನಾದರೂ ಒನ್ ಟು ಒನ್ ಲಿಂಕ್ ಹಿಡಿದು ಕನೆಕ್ಷನ್ ತಗೋಬೇಕಲ್ಲ ಎಂದು ಡಿ.ಬಿ.ನಟೇಶ್ ಅವರು ಮೈಸೂರಿನ

ಪುಟ 2ಕ್ಕೆ

# ಮತ್ತಿಬ್ಬರು ಡ್ರಗ್ಸ್ ಪೆಡ್ಲರ್'ಗಳ ಬಂಧನ

## * ಸಿಸಿಬಿ ಕಾರ್ಯಾಚರಣೆ: 6.25 ಲಕ್ಷ ಮೌಲ್ಯದ ಮಾದಕ ವಸ್ತು, ಗಾಂಜಾ ವಶ

**ಮೈಸೂರು:** ನಗರದ ಸಿಸಿಬಿ ಪೊಲೀಸರು ಮಂಗಳವಾರ ಡ್ರಗ್ಸ್ ಜಾಲದ ಮೇಲೆ ದಾಳಿ ನಡೆಸಿ ಅಪಾರ ಪ್ರಮಾಣದ ಡ್ರಗ್ಸ್ ವಶಕ್ಕೆ ಪಡೆದಿದ್ದಾರೆ. 5.10 ಲಕ್ಷ ಮೌಲ್ಯದ ಮಾದಕ ವಸ್ತು ಎಂಡಿಎಂಎ ಹಾಗೂ 1.25 ಲಕ್ಷ ಬೆಲೆಯ ಗಾಂಜಾವನ್ನು ವಶಕ್ಕೆ ಪಡೆದು ಬೆಂಗಳೂರಿನ ಇಬ್ಬರು ಪೆಡ್ಲರ್ ಗಳನ್ನು ಬಂಧಿ ಸಿದ್ದಾರೆ.







ಬೆಂಗಳೂರಿನ ನಂದಿನಿ ಲೇಔಟ್ ವಿಜಯಾನಂದ ನಗರ ನಿವಾಸಿಗಳಾದ ಆರ್.ಪ್ರಮೋದ್ ಬಿನ್ ರವಿಕುಮಾರ್ (27) ಮತ್ತು ಎಂ.ವಿಕಾಸ್ ಬಿನ್ ಆರ್.ಮೂರ್ತಿ (23) ಅವರರನ್ನು ದಸ್ತಗಿರಿ ಮಾಡಿ ಮೇಟಗಳ್ಳಿ ಪೊಲೀಸ್



ಠಾಣೆಯಲ್ಲಿ ಪ್ರಕರಣ ದಾಖಲಿಸಿದ್ದಾರೆ. ಆರೋಪಿಗಳನ್ನು ನ್ಯಾಯಾಂಗ ಬಂಧ ನಕ್ಕೆ ಒಳಪಡಿಸಲಾಗಿದೆ.

ಪೊಲೀಸರು ಅಕ್ರಮ ಮಾದಕ ವಸ್ತು ಎಂ.ಡಿ.ಎಂ.ಎ ಹಾಗೂ ಗಾಂಜಾ ಪೂರೈಕೆ ಜಾಲದ ಮೇಲೆ ಕಾರ್ಯಾಚರಣೆ ಮುಂದುವರೆಸಿದ್ದಾರೆ. ದಾಳಿ ನಡೆಸಿರುವ ಸಿಸಿಬಿ ಪೊಲೀಸರು 5.10 ಲಕ್ಷ ರೂ. ಮೌಲ್ಯದ 51 ಗ್ರಾಂ 83 ಮಿಲಿ ನಿಷೇಧಿತ ಮಾದಕ ವಸ್ತು ಎಂ. ಡಿ.ಎಂ.ಎ ಮತ್ತು 1.25 ಲಕ್ಷ ಮೌಲ್ಯದ 2 ಕೆಜಿ 230 ಗ್ರಾಂ ಗಾಂಜಾ ಸೇರಿ ಒಟ್ಟು 6.35 ಲಕ್ಷ ಮೌಲ್ಯವುಳ್ಳ ನಿಷೇಧಿತ ಮಾದಕ ವಸ್ತುಗಳು

ಪುಟ 2ಕ್ಕೆ

# ಫೆ.28ರಿಂದ ಎಸ್‌ಎಸ್‌ಎಲ್‌ಸಿ, ಮಾ.18ರಿಂದ ಪಿಯು ಪರೀಕ್ಷೆ

**ಬೆಂಗಳೂರು:** ದ್ವಿತೀಯ ಪಿಯುಸಿ ಹಾಗೂ ಎಸ್‌ಎಸ್‌ಎಲ್‌ಸಿ ಪರೀಕ್ಷಾ ವೇಳಾ ಪಟ್ಟಿಯನ್ನು ಘೋಷಿಸಲಾಗಿದೆ. ಫೆ.28ರಿಂದ ಮಾರ್ಚ್ 17ರ ವರೆಗೆ ದ್ವಿತೀಯ ಪಿಯುಸಿ ಹಾಗೂ ಮಾರ್ಚ್ 18ರಿಂದ ಏಪ್ರಿಲ್ 2ರ ವರೆಗೆ ಎಸ್‌ಎಸ್‌ಎಲ್‌ಸಿ ಪರೀಕ್ಷೆಗಳು ನಡೆಯಲಿವೆ ಎಂದು ಶಿಕ್ಷಣ ಸಚಿವ ಮಧು ಬಂಗಾರಪ್ಪ ತಿಳಿಸಿದರು. ಬೆಂಗಳೂರಿನಲ್ಲಿ ಮಂಗಳವಾರ ಸುದ್ದಿ ಗೋಷ್ಠಿಯಲ್ಲಿ ಮಾತನಾಡಿದ ಅವರು, ಫೆ.28ರಿಂದ ದ್ವಿತೀಯ ಪಿಯುಸಿ ಪರೀಕ್ಷೆ, ಮಾ. 18ರಿಂದ ಎಸ್‌ಎಸ್‌ಎಲ್‌ಸಿ ಪರೀಕ್ಷೆ

ಪುಟ 2ಕ್ಕೆ

### ದ್ವಿತಿಯ ಪಿಯುಸಿ ಪರೀಕ್ಷೆ ವೇಳಾಪಟ್ಟಿ

- ಫೆಬ್ರವರಿ 28– ಕನ್ನಡ, ಅರೇಬಿಕ್
- ಮಾರ್ಚ್ 2– ಭೂಗೋಳ ಶಾಸ್ತ್ರ, ಸಂಖ್ಯಾಶಾಸ್ತ್ರ, ಮನಃಶಾಸ್ತ್ರ
- ಮಾರ್ಚ್ 3– ಇಂಗ್ಲಿಷ್
- ಮಾರ್ಚ್ 4– ತಮಿಳು, ತೆಲುಗು, ಮಲಯಾಳಂ, ಮರಾಠಿ, ಉರ್ದು, ಸಂಸ್ಕೃತ ಫ್ರೆಂಚ್.
- ಮಾರ್ಚ್ 5– ಇತಿಹಾಸ
- ಮಾರ್ಚ್ 6– ಭೌತಶಾಸ್ತ್ರ
- ಮಾರ್ಚ್ 7– ಐಚ್ಛಿಕ ಕನ್ನಡ, ವ್ಯವಹಾರ ಅಧ್ಯಯನ,ಭೂಗರ್ಭ ಶಾಸ್ತ್ರ.
- ಮಾರ್ಚ್ 9– ರಸಾಯನಶಾಸ್ತ್ರ, ಶಿಕ್ಷಣಶಾಸ್ತ್ರ, ಮೂಲ ಗಣಿತ
- ಮಾರ್ಚ್ 10– ಅರ್ಥಶಾಸ್ತ್ರ
- ಮಾರ್ಚ್ 11– ತರ್ಕಶಾಸ್ತ್ರ,ವಿದ್ಯುನ್ಮಾನ ಶಾಸ್ತ್ರ,ಗೃಹ ವಿಜ್ಞಾನ
- ಮಾರ್ಚ್ 12– ಹಿಂದಿ
- ಮಾರ್ಚ್ 13– ರಾಜ್ಯಶಾಸ್ತ್ರ
- ಮಾರ್ಚ್ 14– ಲೆಕ್ಕಶಾಸ್ತ್ರ, ಗಣಿತ
- ಮಾರ್ಚ್ 16– ಸಮಾಜಶಾಸ್ತ್ರ, ಜೀವಶಾಸ್ತ್ರ, ಗಣಕ ವಿಜ್ಞಾನ.
- ಮಾರ್ಚ್ 17– ಹಿಂದುಸ್ತಾನಿ, ಸಂಗೀತ, ರೀಟೇಲ್ ಆಟೋಮೊಬೈಲ್, ಆರೋಗ್ಯ ರಕ್ಷಣೆ.



### ಎಸ್‌ಎಸ್‌ಎಲ್‌ಸಿ ಪರೀಕ್ಷೆ 1

- ಮಾರ್ಚ್ 18– ಪ್ರಥಮ ಭಾಷೆ
- ಮಾರ್ಚ್ 23– ವಿಜ್ಞಾನ
- ಮಾರ್ಚ್ 25– ದ್ವಿತಿಯ ಭಾಷೆ
- ಮಾರ್ಚ್ 28– ಗಣಿತ
- ಮಾರ್ಚ್ 30– ತೃತೀಯ ಭಾಷೆ
- ಏಪ್ರಿಲ್ 2– ಸಮಾಜ ವಿಜ್ಞಾನ.

### ಎಸ್‌ಎಸ್‌ಎಲ್‌ಸಿ ಪರೀಕ್ಷೆ –2

- ಮೇ 18– ಪ್ರಥಮ ಭಾಷೆ.
- ಮೇ 19– ವಿಜ್ಞಾನ
- ಮೇ 20– ದ್ವೀತಿಯ ಭಾಷೆ
- ಮೇ 21– ಗಣಿತ
- ಮೇ 22– ತೃತೀಯ ಭಾಷೆ
- ಮೇ 23– ಸಮಾಜ ವಿಜ್ಞಾನ

## ಶಾಸಕರ ಪ್ರವಾಸಕ್ಕೂ ರಾಜಕೀಯಕ್ಕೂ ಏನೂ ಸಂಬಂಧವಿಲ್ಲ: ಡಾ.ಯತೀಂದ್ರ

**ಮೈಸೂರು:** ಕಾಂಗ್ರೆಸ್ ಶಾಸಕರ ವಿದೇಶಿ ಪ್ರವಾಸಕ್ಕೂ ರಾಜಕೀಯ ಬೆಳವಣಿಗೆಗೂ ಯಾವುದೇ ಸಂಬಂಧವಿಲ್ಲ ಎಂದು ವಿಧಾನ ಪರಿಷತ್ ಸದಸ್ಯ ಡಾ.ಯತೀಂದ್ರ ಹೇಳಿದರು.



ಸುದ್ದಿಗಾರರೊಂದಿಗೆ ಮಂಗಳವಾರ ಮಾತನಾಡಿದ ಅವರು, ಸಚಿವರು, ಶಾಸಕರು ಅವರ ಸ್ವಂತ ಹಣದಲ್ಲಿ ವೈಯುಕ್ತಿಕವಾಗಿ ವಿದೇಶ ಪ್ರವಾಸಕ್ಕೆ ಹೋಗುತ್ತಿದ್ದಾರೆ. ವೈಯುಕ್ತಿಕ ಪ್ರವಾಸ ಎಂದ ಮೇಲೆ ಅದನ್ನು ಹೋಗಬೇಡಿ ಎನ್ನಲು ಹೇಗೆ ಸಾಧ್ಯ. ಯಾವ ರಾಜಕೀಯ ಬೆಳವಣಿಗೆಗಳೂ ಇಲ್ಲ. ನನ್ನನ್ನು ಪ್ರವಾಸಕ್ಕೆ ಕರೆದಿಲ್ಲ ಎಂದು ತಿಳಿಸಿದರು.

ಅಧಿಕಾರ ಹಂಚಿಕೆ ಬಗ್ಗೆ ಮಾತನಾಡಲ್ಲ: ಅಧಿಕಾರ ಹಂಚಿಕೆ ವಿಚಾರವಾಗಿ ಎಲ್ಲವನ್ನೂ ಮಾತನಾಡಿದ್ದೇನೆ. ಇನ್ನು ಆ

ಪುಟ 2ಕ್ಕೆ

# ಮುಡಾ ಹಗರಣ ಮುಚ್ಚಲು ಯತ್ನ

## ಮಾಜಿ ಆಯುಕ್ತ ಡಿ.ಬಿ.ನಟೇಶ್ ಹಣದ ಆಮಿಷ: ಸ್ನೇಹಮಯಿ ಆರೋಪ

**ಮೈಸೂರು:** ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದ (ಮುಡಾ) ನಿವೇಶನ ಹಂಚಿಕೆ ಪ್ರಕರಣಕ್ಕೆ ಮಹತ್ವದ ತಿರುವು ಸಿಕ್ಕಿದೆ. ನನಗೆ ಹಣದ ಆಮಿಷವೊಡ್ಡಿ ಮುಡಾ ಹಗರಣವನ್ನು ಮುಚ್ಚಿ ಹಾಕುವ ಪ್ರಯತ್ನ ಮಾಡಿದ್ದಾರೆಂದು ದೂರುದಾರ ಸ್ನೇಹಮಯಿ ಕೃಷ್ಣ ಆರೋಪ ಮಾಡಿದ್ದಾರೆ.

ಮಾಜಿ ಮುಡಾ ಆಯುಕ್ತ ಡಿ.ಬಿ. ನಟೇಶ್ ಅವರು ನನ್ನನ್ನು ಸಂಪರ್ಕಿಸುವ ಪ್ರಯತ್ನ ಮಾಡಿದ್ದರು. ನನಗೆ ಹಣದ ಆಮಿಷವೊಡ್ಡಿ ಮುಡಾ ಹಗರಣವನ್ನು ಮುಚ್ಚಿ



ಹಾಕಲು ಪ್ರಯತ್ನ ನಡೆಸಿದರು ಎಂದು ಸ್ನೇಹಮಯಿ ಕೃಷ್ಣ ಆರೋಪ ಮಾಡಿದ್ದಾರೆ. ಈ ಸಂಬಂಧ ಆಡಿಯೋ ಕ್ಲಿಪ್ ಬಿಡುಗಡೆ ಮಾಡಿದ್ದಾರೆ. ಅಲ್ಲದೇ, ಸರ್ಕಾರದ ಮುಖ್ಯ ಕಾರ್ಯದರ್ಶಿ

ಪುಟ 2ಕ್ಕೆ

### ಶಾಲಿನಿ ರಜನೀಶ್ ವಿರುದ್ಧವೂ ಆರೋಪ

ರಾಜ್ಯ ಸರ್ಕಾರದ ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್ ಅವರಿಗೆ ಕೋಟ್ಯಂತರ ಹಣ ಕೊಟ್ಟು ನಟೇಶ್ ಮುಂಬಡ್ತಿ ಪಡೆದಿದ್ದಾರೆ. ಮುಂಬಡ್ತಿಗಾಗಿ ಶಾಲಿನಿ ರಜನೀಶ್ ಅವರಿಗೆ ಹಣ ನೀಡಿದ್ದಾರೆಂದು ಸ್ನೇಹಮಯಿ ಕೃಷ್ಣ ಗಂಭೀರ

ಪುಟ 2ಕ್ಕೆ

## 14ನೇ ಮಹಡಿಯಿಂದ ಬಿದ್ದು ವಿದ್ಯಾರ್ಥಿನಿ ಆತ್ಮಹತ್ಯೆ

ಬೆಂಗಳೂರು: ವಿದ್ಯಾರ್ಥಿನಿಯೊಬ್ಬಳು 14ನೇ ಮಹಡಿಯಿಂದ ಬಿದ್ದು ಸಾವನ್ನಪ್ಪಿರುವ ಘಟನೆ ನಡೆದಿದೆ. ಸರ್ಜಾಪುರದ ನಯನಾ (20) ಮೃತಪಟ್ಟಿರುವ ದುರ್ದೈವಿ. ಕಾಲೇಜು ಹಾಸ್ಟೆಲ್‌ನ 14ನೇ ಮಹಡಿಯಿಂದ ಬಿದ್ದು ವಿದ್ಯಾರ್ಥಿನಿ ಸಾವನ್ನಪ್ಪಿದ್ದಾರೆ. ದೊಡ್ಡಬಳ್ಳಾಪುರ ಹೊರವಲಯದ ನಾಗದೇನಹಳ್ಳಿ ಬಳಿ ಇರುವ ಗೀತಂ ವಿಶ್ವವಿದ್ಯಾಲಯ ಕಾಲೇಜಿನಲ್ಲಿ ಮೃತ ನಯನಾ ಕಂಪ್ಯೂಟರ್ ಸೈನ್ಸ್ ಪದವಿ ವ್ಯಾಸಂಗ ಮಾಡುತ್ತಿದ್ದರು. ಆತ್ಮಹತ್ಯೆ ಮಾಡಿಕೊಂಡಿರುವ ಶಂಕೆ ವ್ಯಕ್ತವಾಗಿದೆ. ದೊಡ್ಡಬಳ್ಳಾಪುರ ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ರಾಗಾಗೆ ಹೈಕೋರ್ಟ್ ರಿಲೀಫ್



**ಬೆಂಗಳೂರು:** ಕಳೆದ 2023ರ ವಿಧಾನಸಭಾ ಚುನಾವಣೆಯ ಸಂದರ್ಭ ದಿನಪತ್ರಿಕೆಗಳಲ್ಲಿ ಭ್ರಷ್ಟಾಚಾರದ ರೇಟ್ ಕಾರ್ಡ್ ಜಾಹೀರಾತು ಪ್ರಕಟಿಸಿದ್ದಕ್ಕಾಗಿ ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಅವರ ವಿರುದ್ಧ ದಾಖಲಿಸಿದ್ದ ಮಾನನಷ್ಟ ಮೊಕದ್ದಮೆಯನ್ನು ಕರ್ನಾಟಕ ಹೈಕೋರ್ಟ್ ಮಂಗಳವಾರ ವಜಾ ಮಾಡಿದೆ.

ಈ ಹಿಂದಿನ ಬಿಜೆಪಿ ಸರ್ಕಾರದ

ಪುಟ 2ಕ್ಕೆ

# ಮಹಿಳಾ ಮೀಸಲಾತಿ ಜಾರಿಯಾದರೆ ಮಗಳನ್ನೇ ಚುನಾವಣೆಗೆ ನಿಲ್ಲಿಸ್ತೀನಿ!

## ಸಿದ್ದರಾಮಯ್ಯ ಗಟ್ಟಿಯಾಗಿದ್ದಾರೆ । ಕೆ.ಎನ್.ರಾಜಣ್ಣ ಪ್ರತಿಕ್ರಿಯೆ

**ಬೆಂಗಳೂರು:** ವಿಧಾನಸಭೆ ಚುನಾವಣೆಯಲ್ಲಿ ಮುಂದಿನ ಬಾರಿಗೆ ಮಹಿಳಾ ಮೀಸಲಾತಿ ಜಾರಿಗೆ ಬಂದರೆ ನನ್ನ ಮಗಳನ್ನೇ ಚುನಾವಣೆಗೆ ನಿಲ್ಲಿಸುತ್ತೇನೆ ಎಂದು ಮಾಜಿ ಸಚಿವ ಕೆ.ಎನ್.ರಾಜಣ್ಣ ತಿಳಿಸಿದರು.

ಬೆಂಗಳೂರಿನಲ್ಲಿ ಮಂಗಳವಾರ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಮಹಿಳಾ ಮೀಸಲಾತಿ ಬಂದರೆ ಪುತ್ರಿ ರಶ್ಮಿ ಅವರನ್ನ ಚುನಾವಣೆಗೆ ನಿಲ್ಲಿಸುತ್ತೇನೆ ಎಂದು ಹೇಳಿದರು.

ಸಿಎಂ ಬದಲಾವಣೆ ಕುರಿತ ಚರ್ಚೆಗೆ ಪ್ರತಿಕ್ರಿಯಿಸಿದ ಅವರು, ಮಹತ್ವದ ರಾಜಕೀಯ ಬದಲಾವಣೆ ಆಗುತ್ತದೆ ಅಂತ ಅಂದುಕೊಂಡರೆ ಅದು ಸುಳ್ಳು. ಸಿದ್ದರಾಮಯ್ಯ ಗಟ್ಟಿಯಾಗಿದ್ದಾರೆ, ಬಜೆಟ್ ಮಂಡಿಸ್ತಿದ್ದಾರೆ ಅಂದರೆ ಅಷ್ಟು ಕಾನ್ಫಿಡೆನ್ಸ್ ಇದೆ ಅಂತಾಯ್ತಲ್ಲ. ಅಲ್ಲಿಗೆ ಯಥಾಸ್ಥಿತಿ ಅಂತಲೇ ಅರ್ಥ ಎಂದು ನುಡಿದರು.

ಇನ್ನೂ ಶಾಸಕರು, ಪರಿಷತ್ ಸದಸ್ಯರ ವಿದೇಶ ಪ್ರವಾ




ಸದ ವಿಚಾರಕ್ಕೆ ಸಂಬಂಧಿಸಿದಂತೆ ಮಾತನಾಡಿ, ನಾನು ಹೋದಷ್ಟು ಫಾರಿನ್ ಟ್ರಿಪ್ ಯಾರೂ ಹೋಗಲ್ಲ. ನಾನು ಯಾರನ್ನೂ ಜೊತೆಯಲ್ಲಿ ಕರಕೊಂಡೂ ಹೋಗಲ್ಲ ಬಂದ ಮೇಲೂ ಹೇಳಲ್ಲ. ದಟ್ಸ್ ಮೈ ಸ್ಟೈಲ್. ಖಾಸಗಿ ಬದುಕಿನಲ್ಲಿ ಯಾರಾದರೂ ಶಾಸಕರು ಸ್ವಂತ ಖರ್ಚಲ್ಲಿ ಹೊರಗೆ ಹೋದರೆ ಅದು ಸರಿಯಲ್ಲ ಅಂತ

# ಸಿಎಂ ಕುರ್ಚಿ ಉಳಿಸಿಕೊಳ್ಳಲು ಸರ್ಕಸ್

## ನಾಟಕ ನಿಲ್ಲಿಸಿ: ಸಿದ್ದರಾಮಯ್ಯ ವಿರುದ್ಧ ವಿಶ್ವನಾಥ್ ವಾಗ್ದಾಳಿ

ಬೆಂಗಳೂರು: ನಿಮ್ಮ ಬೆಂಬಲಿಗ ಶಾಸಕರನ್ನು ವಿದೇಶ ಪ್ರವಾಸ ಕಳುಹಿಸಿ ಜನರನ್ನು ಪೂಲ್ ಮಾಡೋಕೆ ಆಗುವುದಿಲ್ಲ ಎಂದು ಸಿಎಂ ಸಿದ್ದರಾಮಯ್ಯ ವಿರುದ್ಧ ವಿಧಾನ ಪರಿಷತ್ ಸದಸ್ಯ ಎಚ್.ವಿಶ್ವನಾಥ್ ವಾಗ್ದಾಳಿ ನಡೆಸಿದರು.

ವಿಧಾನಸೌಧದಲ್ಲಿ ಮಂಗಳವಾರ ಮಾಧ್ಯಮಗಳ ಜೊತೆ ಮಾತನಾಡಿದ ಅವರು, ಕಾಂಗ್ರೆಸ್ ಶಾಸಕರು ವಿದೇಶಿ ಪ್ರವಾಸಕ್ಕೆ ಹೋಗ್ತಿರುವ ವಿಚಾರವಾಗಿ ಪ್ರತಿಕ್ರಿಯೆ ನೀಡಿದರು. ಕರ್ನಾಟಕದ ರಾಜಕಾರಣ ಅಧೋಗತಿಗೆ ಇಳಿದಿದೆ. ಸಿದ್ದರಾಮಯ್ಯ ಅವರ ಆಡಳಿತ ನೋಡಿ ಜನ ನಗುತ್ತಿದ್ದಾರೆ. ಶಾಸಕರು ವಿದೇಶಿ ಪ್ರವಾಸಕ್ಕೆ ಯಾಕೆ ಹೋಗ್ತಾರೆ ಅಂತ ತಿಳಿದುಕೊಳ್ಳದಷ್ಟು ಜನರೇನು ದಡ್ಡರಲ್ಲ. ಕರ್ನಾಟದಲ್ಲಿ ಶೇ.90 ಸಾಕ್ಷರತೆ ಇದೆ. ಜನರಿಗೆ ನೀವು ಏನ್ ಮಾಡ್ತೀರಾ ಅರ್ಥ ಅಗುತ್ತದೆ. ಜನರನ್ನ ಸಿದ್ದರಾಮಯ್ಯ ಪೂಲ್ ಮಾಡೋಕೆ ಅಗುವುದಿಲ್ಲ ಎಂದು ಕಿಡಿಕಾರಿದರು.



ಸಿದ್ದರಾಮಯ್ಯ ಅವರೇ ಏನೇ ಇದ್ದರು ನೇರವಾಗಿ ಹೇಳಿ. ಕುರ್ಚಿ ಉಳಿಸಿಕೊಳ್ಳಲು ಈ ಸರ್ಕಸ್ ಬೇಕೇ? ಇದರಿಂದ ಜನರಿಗೆ ಏನು ಪ್ರಯೋಜನ? ಎರಡೂವರೆ ವರ್ಷದಿಂದ ಹೀಗೆ ಆಡಳಿತ ಮಾಡ್ತಾ ಇದ್ದೀರಿ. ಕರ್ನಾಟಕದಲ್ಲಿ ಆಡಳಿತವೂ ಇಲ್ಲ, ಅಭಿವೃದ್ಧಿಯೂ ಇಲ್ಲ. ಬರೀ ಕಿರುಚಾಟ, ಎರೆಚಾಟ ನಡೆಯುತ್ತಿದೆ. ಸಿದ್ದರಾಮಯ್ಯನವರೇ ಈ ನಾಟಕ ನಿಲ್ಲಿಸಿ. ಗಂಭೀರವಾಗಿ ಜನರ ಕೆಲಸ ಮಾಡಿ ಎಂದು ವಾಗ್ದಾಳಿ ನಡೆಸಿದರು. ಜನ ವೋಟ್ ಕೊಟ್ಟಿರೋದು ವಿದೇಶಕ್ಕೆ

ಪುಟ 2ಕ್ಕೆ

# ಕಟ್ಟಾ ಕಾಂಗ್ರೆಸ್ಸಿಗರು ಬೀದಿ ನಾಯಿಗಳಲ್ಲ: ನಿಯತ್ತಿನ ನಾಯಿಗಳು!

## ಕೈ ಪಾಳಯದಲ್ಲೀಗ 'ಬೀದಿ ನಾಯಿಗಳ ಕಾಳಗ' । ಎಚ್.ಸಿ.ಎಂ ಹೇಳಿಕೆ ಸೃಷ್ಟಿಸಿದ 'ವಿವಾದದ ಬೆಂಕಿ'

**ಬೆಂಗಳೂರು:** ಕಟ್ಟಾ ಕಾಂಗ್ರೆಸ್ಸಿಗರು ಯಾರೂ ಬೀದಿ ನಾಯಿಗಳಲ್ಲ. ಯಾವತ್ತಿದ್ದರೂ ಮೂಲ ಕಾಂಗ್ರೆಸ್ಸಿಗರು ನಿಯತ್ತಿನ ನಾಯಿಗಳು ಎಂದು ಮಾಜಿ ಸಂಸದ ಡಿ.ಕೆ.ಸುರೇಶ್ ಅವರು ಸಚಿವ ಎಚ್.ಸಿ.ಮಹದೇವಪ್ಪ ಹೇಳಿಕೆಗೆ ತಿರುಗೇಟು ನೀಡಿದ್ದಾರೆ. ಅಲ್ಲದೆ, ಈ ಮೂಲಕ ಸಿದ್ದರಾಮಯ್ಯ ಬಣವನ್ನು ವಲಸಿಗರು ಎಂದು ಪರೋಕ್ಷವಾಗಿ ಹೇಳಿದ್ದಾರೆ.



ನಗರದಲ್ಲಿ ಸುದ್ದಿಗೋಷ್ಠಿಯಲ್ಲಿ ಮಂಗಳವಾರ ಮಾತನಾಡಿದ ಅವರು, ನಾಯಕತ್ವ ಕುರಿತು ಚರ್ಚೆ ಮಾಡುವರನ್ನು ಬೀದಿ ನಾಯಿಗಳಿಗೆ ಹೋಲಿಸಿದ ಎಚ್.ಸಿ.ಮಹದೇವಪ್ಪ ಹೇಳಿಕೆ ಬಗ್ಗೆ ತೀವ್ರವಾಗಿ ಪ್ರತಿಕ್ರಿಯಿಸಿದರು.

ಮಹದೇವಪ್ಪ ನಾಯಿಗೆ ಹೋಲಿಕೆ ಮಾಡಿ ಮಾತನಾಡಿರುವ ಬಗ್ಗೆ ನನಗೆ ಮಾಹಿತಿ ಇಲ್ಲ. ಆದರೆ ಕಟ್ಟಾ ಕಾಂಗ್ರೆಸಿಗರು ಯಾರು ಬೀದಿ ನಾಯಿಗಳಲ್ಲ. ಬೀದಿ ನಾಯಿಗೆ ಊಟ ಹಾಕೋದು ಯಾತಕ್ಕೆ? ಅವು ನಮ್ಮನ್ನ ಕಾಯುತ್ತವೆ ಅಂಥ ತಾನೇ. ನಾಯಿಗಿರೋ ನಿಯತ್ತು ಮನುಷ್ಯರಿಗಿಲ್ಲ ಅಂತಾರೆ. ಹಲವಾರು ಸನ್ನಿವೇಶದಲ್ಲಿ ಆ ನಾಣ್ಣುಡಿ ಕೇಳಿದ್ದೇವೆ. ಕಟ್ಟಾ ಕಾಂಗ್ರೆಸಿಗರು ಯಾವತ್ತಿದ್ರೂ ಋಣ ತೀರಿಸೋ ವ್ಯಕ್ತಿತ್ವದ ನಾಯಿಗಳು, ಯಜಮಾನನ ಋಣ ತೀರಿಸೋ ನಾಯಿಗಳು ಎಂದು ಮಾರ್ಮಿಕವಾಗಿ

ಪುಟ 2ಕ್ಕೆ

### ಬೀದಿನಾಯಿಗೆ ಹೋಲಿಕೆ: ನೀವು ಕೂಡ ಶಾಸಕರಲ್ಲವೇ?

**ದಾವಣಗೆರೆ:** ಸಚಿವ ಡಾ.ಎಚ್.ಸಿ ಮಹದೇವಪ್ಪ ಅವರು ಶಾಸಕರನ್ನು ಬೀದಿನಾಯಿ ಪದ ಬಳಕೆ ಮಾಡಿ ಹೋಲಿಕೆ ಮಾಡಿರುವುದು ಸರಿಯಲ್ಲ ಎಂದು ಶಾಸಕ ಶಿವಗಂಗಾ ಬಸವರಾಜ್ ಕಿಡಿಕಾರಿದರು.

ದಾವಣಗೆರೆಯಲ್ಲಿ ಮಾಧ್ಯಮಗಳ ಜೊತೆ ಮಂಗಳವಾರ ಮಾತನಾಡಿದ ಅವರು, ಅದು ಡಿಕೆ ಬಣವೇ ಇರಬಹುದು ಅಥವಾ ಸಿದ್ದರಾಮಯ್ಯ ಬಣ ಇರಬಹುದು. ಶಾಸಕರನ್ನು ನಾಯಿಗೆ ಹೋಲಿಸಿದ್ದಾರೆ. ಅವರು ಕೂಡ ಶಾಸಕರು ತಾನೇ ಎಂದು ಪ್ರಶ್ನಿಸಿದರು.

ಈಗ ನುಡಿದಂತೆ ನಡೆಯುವವರು

ಪುಟ 2ಕ್ಕೆ

## ಮಾ.18ರಿಂದ ಪಿಯು ಪರೀಕ್ಷೆ

ಗಳು ನಡೆಯಲಿದೆ. ದ್ವಿತೀಯ ಪಿಯುಸಿ ಪರೀಕ್ಷೆಗಳು ಪ್ರತಿದಿನ ಬೆಳಗ್ಗೆ 10 ಗಂಟೆ ಯಿಂದ ಮಧ್ಯಾಹ್ನ 1 ಗಂಟೆವರೆಗೆ ನಡೆ ಯುತ್ತವೆ. ಎಸ್‌ಎಸ್‌ಎಲ್‌ಸಿ ಪರೀಕ್ಷೆಗಳು ಬೆಳಗ್ಗೆ 10ರಿಂದ ಮಧ್ಯಾಹ್ನ 1.15ರವರೆಗೆ ನಡೆಯಲಿದೆ ಎಂದು ಮಾಹಿತಿ ನೀಡಿದರ

## ನೀವು ಕೂಡ ಶಾಸಕರಲ್ಲವೇ?

ಯಾರ್ ಇರ್ತಾರೆ ಹೇಳಿ? ಗ್ರಾಮ ಪಂಚಾಯತಿ ಅಧ್ಯಕ್ಷ ಕೂಡ ಮಾತಿನ ಮೇಲೆ ನಿಲ್ಲೋದಿಲ್ಲ. ಆದರೆ, ಕಾಂಗ್ರೆಸ್ ಹೈಕಮಾಂಡ್ ಮಧ್ಯಪ್ರವೇಶಿಸಿಸ ಮುಖ್ಯಮಂತ್ರಿ ಹೇಳಿಕೆ ಗೊಂದಲಗಳನ್ನು ಇತ್ಯರ್ಥ ಮಾಡಬೇಕಿದೆ. ಹೈಕಮಾಂಡ್ ಎಲ್ಲವನ್ನೂ ಗಮನಿಸುತ್ತಿದೆ. ನಾವು ಮೊದಲ ಬಾರಿ ಶಾಸಕರಾಗಿದ್ದೇವೆ ಹೈಕಮಾಂಡ್ ಬಳಿ ಹೋಗಿ ಮಾತನಾಡುವಷ್ಟು ದೊಡ್ಡವರಲ್ಲ. ಮಾಧ್ಯಮಗಳ ಮೂಲಕ ಮನವಿ ಮಾಡಿಕೊಳ್ಳುತ್ತಿದ್ದೇವೆ ಎಂದರು. ಡಿಕೆಶಿ ಇವತ್ತೆ ಸಿಎಂ ಆಗಲಿ ಎನ್ನುವವರಲ್ಲಿ ನಾನು ಮೊದಲಿಗ. ಅಧಿಕಾರ ಹಂಚಿಕೆ ಬಗ್ಗೆ ಈಗಾಗಲೇ ನಾನು ಹೇಳಿದ್ದೇನೆ. ಈ ಸಂದರ್ಭದಲ್ಲಿ ಶಾಸಕರು ವಿದೇಶ ಪ್ರವಾಸ ಹೋಗುವ ಅವಶ್ಯಕತೆ ಇರಲಿಲ್ಲ. ಬಜೆಟ್‌ಗೆ ಮುನ್ನ ವಿದೇಶ ಪ್ರವಾಸ ಹೋಗೋದು ಸರಿಯಲ್ಲ ಎಂದು ಹೇಳಿದರು.

## ಮತ್ತಿಬ್ಬರು ಡ್ರಗ್ಸ್ ಪೆಡ್ಲರ್‌ಗಳ ಬಂಧನ

ಹಾಗೂ ಮಾದಕ ವಸ್ತುಗಳ ಸಾಗಾಟಕ್ಕೆ ಬಳಸುತ್ತಿದ್ದ 3 ಲಕ್ಷ ಮೌಲ್ಯದ ಹೊಂಡೈ ಕಾರನ್ನು ವಶಕ್ಕೆ ಪಡೆ ದುಕೊಂಡಿದ್ದಾರೆ. ಮೈಸೂರು ನಗರ ಪೊಲೀಸರು ಮೈಸೂರು ನಗರಕ್ಕೆ ಹೊರಜಿಲ್ಲೆ ಹಾಗೂ ಹೊರ ರಾಜ್ಯಗ ಳಿಂದ ಅಕ್ರಮ ಮಾದಕ ವಸ್ತುಗಳನ್ನು ಪೂರೈಕೆ ಮಾಡುವ ಜಾಲದ ಮೇಲೆ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳುತ್ತಿದ್ದಾರೆ. ಅಕ್ರಮ ಮಾದಕವಸ್ತು ಪೂರೈಕೆ ಆರೋಪಿಗಳು ಮತ್ತು ಪೆಡ್ಲರ್ ಗಳ ಕಾರ್ಯಚಟುವಟಿಕೆಗಳ ಮೇಲೆ ಕಣ್ಗಾವಲು ಮುಂದುವರೆದಿದೆ.

## ಸಿಎಂ ಕುರ್ಚಿ ಉಳಿಸಿಕೊಳ್ಳಲು ಸರ್ಕಸ್

ಹೋಗೋಕೆ ಅಲ್ಲ. ಒಬ್ಬರಿಗೊಬ್ಬರು ಕಿತ್ತಾಡಲು, ಬೈದಾಡಲು ಜನರು ಅಧಿಕಾರ ಕೊಟ್ಟಿಲ್ಲ. ಜನರ ಕೆಲಸ, ನಾಡಿನ ಅಭಿವೃದ್ಧಿಗಾಗಿ ಕೊಟ್ಟಿರುವ ವೋಟ್ ಇದು. ಅದು ಸಿದ್ದರಾಮಯ್ಯ ನಾಯಕತ್ವದಲ್ಲಿ ಮಿಸ್ ಯೂಸ್ ಆಗ್ತಿದೆ. ಇದು ಸರಿಯಲ್ಲ ಎಂದು ಅವರು ಸಿಎಂ ಸಿದ್ದರಾಮಯ್ಯ ವಿರುದ್ಧ ವಾಗ್ದಾಳಿ ನಡೆಸಿದರು.

## ಶಾಸಕರ ಪ್ರವಾಸಕ್ಕೂ ರಾಜಕೀಯಕ್ಕೂ ಏನೂ ಸಂಬಂಧವಿಲ್ಲ: ಡಾ.ಯತೀಂದ್ರ

ವಿಚಾರದಲ್ಲಿ ನಾನು ಮಾತನಾಡುವುದಿಲ್ಲ. ನವೆಂಬರ್‌ನಿಂದಲೂ ನಾನು ಹೇಳುತ್ತಾ ಬಂದಿದ್ದೇನೆ. ಇನ್ನು ನಾನು ಆ ಬಗ್ಗೆ ಏನನ್ನೂ ಮಾತನಾಡುವುದಿಲ್ಲ. ರ‍್ಯಾರೋ ಹೇಳಿರುವ ಹೇಳಿಕೆಗಳಿಗೆ ನಾನು ಉತ್ತರ ಕೊಡುವುದಿಲ್ಲ ಎಂದು ತಿಳಿಸಿದರು.

ಯತೀಂದ್ರ ವರ್ಗಾವಣೆ ಖಾತೆ ಸಚಿವ ಎಂಬ ಬಿಜೆಪಿ ಆರೋಪಕ್ಕೆ ಸಿಡಿಮಿಡಿ ವ್ಯಕ್ತಪಡಿಸಿದ ಯತೀಂದ್ರ, ಹಾದಿ ಬೀದಿಯಲ್ಲಿ ಹೋಗುವವರೆಲ್ಲ ಮಾತನಾಡಿದರೆ ಅದಕ್ಕೆ ಉತ್ತರ ಕೊಡಲು ಆಗುವುದಿಲ್ಲ. ಅವರ ಆರೋಪಕ್ಕೆ ಒಂದಾದರೂ ಪುರಾವೆ ಇದೆಯೇ? ಪ್ರತಾಪ್ ಸಿಂಹ, ಯತ್ನಾಳ್‌ಗೆ ಮಾಡಲು ಕೆಲಸ ಇಲ್ಲ. ಬಿಜೆಪಿ ಐಟಿ ಸೆಲ್‌ನವರೂ ಏನೇನ್ನೋ ತಿರುಚುತ್ತಾರೆ. ಇದಕ್ಕೆಲ್ಲ ಉತ್ತರ ಕೊಡುತ್ತಾ ಕುಳಿತುಕೊಳ್ಳಲು ಸಾಧ್ಯವಿಲ್ಲ ಎಂದು ಕಿಡಿಕಾರಿದರು.

## ಕಟ್ಟಾ ಕಾಂಗ್ರೆಸ್ಸಿಗರು ಬೀದಿ ನಾಯಿಗಳಲ್ಲ

ತಿರುಗೇಟು ನೀಡಿದರು. ಕಾಂಗ್ರೆಸ್ ಪಕ್ಷಕ್ಕೆ ಹೊರಗಿನಿಂದ ಬಂದವರಿಗೆ ನಿಯತ್ತು ಇರಲ್ವಾ? ಎಂಬ ಪ್ರಶ್ನೆಗೆ ಉತ್ತರಿಸಿದ ಡಿಕೆ ಸುರೇಶ್ ಅವರು, ನಾನು ಆ ರೀತಿ ಏನು ಹೇಳಿಲ್ಲ. ನಾನು ಹೇಳಿದ್ದು ಇಷ್ಟೇ. ಕಟ್ಟಾ ಕಾಂಗ್ರೆಸಿಗರು ನಿಯತ್ತಿನ ನಾಯಿಗಳು. ಯಜಮಾನನ ಋಣ ತೀರಿಸುತ್ತವೆ. ಬೇರೆ ಏನು ಮಾಡಲ್ಲ. ಅದರ ಸ್ವಭಾವವೇ ಹಾಗೇ. ಬೀದಿ ನಾಯಿಯನ್ನೂ ಮನೆಯಲ್ಲೂ ಸಾಕ್ತಾರೆ. ಏತಕ್ಕೆ ಸಾಕ್ತಾರೆ? ನಿಯತ್ತಿಗಾಗಿ ಸಾಕ್ತಾರೆ. ಆ ವಿಶ್ವಾಸ ಕಾಪಾಡುತ್ತೆ ಅಂತಾ ಅಷ್ಟೇ. ಬೀದಿ ನಾಯಿಗೂ ಹೋಗಿ ಊಟ ಹಾಕ್ತಾರೆ, ಯಾಕೆ ಅಂದ್ರೆ ಅದು ನಮ್ಮನ್ನ ಕಾಪಾಡುತ್ತವೆ ಅಂತ ಎಂದು ಹೇಳಿದರು.

## ಮಹಿಳಾ ಮೀಸಲಾತಿ ಜಾರಿಯಾದರೆ ಮಗಳನ್ನೇ ಚುನಾವಣೆಗೆ ನಿಲ್ಲಿಸ್ತೀನಿ!

ಅವಹೇಳನ ಮಾಡುವುದು ಯಾಕೆ? ರಾಜಕೀಯ ಅರ್ಥವನ್ನ ಯಾವ ಯಾವ ರೀತಿ ಅರ್ಥೈಸ್ತೀರೋ ಗೊತ್ತಿಲ್ಲ. ಪಾಲಿಟಿಕ್ಸ್ ಪ್ರತಿಯೊಂದರಲ್ಲೂ ಇದ್ದೇ ಇರುತ್ತದೆ. ವಿದೇಶ ಪ್ರವಾಸಕ್ಕೆ ಹೋಗಿ ಬರಲಿ, ಅದನ್ನು ತಪ್ಪು ಎನ್ನುವುದು ಸರಿಯಲ್ಲ ಎಂದು ವಿಪಕ್ಷಗಳಿಗೆ ತಿರುಗೇಟು ನೀಡಿದರು.

## ರಾಗಾಗೆ ಹೈಕೋರ್ಟ್ ರಿಲೀಫ್

ವಿರುದ್ಧ ಕಾಂಗ್ರೆಸ್ ಬಿಡುಗಡೆ ಮಾಡಿದ್ದ ಕರಪ್ಶನ್ ರೇಟ್ ಕಾರ್ಡ್ ಜಾಹೀರಾತನ್ನು ಸಾಮಾಜಿಕ ಜಾಲತಾಣದಲ್ಲಿ ಹಂಚಿಕೊಂಡಿದ್ದ ರಾಹುಲ್ ಗಾಂಧಿ ವಿರುದ್ಧ ಬಿಜೆಪಿ ಪರವಾಗಿ ಕೇಶವಪ್ರಸಾದ್ ಎಂಬುವವರು ಮಾನನಷ್ಟ ಮೊಕದ್ದಮೆ ದಾಖಲಿಸಿದ್ದರು.

ಇದನ್ನು ಪ್ರಶ್ನಿಸಿ ರಾಹುಲ್ ಗಾಂಧಿ ಹೈಕೋರ್ಟ್ ಮೆಟ್ಟಿಲೇರಿದ್ದರು. ಅರ್ಜಿಯ ವಿಚಾರಣೆ ನಡೆಸಿದ ನ್ಯಾಯಮೂರ್ತಿ ಸುನೀಲ್ ದತ್ ಯಾದವ್ ಅವರಿದ್ದ ಹೈಕೋರ್ಟ್ ಪೀಠ, ಪ್ರಕರಣದ ಸ್ವರೂಪ ಮತ್ತು ದಾಖಲೆಗಳನ್ನು ಪರಿಗಣಿಸಿ ಮಾನನಷ್ಟ ಮೊಕದ್ದಮೆಯನ್ನು ರದ್ದುಗೊಳಿಸಿ ಆದೇಶ ಹೊರಡಿಸಿದ್ದಾರೆ.

## 6 ಸೆಕೆಂಡ್ ಆಡಿಯೋ ಬಿಡುಗಡೆ

ವ್ಯಕ್ತಿಯೊಬ್ಬರ ಜೊತೆ ಮಾತನಾಡಿದ್ದರೆ ಎನ್ನಲಾಗುತ್ತಿರುವ ಆಡಿಯೋ ಬಿಡುಗಡೆ ಮಾಡಿದ್ದಾರೆ.

## ಸಮಯ ಬಂದಾಗ ಸಿದ್ದು ಸಂದೇಶ

ದುರುಪಯೋಗ ಮಾಡಿಕೊಂಡಿದ್ದರು ಎಂದು ಆರೋಪಿಸಿದರು. ಬಿಜೆಪಿ ಜಾಗ ಮಂಜೂರು ಮಾಡದೇ ಆರ್ ಎಸ್ ಎಸ್ ಕಚೇರಿ ಹೇಗೆ ನಿರ್ಮಾಣವಾಯಿತು? ಸದಾಶಿವನಗರದಲ್ಲಿ ನಮ್ಮ ಮನೆಯ ಪಕ್ಕದಲ್ಲಿರುವ ಪಾರ್ಕ್ ಅನ್ನು ವೆಲ್ ನೆಸ್ ಸೆಂಟರ್ ಯೋಗಾ ಕಚೇರಿಗೆ ನೀಡಿದ್ದಾರೆ. ಇಂತಹ ನೂರಾರು ಉದಾಹರಣೆಗಳನ್ನು ನಾನು ನೀಡಬಲ್ಲೆ. ಬಿಜೆಪಿಯವರು ಏನಾದರೂ ಆರೋಪ ಮಾಡಿಕೊಳ್ಳಲಿ. ನಾವು ನಮ್ಮ ಪಕ್ಷದ ದೇವಾಲಯವನ್ನು ಕಟ್ಟಲು ಈ ತೀರ್ಮಾನಕ್ಕೆ ಬಂದಿದ್ದೇವೆ. ನಾನು ಇದನ್ನು ಮಾಡಿಯೇ ಮಾಡುತ್ತೇನೆ. ಎಲ್ಲಾ ಮಾನದಂಡಗಳು, ಅರ್ಹತೆ ಆಧಾರದ ಮೇಲೆ ನಾವು ಈ ಜಾಗವನ್ನು ಮಂಜೂರು ಮಾಡುತ್ತಿದ್ದೇವೆ. ಈ ಬಗ್ಗೆ ಯಾರಾದರೂ ನ್ಯಾಯಾಲಯದ ಮೆಟ್ಟಿಲೇರುವುದಾದರೆ ಹತ್ತಲಿ ಎಂದು ಡಿ.ಕೆ.ಶಿವಕುಮಾರ್ ಸವಾಲು ಹಾಕಿದರು.

## ಮುಡಾ ಹಗರಣ ಮುಚ್ಚಲು ಯತ್ನ


ಶಾಲಿನಿ ರಜನೀಶ್ ವಿರುದ್ಧವೂ ಸ್ನೇಹಮಯಿ ಕೃಷ್ಣ ಕಮಿಷನ್ ಆರೋಪದ ಬಾಂಬ್ ಸಿಡಿಸಿದ್ದಾರೆ. ಮುಡಾ ನಿವೇಶನ ಹಂಚಿಕೆ ವೇಳೆ ನಿಯಮ ಗಾಳಿಗೆ ತೂರಿ ಬೇಕಾಬಿಟ್ಟಿ ಸೈಟು ಹಂಚಿದ್ದ ಆರೋಪ ಡಿಬಿ ನಟೇಶ್ ಮೇಲಿದೆ. ಸದ್ಯ ಅವರು ಲೋಕಾಯುಕ್ತ ಹಾಗೂ ಇಡಿ ತನಿಖೆ ಎದುರಿಸುತ್ತಿದ್ದಾರೆ. ಹಗರಣ ಬೆಳಕಿಗೆ ಬಂದ ಸಂದರ್ಭದಲ್ಲಿ ನಟೇಶ್ ಅವರು ಆಪ್ತರಿಗೆ ಕರೆ ಮಾಡಿ ಮಾತಾಡಿ, ಸ್ನೇಹಮಯಿ ಕೃಷ್ಣ ಅವರನ್ನು ಭೇಟಿ ಮಾಡಿಸಿ ಮಾತಾಡೋಣ ಎಂದಿದ್ದಾರಂತೆ. ಇದಕ್ಕೆ ಸಂಬಂಧಿಸಿದ ಆಡಿಯೋ ಕ್ಲಿಪ್ ಅನ್ನು ಸ್ನೇಹಮಯಿ ಬಿಡುಗಡೆ ಮಾಡಿದ್ದಾರೆ. ಡಿಬಿ ನಟೇಶ್ ಅವರು ನನ್ನನ್ನು ಯಾಕೆ ನೋಡಬೇಕು, ನನ್ನ ಜೊತೆ ನಟೇಶ್ ಗೆ ಎಂಥಾ ಮಾತು ಎಂದು ಸ್ನೇಹಮಯಿ ಪ್ರಶ್ನೆ ಮಾಡಿದ್ದಾರೆ.

## ಶಾಲಿನಿ ರಜನೀಶ್ ವಿರುದ್ಧವೂ ಆರೋಪ

ಆರೋಪ ಮಾಡಿದರು. ಆರೋಪಕ್ಕೆ ಅಗತ್ಯವಾದ ದಾಖಲೆಗಳು ನನ್ನ ಬಳಿ ಇವೆ. ಎಲ್ಲವನ್ನೂ ಕೂಡ ನಾನು ಕೋರ್ಟ್ ಗೆ ಸಲ್ಲಿಸುತ್ತೇನೆ. ಮುಡಾದಲ್ಲಿ ಆಯುಕ್ತರಾಗಿದ್ದ ದಿನೇಶ್ ಅವರನ್ನು ಸಸ್ಪೆಂಡ್ ಮಾಡಿ ನಟೇಶ್ ಗೆ ಮುಂಬಡ್ತಿ ಕೊಟ್ಟಿದ್ದಾರೆ. ಹಣದ ವಹಿವಾಟು ಬಗ್ಗೆಯೂ ನಾನು ಕೋರ್ಟ್ ನಲ್ಲಿ ಹೇಳುತ್ತೇನೆ. ಈ ಕುರಿತು ಶಾಲಿನಿ ರಜನೀಶ್ ಅವರಿಗೆ ಪತ್ರ ಬರೆದಿದ್ದೇನೆ. ಈಗ ಹಣ ಪಡೆದು ಮುಂಬಡ್ತಿ ಕೊಟ್ಟಿಲ್ಲ ಅಂತ ಶಾಲಿನಿ ರಜನೀಶ್ ಅವರು ಹೇಳಲಿ ಎಂದು ಸ್ನೇಹಮಯಿ ಕೃಷ್ಣ ಸವಾಲು ಹಾಕಿದರು.

# ಬೆಂಬಲ ಬೆಲೆ ಯೋಜನೆಯಡಿ ಕಡಲೆಕಾಳು ಖರೀದಿ ಕೇಂದ್ರ : ನೋಂದಣಿ ಕಾರ್ಯ ಆರಂಭ

**ಚಾಮರಾಜನಗರ:** ಕೇಂದ್ರ ಸರ್ಕಾರದ ಬೆಂಬಲ ಬೆಲೆ ಯೋಜನೆಯಡಿ ಹಿಂಗಾರು ಹಂಗಾಮಿನ ಎಫ್.ಎ.ಕ್ಯೂ ಗುಣಮಟ್ಟದ ಕಡಲೆಕಾಳು ಖರೀದಿಸಲು ಜಿಲ್ಲೆಯ ವಿವಿಧೆಡೆ ಖರೀದಿ ಕೇಂದ್ರಗಳನ್ನು ತೆರೆಯಲಾಗಿದ್ದು, ಫೆಬ್ರವರಿ 17ರಿಂದ ರೈತರ ನೋಂದಣಿ ಕಾರ್ಯ ಪ್ರಾರಂಭವಾಗಿದೆ. ಚಾಮರಾಜನಗರ, ಗುಂಡ್ಲುಪೇಟೆ, ಕೊಳ್ಳೆಗಾಲ, ಹನೂರು ತಾಲೂಕು ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ಪ್ರಾಂಗಣಗಳಲ್ಲಿ ಖರೀದಿ ಕೇಂದ್ರಗಳನ್ನು ತೆರೆಯಲಾಗಿದ್ದು, ರೈತರು ನೋಂದಣಿ ಮಾಡಿಕೊಳ್ಳಬಹುದು. ಕಡಲೆಕಾಳು ಖರೀದಿಸಲು ಕೇಂದ್ರ ಸರ್ಕಾರವು ಪ್ರತಿ ಕ್ವಿಂಟಾಲ್‌ಗೆ 5,875 ರೂ. ದರ ನಿಗದಿಪಡಿಸಿದ್ದು, ಕರ್ನಾಟಕ ರಾಜ್ಯ ಸಹಕಾರ ಮಾರಾಟ ಮಹಾಮಂಡಳ ನಿಯಮಿತ ಸಂಸ್ಥೆ ವತಿಯಿಂದ ಖರೀದಿ ಮಾಡಲಾಗುವುದು. ನೋಂದಣಿ ಪ್ರಕ್ರಿಯೆಗೆ ರೈತರು ಪಹಣ /ಆರ್‌ಟಿಸಿ, ಆಧಾರ್ ಮತ್ತು ಬ್ಯಾಂಕ್ ಪಾಸ್ ಪುಸ್ತಕದ ಜೆರಾಕ್ಸ್ (ಆಧಾರ್ ಜೋಡಣೆ ಕಡ್ಡಾಯ) ಭಾವಚಿತ್ರ ಹಾಗೂ ಫ್ರೂಟ್ಸ್ ತಂತ್ರಾಂಶದ ರೈತ ನೋಂದಣ ಸಂಖ್ಯೆ (ಎಐಡಿ) ಯನ್ನು ಕಡ್ಡಾಯವಾಗಿ ತರಬೇಕು. ಹೋಬಳಿ ಮಟ್ಟದ ರೈತ ಸಂಪರ್ಕ ಕೇಂದ್ರ ಅಥವಾ ತಾಲೂಕಿನ ಕೃಷಿ ಇಲಾಖೆಯಿಂದ ಫ್ರೂಟ್ಸ್ ತಂತ್ರಾಂಶದ ರೈತ ನೋಂದಣ ಸಂಖ್ಯೆ (ಎಐಡಿ) ಯನ್ನು ಪಡೆಯಬೇಕು. ಕಡಲೆಕಾಳು ಬೆಳೆದು ಬೆಳೆ ಸಮೀಕ್ಷೆಯಲ್ಲಿ ಕಡಲೆಕಾಳು ಬೆಳೆ ಎಂದು ಆರ್‌ಟಿಸಿ ವಾರು ನಮೂದಾಗಿರುವ ರೈತರು ಮಾತ್ರ ಯೋಜನೆಗೆ ಅರ್ಹರಾಗಿರುತ್ತಾರೆ. ಯೋಜನೆಯಡಿಯಲ್ಲಿ ಎಕರೆಗೆ 4 ಕ್ವಿಂಟಾಲ್ ಹಾಗೂ ಪ್ರತಿ ರೈತರಿಂದ 40 ಕ್ವಿಂಟಾಲ್ ಪ್ರಮಾಣದ ಎಫ್.ಎ.ಕ್ಯೂ ಗುಣಮಟ್ಟದ ಕಡಲೆಕಾಳನ್ನು ಮಾತ್ರ ಖರೀದಿಸಲಾಗುವುದು. ರೈತರ ಹೆಸರಿನ ಆಧಾರ್ ಸಂಖ್ಯೆಗೆ ಜೋಡಣೆಗೊಂಡ ಬ್ಯಾಂಕ್ ಖಾತೆಗೆ ಮಾತ್ರ ಡಿಬಿಟಿ ಮುಖಾಂತರ ಹಣ ಪಾವತಿಸಲಾಗುವುದು. ರೈತರ ನೋಂದಣ ಕಾರ್ಯವು ಫೆಬ್ರವರಿ 17 ರಿಂದ ಪ್ರಾರಂಭಗೊಳ್ಳುತ್ತಿದ್ದು, ಜಿಲ್ಲೆಯ ಎಲ್ಲಾ ರೈತ ಬಾಂಧವರು ಕೇಂದ್ರ ಸರ್ಕಾರದ ಬೆಂಬಲ ಬೆಲೆ ಯೋಜನೆಯಡಿ ಕಡಲೆಕಾಳು ಖರೀದಿ ಕೇಂದ್ರದಲ್ಲಿ ನೋಂದಣ ಮಾಡುವ ಮೂಲಕ ಯೋಜನೆಯನ್ನು ಸದುಪಯೋಗಪಡಿಸಿಕೊಳ್ಳಬೇಕು. ಹೆಚ್ಚಿನ ಮಾಹಿತಿಗಾಗಿ ಚಾಮರಾಜನಗರ ಕೃಷಿ ಇಲಾಖೆಯ ಜಂಟಿ ನಿರ್ದೇಶಕರು, ಕೃಷಿ ಮಾರಾಟ ಇಲಾಖೆಯ ಉಪ ನಿರ್ದೇಶಕರು ಹಾಗೂ ರಾಜ್ಯ ಸಹಕಾರ ಮಾರಾಟ ಮಹಾ ಮಂಡಳದ ಚಾಮರಾಜನಗರದ ಶಾಖಾ ವ್ಯವಸ್ಥಾಪಕರು ಮೊ.ಸಂ 9449864455 ಸಂಪರ್ಕಿಸಬಹುದು. ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಯ ಚಾಮರಾಜನಗರ ಕಾರ್ಯದರ್ಶಿ ಮೊ.ಸಂ 7406474389, ಗುಂಡ್ಲುಪೇಟೆ ಕಾರ್ಯದರ್ಶಿ ಮೊ.ಸಂ 9844211885, ಕೊಳ್ಳೇಗಾಲ ಕಾರ್ಯದರ್ಶಿ ಮೊ.ಸಂ 8762898394, ಹನೂರು ಕಾರ್ಯದರ್ಶಿ ಮೊ.ಸಂ 9686707090 ಸಂಪರ್ಕಿಸಬಹುದು ಎಂದು ಪ್ರಕಟಣೆ ತಿಳಿಸಿದೆ.



ಕೆ.ಎಸ್.ಎಂ.ಸಿ.ಎ ಸಂಸ್ಥೆಯ ನೂತನ ವ್ಯವಸ್ಥಾಪಕ ನಿರ್ದೇಶಕರಾಗಿ ಅಧಿಕಾರ ವಹಿಸಿಕೊಂಡ ಬಿ. ಆನಂದ್ ಅವರಿಗೆ ಕಾರವಾರ ವಿಧಾನಸಭಾ ಕ್ಷೇತ್ರದ ಶಾಸಕ, ಹಾಗೂ ಕೆಎಂಸಿಎ ಅಧ್ಯಕ್ಷ ಸತೀಶ ಕೃಷ್ಣ ಸೈಲ್ ಅವರು ಸ್ವಾಗತಿಸುತ್ತಿಸಿದರು.

# ಕೆಪಿಎಸ್ ಮ್ಯಾಗ್ನೆಟ್ ಶಾಲೆಗೆ ಸರ್ಕಾರಿ ಶಾಲೆಗಳ ವಿಲೀನಕ್ಕೆ ವಿರೋಧ

## ತಮ್ಮನಾಯ್ಕನಹಳ್ಳಿ, ದಾಸೇಗೌಡನದೊಡ್ಡಿಗಳಲ್ಲಿ ಪೋಷಕರ ವಿರೋಧ

**ರಾಮನಗರ:** ಕೆ.ಪಿ.ಎಸ್ ಮ್ಯಾಗ್ನೆಟ್ ಶಾಲೆ ಯೋಜನೆಯ ನೆಪದಲ್ಲಿ ತಾಲ್ಲೂಕಿನ ವಿವಿಧ ಗ್ರಾಮಗಳಲ್ಲಿರುವ ಸರ್ಕಾರಿ ಶಾಲೆಗಳನ್ನು ಮುಚ್ಚಲಾಗುತ್ತಿದೆ. ಇದು ಬಡ ಮಕ್ಕಳ ಶಿಕ್ಷಣದ ಹಕ್ಕನ್ನು ಕಸಿದುಕೊಳ್ಳುವ ಪ್ರಯತ್ನ ಎಂದು ಆಲ್ ಇಂಡಿಯಾ ಡೆಮಾಕ್ರಟಿಕ್ ಸ್ಟೂಡೆಂಟ್ಸ್ ಆರ್ಗನೈಸೇಷನ್ (ಎ.ಐ.ಡಿ.ಎಸ್.ಒ) ಸಂಘಟನೆ ಆರೋಪಿಸಿದ್ದು, ಪೋಷಕರು ಮತ್ತು ವಿದ್ಯಾರ್ಥಿಗಳ ಪ್ರತಿಭಟನಾ ಸಭೆಗಳನ್ನು ಆಯೋಜಿಸುವ ಮೂಲಕ ಸರ್ಕಾರದ ಗಮನವನ್ನು ಸೆಳೆಯುತ್ತಿದೆ.

ತಾಲ್ಲೂಕಿನ ತಮ್ಮನಾಯಕನಹಳ್ಳಿ ಮತ್ತು ತಮ್ಮನಾಯಕನಹಳ್ಳಿ ಕಾಲೋನಿಯ ಸರ್ಕಾರಿ ಶಾಲೆಗಳನ್ನು ಕೂನಗಲ್ ಕೆಪಿಎಸ್ ಮ್ಯಾಗ್ನೆಟ್ ಶಾಲೆಗೆ ವಿಲೀನ ಮಾಡುವುದನ್ನು ವಿರೋಧಿಸಿ ಪ್ರತಿಭಟನೆ ನಡೆಸಲಾಯಿತು.

**ಎ.ಐ.ಡಿ.ಎಸ್.ಒ ಸಂಘಟನೆಯ ನೇತೃತ್ವ**

ಈ ವೇಳೆ ಮಾತನಾಡಿದ ಸಂಘಟನೆಯ ಜಿಲ್ಲಾ ಸೆಕ್ರೆಟೇರಿಯಟ್ ಸದಸ್ಯ ನವಾಜ್, ಸರ್ಕಾರಿ ಶಾಲೆಗಳು ನಮ್ಮ ಹಳ್ಳಿಗಳ ಸಾಮಾಜಿಕ ಕೇಂದ್ರ ಗಳಾಗಿವೆ. 80ಕ್ಕೂ ಹೆಚ್ಚು ಮಕ್ಕಳಿರುವ ಸಣ್ಣ ಶಾಲೆಗಳನ್ನು ಮುಚ್ಚುವುದು ಬಡ ಮಕ್ಕಳ ಶಿಕ್ಷಣದ ಹಕ್ಕನ್ನು ಕಸಿದುಕೊಳ್ಳುವ ಪ್ರಯತ್ನವಾಗಿದೆ ಎಂದು ದೂರಿದರು. ಕೆಪಿಎಸ್–ಮ್ಯಾಗ್ನೆಟ್ ಯೋಜನೆ ಮತ್ತು ಪಿಪಿಪಿ ಮಾದರಿಯ ಮೂಲಕ ಶಿಕ್ಷಣವನ್ನು ವ್ಯಾಪಾರೀಕರಣಗೊಳಿಸುವ ಸರ್ಕಾರದ ಸಂಚನ್ನು ನಾವೆಲ್ಲರೂ ವಿರೋಧಿಸಬೇಕು ಎಂದು ಅವರು ಪೋಷ ಕರು, ನಾಗರೀಕರಿಗೆ ಮನವಿ ಮಾಡಿದರು. ರಾಜ್ಯದಲ್ಲಿ ಕೇವಲ 700 ಶಾಲೆಗಳಿಗಾಗಿ ಸಾಲ ಪಡೆದು ಕೆಪಿಎಸ್ ಶಾಲೆಗಳನ್ನು ಸ್ಥಾಪಿಸಲಾಗುತ್ತಿದೆ. ಗ್ರಾಮಗಳಲ್ಲಿ ಶಾಲೆಗಳನ್ನು ಮುಚ್ಚಿ, ಕೆಪಿಎಸ್ ಶಾಲೆಗಳಿಗೆ ವಾಹನದಲ್ಲಿ ಕರೆದೊಯ್ಯುವುದಾಗಿ ಸರ್ಕಾರ ಹೇಳುತ್ತಿದೆ. ದೂರದ ಶಾಲೆಗಳಿಗೆ ಬಸ್‌ನಲ್ಲಿ ಮಕ್ಕಳನ್ನು ಕಳುಹಿಸುವುದು ಸುರಕ್ಷಿತವಲ್ಲ ಮತ್ತು ಇದು ಕೇವಲ ಜನರನ್ನು ಮರಳು ಮಾಡುವ ತಂತ್ರ ಎಂದರು. ಕೆಪಿಎಸ್ ಮ್ಯಾಗ್ನೆಟ್ ಶಾಲೆಗೆ ವಿರೋಧ ವ್ಯಕ್ತಪಡಿಸಿ ಚನ್ನಪಟ್ಟಣದ ಪೋಷಕರು ತಮ್ಮ ವಿರೋಧ ವ್ಯಕ್ತಪಡಿಸಿದ್ದಾರೆ. ತಮ್ಮ ಗ್ರಾಮಗಳಲ್ಲಿ ಸರ್ಕಾರಿ ಶಾಲೆಗಳನ್ನು ಉಳಿಸಿಕೊಳ್ಳಲು ಹೋರಾಟ ನಡೆಸಿದ್ದಾರೆ. ನೀವೂ ಸಹ ನಿಮ್ಮ ಊರಿನ ಶಾಲೆ ಉಳಿಸಿಕೊಳ್ಳಲು ಬಲಿಷ್ಠವಾದ ಹೋರಾಟದ ಅಗತ್ಯವಿದೆ ಎಂದರು.




### ದಾಸೇಗೌಡನದೊಡ್ಡಿ ಗ್ರಾಮದಲ್ಲೂ ಸಭೆ

ರಾಮನಗರ ತಾಲೂಕಿನ ದಾಸೇಗೌಡನಹಳ್ಳಿಯಲ್ಲಿಯೂ ಎ.ಐ.ಡಿ.ಎಸ್.ಒ ಸಂಘಟನೆಯ ಪದಾಧಿಕಾರಿಗಳು ವಿದ್ಯಾರ್ಥಿಗಳು ಮತ್ತು ಪೋಷಕರ ಪ್ರತಿಭಟನಾ ಸಭೆಯನ್ನು ನಡೆಸಿದರು. ದಾಸೇಗೌಡನಹಳ್ಳಿಯ ಸರ್ಕಾರಿ ಶಾಲೆಯನ್ನು 'ಕೋನ್ಗಲ್ಲು ಕೆಪಿಎಸ್–ಮ್ಯಾಗ್ನೆಟ್' ಶಾಲೆಗೆ ವಿಲೀನ ಮಾಡುವುದನ್ನು ವಿರೋಧಿಸಿ ಪ್ರತಿಭಟಿಸಿದರು.

ಈ ವೇಳೆ ಮಾತನಾಡಿದ ಬೆಂಗಳೂರು ಜಿಲ್ಲಾ ಸೆಕ್ರೆಟೇರಿಯಟ್ ಮಂಡಳಿಯ ಸದಸ್ಯೆ ತುಳಸಿ, ಎಲ್ಲ ಸರ್ಕಾರಗಳು ಶಿಕ್ಷಣವನ್ನು ಮಾರಾಟದ ವಸ್ತುವನ್ನಾಗಿ ಮಾಡಿವೆ. ಶಿಕ್ಷಕರಿಗೆ ಶೈಕ್ಷಣಿಕ ಕೆಲಸಕ್ಕಿಂತ ಹೆಚ್ಚಾಗಿ ಜನಗಣತಿ, ಬೀದಿ ನಾಯಿಗಳ ಎಣಿಕೆಯಂತಹ ಕೆಲಸಗಳನ್ನು ನೀಡುವ ಮೂಲಕ ಸರ್ಕಾರಿ ಶಿಕ್ಷಣ ವ್ಯವಸ್ಥೆಯನ್ನು ದುರ್ಬಲಗೊಳಿಸುತ್ತಿವೆ ಎಂದು ದೂರಿದರು. ಸರಿಯಾದ ಮೂಲಸೌಕರ್ಯ ಮತ್ತು ಶಿಕ್ಷಕರನ್ನು ನೀಡದೆ, ಸರ್ಕಾರಿ ಶಾಲೆಗಳಲ್ಲಿ ದಾಖಲಾತಿ ಕಡಿಮೆ ಇದೆ ಎಂಬ ನೆಪವೊಡ್ಡಿ, ಪ್ರತಿ ಗ್ರಾಮ ಪಂಚಾಯಿತಿಗೆ ಒಂದು ಕೆಪಿಎಸ್–ಮ್ಯಾಗ್ನೆಟ್ ಶಾಲೆ ಸ್ಥಾಪಿಸಿ ರಾಜ್ಯದ 40 ಸಾವಿರ ಶಾಲೆಗಳನ್ನು ಮುಚ್ಚಲು ಹೊರಟಿರುವುದು ರೈತ–ಕಾರ್ಮಿಕರ ಮಕ್ಕಳಿಗೆ ಮಾಡುವ ದೊಡ್ಡ ದ್ರೋಹ ಎಂದು ಆಕ್ರೋಶ ವ್ಯಕ್ತಪಡಿಸಿದರು. ಸಭೆಯ ಅಧ್ಯಕ್ಷತೆಯನ್ನು ಸಂಘಟನೆಯ ರಾಜ್ಯ ಸೆಕ್ರೆಟೇರಿಯಟ್ ಸದಸ್ಯೆ ಪ್ರಕೃತಿ ಎಸ್.ವಹಿಸಿದ್ದರು. ಜಿಲ್ಲಾ ಸಂಚಾಲಕ ರೋಹಿತ್.ಎಂ.ಆರ್ ಉಪಸ್ಥಿತರಿದ್ದರು.

# ಅಸಂಘಟಿತ ವಲಯದ ಕಾರ್ಮಿಕರಿಗೆ ಪಿಂಚಣಿ

**ಚಾಮರಾಜನಗರ:** ಕಾರ್ಮಿಕರಿಗೆ ಅವರ ಜೀವನ ಸಂಧ್ಯಾ ಕಾಲದಲ್ಲಿ ಪೋಷಿಸಿಕೊಳ್ಳಲು ನೆರವಾಗುವ ಪ್ರಧಾನಮಂತ್ರಿ ಶ್ರಮಯೋಗಿ ಮಾನ್ ಧನ್ ಪಿಂಚಣ ಯೋಜನೆಯ ಸೌಲಭ್ಯವನ್ನು ಅರ್ಹರೆಲ್ಲರು ಪಡೆಯಲು ಅನುಕೂಲವಾಗಲು ಇಲಾಖೆಗಳು ಕ್ರಮವಹಿಸುವಂತೆ ಜಿಲ್ಲಾಧಿಕಾರಿ ಶ್ರೀರೂಪ ಅವರು ಸೂಚನೆ ನೀಡಿದರು.

ನಗರದ ಜಿಲ್ಲಾಡಳಿತ ಭವನದಲ್ಲಿರುವ ವೀಡಿಯೋ ಕಾನ್ಫರೆನ್ಸ್ ಸಭಾಂಗಣದಲ್ಲಿಂದು ಪ್ರಧಾನಮಂತ್ರಿ ಶ್ರಮಯೋಗಿ ಮಾನ್ ಧನ್ ಯೋಜನೆಯಡಿ ನೀಡಲಾಗುವ ಪಿಂಚಣ ಯೋಜನೆಗೆ ನೊಂದಾಯಿಸುವ ಸಂಬಂಧ ನಡೆದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.



ಗೃಹ ಆಧಾರಿತ ಕಾರ್ಮಿಕರು, ಬೀದಿಬದಿ ವ್ಯಾಪಾರಿಗಳು, ಬಿಸಿಯೂಟ ಸಿದ್ದಪಡಿಸುವವರು, ಹಮಾಲಿಗಳು, ಇಟ್ಟಿಗೆ ಭಟ್ಟಿ ಕಾರ್ಮಿಕರು, ಚಮ್ಮಾರರು, ಚಿಂದಿ ಆಯುವವರು, ಮನೆ ಕೆಲಸದವರು, ಅಗಸರು, ರಿಕ್ಷಾ ಚಾಲಕರು, ಭೂ ರಹಿತ ಕಾರ್ಮಿಕರು, ಸ್ವಯಂ ಉದ್ಯೋಗಿಗಳು, ಕೃಷಿ ಕಾರ್ಮಿಕರು, ಕಟ್ಟಡ, ಕೈಮಗ್ಗ, ಚರ್ಮೋದ್ಯಮ, ಧ್ವನಿ ಮತ್ತು ದೃಶ್ಯ, ಬೀಡಿ ಕಾರ್ಮಿಕರು ಮತ್ತು ಇತರೆ ವೃತ್ತಿಯಲ್ಲಿ ಅಸಂಘಟಿತ ಕಾರ್ಮಿಕರು ಕೆಲಸ ನಿರ್ವಹಿಸುತ್ತಿದ್ದಾರೆ. ಇಂತಹ ಅಸಂಘಟಿತ ವಲಯದ ಕಾರ್ಮಿಕರಿಗೆ ಸಾಮಾಜಿಕ ಭದ್ರತೆ ಕಲ್ಪಿಸುವ ಉದ್ದೇಶದಿಂದ ಪಿಂಚಣ ಯೋಜನೆ ಜಾರಿಗೆ ಬಂದಿದೆ ಎಂದರು. ಅಸಂಘಟಿತ ವಲಯದ ಕಾರ್ಮಿಕರು ಜಿಲ್ಲೆಯಲ್ಲಿ ಸಾಕಷ್ಟು ಸಂಖ್ಯೆಯಲ್ಲಿ ಇದ್ದಾರೆ. ಇವರಿಗೆ 60 ವರ್ಷ ಪೂರ್ಣಗೊಂಡ ಬಳಿಕ ತಿಂಗಳಿಗೆ 3 ಸಾವಿರ ರೂ. ಖಚಿತ ಕನಿಷ್ಠ ಮಾಸಿಕ ಪಿಂಚಣ ಪಡೆಯಲು ಯೋಜನೆ ಜಾರಿಗೆ ತರಲಾಗಿದೆ. ಸಂಘಟಿತ ಕಾರ್ಮಿಕರು ಯೋಜನೆಯಡಿ ಫಲಾನುಭವಿಗಳಾಗಿ ನೊಂದಾಯಿಸಲು ಅನುಕೂಲವಾಗುವಂತೆ ಸಂಬಂಧಪಟ್ಟ ಇಲಾಖೆಗಳು ಅಗತ್ಯ ಕ್ರಮಗಳನ್ನು ಕೈಗೊಳ್ಳಬೇಕೆಂದು ಜಿಲ್ಲಾಧಿಕಾರಿಯವರು ತಿಳಿಸಿದರು.

# 18ರಂದು ವಿದ್ಯುತ್ ವ್ಯತ್ಯಯ

**ಚಾಮರಾಜನಗರ:** ಕರ್ನಾಟಕ ವಿದ್ಯುತ್ ಪ್ರಸರಣ ನಿಗಮದಿಂದ ಸಂತೇಮರಹಳ್ಳಿ ಉಪವಿಭಾಗ ವ್ಯಾಪ್ತಿಯಲ್ಲಿ 4ನೇ ತ್ರೈಮಾಸಿಕ ನಿರ್ವಹಣೆ ಕಾಮಗಾರಿಯನ್ನು ಫೆಬ್ರವರಿ 18ರಂದು ಹಮ್ಮಿಕೊಂಡಿರುವುದರಿಂದ ಅಂದು ಬೆಳಿಗ್ಗೆ 10 ರಿಂದ ಸಂಜೆ 5 ಗಂಟೆಯವರೆಗೆ ವಿವಿಧೆಡೆ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದೆ.

ಹೊಂಗನೂರು, ಇರಸವಾಡಿ, ಮಸಣಾಪುರ, ಚಾಟಿಪುರ, ಗಂಗವಾಡಿ, ಬೂದಂಬಳ್ಳಿ, ಬೂದಂಬಳ್ಳಿ ಮೋಳೆ, ಗೂಳಿಪುರ, ಹೊಮ್ಮ, ರೇಚಂಬಳ್ಳಿ, ಹೆಚ್.ಮೂಕಳ್ಳಿ, ಕುರುಬರಹುಂಡಿ, ಜ್ಯೋತಿ ಗೌಡನಪುರ, ಅಮ್ಮನಪುರ, ಸುತ್ತೂರು ಕೋಟಂಬಳ್ಳಿ, ಮುಂಟಿಪಾಳ್ಯ ಹಾಗೂ ಸುತ್ತಮುತ್ತಲ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ. ಸಾರ್ವಜನಿಕರು ನಿಗಮದ ಜೊತೆ ಸಹಕರಿಸಬೇಕು. ವಿದ್ಯುತ್ ಸಂಬಂಧಿತ ದೂರು ಮತ್ತು ಸಹಾಯಕ್ಕಾಗಿ ಗ್ರಾಹಕರು ಉಚಿತ ದೂ.ಸಂ 1912 ಸಂಪರ್ಕಿಸುವಂತೆ ನಿಗಮದ ಕಾರ್ಯನಿರ್ವಾಹಕ ಎಂಜಿನಿಯರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**ಜಿಲ್ಲಾಧಿಕಾರಿ ಶ್ರೀರೂಪ ಸಲಹೆ**

# ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳಿಗೆ ಆತ್ಮವಿಶ್ವಾಸ ತುಂಬಿ

**ಚಾಮರಾಜನಗರ:** ವಿದ್ಯಾರ್ಥಿಗಳು ಒತ್ತಡ ಮುಕ್ತ ಹಾಗೂ ಆತ್ಮವಿಶ್ವಾಸದಿಂದ ಮುಂಬರುವ ಎಸ್.ಎಸ್.ಎಲ್.ಸಿ ಪರೀಕ್ಷೆಯನ್ನು ಯಶಸ್ವಿಯಾಗಿ ಬರೆದು ಫಲಿತಾಂಶದಲ್ಲಿ ಜಿಲ್ಲೆ ಉತ್ತಮ ಸ್ಥಾನಗಳಿಸಲು ಶಿಕ್ಷಕರು ಉತ್ತೇಜಿಸಬೇಕೆಂದು ಜಿಲ್ಲಾಧಿಕಾರಿ ಶ್ರೀರೂಪ ತಿಳಿಸಿದರು.

ನಗರದ ಜೆ.ಹೆಚ್. ಪಟೇಲ್ ಸಭಾಂಗಣದಲ್ಲಿಂದು ಎಸ್.ಎಸ್.ಎಲ್.ಸಿ ಫಲಿತಾಂಶ ಸುಧಾರಣೆ ಹಾಗೂ 2022–23, 2023–24ನೇ ಸಾಲಿನ ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ಶೇ. 100ರಷ್ಟು ಫಲಿತಾಂಶ ಪಡೆದ ಪ್ರೌಢಶಾಲಾ ಮುಖ್ಯೋಪಾಧ್ಯಯರಿಗೆ ಅಭಿನಂದನಾ ಫಲಕ ವಿತರಣೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಎಸ್.ಎಸ್.ಎಲ್.ಸಿ ವಾರ್ಷಿಕ ಪರೀಕ್ಷೆಯು ಮಾರ್ಚ್ ತಿಂಗಳಿನಲ್ಲಿ ಆರಂಭವಾಗಲಿದ್ದು, ಉಳಿದಿರುವ ಶೈಕ್ಷಣಿಕ ಅವಧಿಯಲ್ಲಿ ಕಲಿಕೆಯಲ್ಲಿ ಹಿಂದುಳಿದಿರುವ ಮಕ್ಕಳ ಬಗ್ಗೆ ವಿಶೇಷವಾಗಿ ಕೇಂದ್ರೀಕರಿಸಬೇಕು. ಮಕ್ಕಳಿಗೆ ಪರೀಕ್ಷೆ ಬಗೆಗಿನ ಭಯ ಇರಬಾರದು. ಆತ್ಮವಿಶ್ವಾಸದಿಂದ ಪರೀಕ್ಷೆ ಎದುರಿಸಲು ವಿದ್ಯಾರ್ಥಿಗಳಲ್ಲಿ ಸಕಾರಾತ್ಮಕ ಮನೋಭಾವನೆ ಉಂಟು ಮಾಡಬೇಕು. ವಿದ್ಯಾರ್ಥಿಗಳನ್ನು ಹುರಿದುಂಬಿಸಿ ಪರೀಕ್ಷೆ ಬರೆಯಲು ಸಜ್ಜುಗೊಳಿಸಬೇಕು ಎಂದರು.

ಇತ್ತೀಚೆಗೆ ನಡೆದ ಪೂರ್ವಭಾವಿ ಪರೀಕ್ಷೆಯಲ್ಲಿ ಕಡಿಮೆ ಅಂಕ ಪಡೆದಿರುವ ವಿದ್ಯಾರ್ಥಿಗಳು ಯಾವ ವಿಷಯದಲ್ಲಿ ಹಿಂದೆ ಇದ್ದಾರೆ ಎಂಬ ಬಗ್ಗೆ ಪರಿಶೀಲಿಸಿ ಅಂತಹ ವಿಷಯಗಳಿಗೆ ವಿಶೇಷ ತರಗತಿಗಳನ್ನು ನಡೆಸಬೇಕು. ಕ್ಲಿಷ್ಟಕರ ಎನಿಸಬಹುದಾದ ವಿಷಯಗಳನ್ನು ಸರಳವಾಗಿ ಮನಮುಟ್ಟುವಂತೆ ಹೇಳಿಕೊಡಬೇಕು. ಇತರೆ ವಿದ್ಯಾರ್ಥಿಗಳಂತೆ ಎಲ್ಲಾ ವಿದ್ಯಾರ್ಥಿಗಳು ಪರೀಕ್ಷೆಯಲ್ಲಿ ಯಶಸ್ವಿಯಾಗಲು ಶಿಕ್ಷಕರು ಮಾರ್ಗದರ್ಶನ ಮಾಡಬೇಕು ಎಂದು ಜಿಲ್ಲಾಧಿಕಾರಿಯವರು ತಿಳಿಸಿದರು. ಎಸ್.ಎಸ್.ಎಲ್.ಸಿ ಹಂತವು ವಿದ್ಯಾರ್ಥಿ ಜೀವನದಲ್ಲಿ ಪ್ರಮುಖ ಘಟ್ಟವಾಗಿದೆ. ವಿದ್ಯಾರ್ಥಿಗಳ ಮುಂದಿನ ಭವಿಷ್ಯ ಕಮರಿ ಹೋಗದಂತೆ ಶಿಕ್ಷಕರು ಎಚ್ಚರಿಕೆ ವಹಿಸಬೇಕಿದೆ. ಶಾಲೆಯಿಂದ ಮಕ್ಕಳು ಹೊರಗುಳಿಯದಂತೆ ನೋಡಿಕೊಳ್ಳಬೇಕಿದೆ. ಎಸ್.ಎಸ್.ಎಲ್.ಸಿ ಯಲ್ಲಿ ಜಿಲ್ಲೆ ಮೇಲಿನ ಕ್ರಮಾಂಕದಲ್ಲಿ ಉನ್ನತ ಸ್ಥಾನಗಳಿಸಬೇಕು. ಉತ್ತಮ ಫಲಿತಾಂಶ ಪಡೆದು ಜಿಲ್ಲೆಗೆ ಹಿರಿಮೆ ತರಬೇಕು. ಈ ನಿಟ್ಟಿನಲ್ಲಿ ಶಿಕ್ಷಕರು ಜವಾಬ್ದಾರಿಯುತವಾಗಿ ಕಾರ್ಯನಿರ್ವಹಿಸಬೇಕು ಎಂದು ಜಿಲ್ಲಾಧಿಕಾರಿ ಶ್ರೀರೂಪ ಹೇಳಿದರು.




ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮೋನಾ ರೋತ್ ಅವರು ಮಾತನಾಡಿ ಪರೀಕ್ಷೆಗೆ ಉಳಿದಿರುವ ಬಾಕಿ ದಿನಗಳಲ್ಲಿ ಫಲಿತಾಂಶದಲ್ಲಿ ಕಡಿಮೆ ಸಾಧನೆ ಮಾಡಿರುವ ಕೆಲ ಶಾಲೆಗಳು ವಿದ್ಯಾರ್ಥಿಗಳಿಗೆ ಹಳೆಯ ಪ್ರಶ್ನೆ ಪತ್ರಿಕೆಗಳ ಅಭ್ಯಾಸ ಮಾಡಿಸಬೇಕು. ಗೈರು ಹಾಜರಿಯಿಂದ ಹೆಚ್ಚು ಅಂಕ ಪಡೆಯಲು ಸಾಧ್ಯವಾಗದೆ ಇರುವ ಮಕ್ಕಳಿಗೆ ಸರಳವಾಗಿ ವಿಷಯಗಳನ್ನು ಮನದಟ್ಟು ಮಾಡಿಕೊಡಬೇಕು. ಪೋಷಕರೊಂದಿಗೆ ಸಂಪರ್ಕದಲ್ಲಿದ್ದು ಮಕ್ಕಳ ಕಲಿಕೆಗೆ ಉತ್ತೇಜಿಸಬೇಕು. ಫಲಿತಾಂಶದಲ್ಲಿ ಜಿಲ್ಲೆ ಗಮನಾರ್ಹ ಸಾಧನೆ ಮಾಡುವಲ್ಲಿ ಶಿಕ್ಷಕರ ಪಾತ್ರ ಮುಖ್ಯವಾಗಿದೆ ಎಂದರು.

ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕರಾದ ಎಸ್. ಚಂದ್ರಪಾಟಿಲ್ ಅವರು ಮಾತನಾಡಿ ಎಸ್.ಎಸ್.ಎಲ್.ಸಿ 2ನೇ ಪೂರ್ವಭಾವಿ ಪರೀಕ್ಷೆ ಫಲಿತಾಂಶದಲ್ಲಿ ಜಿಲ್ಲೆ ಐದನೇ ಸ್ಥಾನದಲ್ಲಿದೆ. ಮುಖ್ಯ ಪರೀಕ್ಷೆಯಲ್ಲಿ ಇದಕ್ಕಿಂತಲೂ ಮೇಲಿನ ಸ್ಥಾನ ಪಡೆಯಬೇಕು. ಈಗಾಗಲೇ 4 ಮಾದರಿ ಪ್ರಶ್ನೆ ಪತ್ರಿಕೆಗಳನ್ನು ನೀಡಲಾಗಿದೆ. ಈ ಬಗ್ಗೆ ವಿದ್ಯಾರ್ಥಿಗಳಿಗೆ ಹೆಚ್ಚು ಅಭ್ಯಾಸ ಮಾಡಿಸಬೇಕಿದೆ. ಪರೀಕ್ಷೆಗೆ ಇನ್ನುದಿಳಿದಿರುವ ದಿನಗಳಲ್ಲಿ ಶಿಕ್ಷಕರು ಹೆಚ್ಚು ಪರಿಶ್ರಮದಿಂದ ಫಲಿತಾಂಶ ಸುಧಾರಣೆಗೆ ಮುಂದಾಗಬೇಕು ಎಂದು ತಿಳಿಸಿದರು.

ಇದೇ ವೇಳೆ 2022–23 ಮತ್ತು 2023–24ನೇ ಸಾಲಿನ ಎಸ್.ಎಸ್.ಎಲ್.ಸಿ ವಾರ್ಷಿಕ ಪರೀಕ್ಷೆಯಲ್ಲಿ ಶೇ. 100ರಷ್ಟು ಫಲಿತಾಂಶ ಪಡೆದ 83 ಶಾಲೆಯ ಪ್ರೌಢಶಾಲಾ ಮುಖ್ಯೋಪಾಧ್ಯಯರಿಗೆ ಅಭಿನಂದನಾ ಫಲಕಗಳನ್ನು ವಿತರಿಸಲಾಯಿತು.

ಉಪವಿಭಾಗಾಧಿಕಾರಿ ದಿನೇಶ್ ಕುಮಾರ್ ಮೀನಾ, ಶಿಕ್ಷಣಾಧಿಕಾರಿ ಮಲ್ಲಿಕಾರ್ಜುನ್, ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆ (ಡಯಟ್) ಪ್ರಾಂಶುಪಾಲರಾದ ಕಾಶಿನಾಥ್ ಅವರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

# ಮರುಳೇಶ್ವರ ದೇಗುಲದಲ್ಲಿ ದೀಪೋತ್ಸವ



**ಮೈಸೂರು:** ಮಹಾಶಿವರಾತ್ರಿ ಅಂಗವಾಗಿ ಜಯನಗರದಲ್ಲಿರುವ ಮರುಳೇಶ್ವರ ದೇವಸ್ಥಾನದ ಆವರಣದಲ್ಲಿ, ಮರುಳೇಶ್ವರ ಸೇವಾ ಟ್ರಸ್ಟ್, ನೇಗಿಲಯೋಗಿ ಸಮಾಜ ಸೇವಾ ಟ್ರಸ್ಟ್ ಹಾಗೂ ನೇಗಿಲ ಯೋಗಿ ಮಹಿಳೆಯರ ಹಿತೈಷಿಗಳ ಸೇವಾ ಬಳಗದಿಂದ ಶಿವ ದೀಪೋತ್ಸವ ಜರುಗಿತು. ಮಹಾ ಶಿವರಾತ್ರಿ ಅಂಗವಾಗಿ ಜಾಗರಣೆ, ಕಲಾವಿದರಿಂದ ಭರತನಾಟ್ಯ, ರಂಗಗೀತೆಗಳು, ಶಿವ ಪಂಚಾಕ್ಷರಿ ಮಂತ್ರ ಪಾರಾಯಣ ಹಾಗೂ ಸುಗಮ ಸಂಗೀತ ಕಾರ್ಯಕ್ರಮ ಆಯೋಜಿಸಲಾಗಿತ್ತು.

ಭಾನುವಾರ ಭಕ್ತಾದಿಗಳ ಸಹಕಾರದೊಂದಿಗೆ ಸುಮಾರು 25 ಸಾವಿರ ದೀಪಗಳನ್ನು ಬೆಳಗಿಸಿ ದೇವಸ್ಥಾನದ ಆವರಣವನ್ನು ರಂಗೋಲಿಯಿಂದ ಅಲಂಕೃತಗೊಳಿಸಲಾಯಿತು. ರಂಗೋಲಿ ಸ್ಪರ್ಧೆ ಹಾಗೂ ಭಕ್ತಿ ಗೀತೆಗಳ ಗಾಯನ ಸ್ಪರ್ಧೆಗಳನ್ನು ಆಯೋಜಿಸಿ, ವಿಜೇತರಿಗೆ ಬಹುಮಾನ ವಿತರಿಸಲಾಯಿತು. ಶಾಸಕರಾದ ಕೆ.ಹರೀಶ್ ಗೌಡ, ಟಿ.ಎಸ್.ಶ್ರೀವತ್ಸ, ವಿಧಾನ ಪರಿಷತ್ ಸದಸ್ಯ ಕೆ. ವಿವೇಕಾನಂದ, ಡಿಐಜಿಪಿ ಡಾ. ಎ.ಎನ್. ಪ್ರಕಾಶ್‌ಗೌಡ, ಮರುಳೇಶ್ವರ ಸೇವಾ ಟ್ರಸ್ಟ್ ಅಧ್ಯಕ್ಷ ಡಾ. ಮಹದೇವಯ್ಯ, ಸುಗಮ ಸಂಗೀತ ಟ್ರಸ್ಟ್ ಜಿಲ್ಲಾಧ್ಯಕ್ಷ ನಾಗರಾಜ ಭೈರಿ, ಮುಖಂಡರಾದ ಪ್ರೊ. ರಂಗಪ್ಪ, ಸೋಮಣ್ಣ, ಬರ್ಕಿ ಮಹದೇವಪ್ಪ, ನೇಗಿಲಯೋಗಿ ಸಮಾಜ ಸೇವಾ ಟ್ರಸ್ಟ್ ಅಧ್ಯಕ್ಷ ಡಿ.ರವಿಕುಮಾರ್, ಒಕ್ಕಲಿಗರ ಸಂಘದ ನಿರ್ದೇಶಕ ಎಂ.ಬಿ. ಮಂಜೇಗೌಡ, ನೇಗಿಲಯೋಗಿ ಮಹಿಳೆಯರ ಹಿತೈಷಿಗಳ ಸೇವಾ ಬಳಗದ ಅಧ್ಯಕ್ಷೆ ಜೆ. ಶೋಭಾ, ಪದಾಧಿಕಾರಿಗಳಾದ ರಾಣಿ ಮಹೇಶ್, ಲಾವಣ್ಯ, ವಿಜಯಾ, ಸುನಂದಾ, ಯೋಗವತಿ, ಶೋಭಾ ಧನಂಜಯ್, ಡಾ. ಸುಮಿತ್ರಾ, ಡಾ. ಪ್ರತಿಮಾ, ಸೀತಮ್ಮ, ಅನಿತಾ ಇತರರು ಇದ್ದರು.

# ಶಿಶು ಮರಣ ಪ್ರಮಾಣ ಶೂನ್ಯ ಗೊಳಿಸಿ



**ಮೈಸೂರು:** 2025ರಲ್ಲಿ ಒಟ್ಟು 9 ತಾಯಿ ಮರಣ ಪ್ರಕರಣ ಸಂಭವಿಸಿದ್ದು, ರಾಜ್ಯ ಮಟ್ಟದ ಸರಾಸರಿ ಶೇ.69 ರಷ್ಟು ಪ್ರಮಾಣದಲ್ಲಿದ್ದು ಜಿಲ್ಲೆಯ ತಾಯಿ ಮರಣ ಪ್ರಮಾಣ ಶೇ.32.2ರಷ್ಟಿದ್ದು ಇಳಿಮುಖವಾಗಿರುವುದು ಕಂಡು ಬಂದಿದೆ. ಡಿಸೆಂಬರ್–2025ರ ಅಂತ್ಯಕ್ಕೆ 311 ಶಿಶು ಮರಣ ಪ್ರಕರಣಗಳು ಸಂಭವಿಸಿರುತ್ತದೆ. ಪ್ರಸ್ತುತ ರಾಜ್ಯ ಮಟ್ಟದಲ್ಲಿ ಸರಾಸರಿ 19 ರಷ್ಟು ಪ್ರಮಾಣದಲ್ಲಿದ್ದು, ಜಿಲ್ಲೆಯ ಶಿಶು ಮರಣ ಪ್ರಮಾಣ ಸರಾಸರಿ 11.1ರಷ್ಟು ಈ ಪ್ರಮಾಣವನ್ನು ಶೂನ್ಯ ಪ್ರಮಾಣಕ್ಕೆ ತರುವ ನಿಟ್ಟಿನಲ್ಲಿ ಕಾರ್ಯ ಪ್ರವೃತರಾಗುವಂತೆ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಯುಕೇಶ್ ಕುಮಾರ್ ತಿಳಿಸಿದರು.

ಜಿಲ್ಲಾ ಪಂಚಾಯತ್ "ಮಿನಿ" ಸಭಾಂಗಣದಲ್ಲಿ 2025–26 ನೇ ಸಾಲಿನ ಜಿಲ್ಲಾ ಆರೋಗ್ಯ ಸೊಸೈಟಿ ಸಭೆ ಜನವರಿ–2026ರ ಅಂತ್ಯಕ್ಕೆ ರಾಷ್ಟ್ರೀಯ ಆರೋಗ್ಯ ಕಾರ್ಯಕ್ರಮದ ಪ್ರಗತಿ ಪರಿಶೀಲನೆ ಸಭೆಯ ಅಧ್ಯಕ್ಷತೆವಹಿಸಿ ಮಾತನಾಡಿದರು. ಅಪೌಷ್ಟಿಕ ಮಕ್ಕಳ ಗುರುತಿಸುವಿಕೆ ಮತ್ತು ಅಪೌಷ್ಟಿಕ ಮಕ್ಕಳನ್ನು ಎನ್.ಆರ್.ಸಿ ಕೇಂದ್ರಗಳಿಗೆ ದಾಖಲೀಕರಣ ಮಾಡುವ ನಿಟ್ಟಿನಲ್ಲಿ ಆರ್.ಬಿ.ಎಸ್.ಕೆ ವೈದ್ಯರ ತಂಡದ ಮಹತ್ವದ ಬಗ್ಗೆ ಪರಿಶೀಲನೆ ನಡೆಸಿದರು. ಕಾಯಕಲ್ಪ ಕಾರ್ಯಕ್ರಮದಡಿಯಲ್ಲಿ ರಾಷ್ಟ್ರೀಯ ಮಾನ್ಯತೆಗೆ ಅರ್ಹತೆ ಪಡೆದಿದ್ದು, ಅದರಂತೆ ಮೈಸೂರು–27, ನಂಜನಗೂಡು–06, ಪಿರಿಯಾಪಟ್ಟಣ–8, ಟಿ. ನರಸೀಪುರ–32, ಹೆಚ್.ಡಿ.ಕೋಟೆ–7, ಹುಣಸೂರು–16 ಮತ್ತು ಕೆ.ಆರ್.ನಗರ–27 ಒಟ್ಟು 123 ಆರೋಗ್ಯ ಕೇಂದ್ರಗಳು ರಾಷ್ಟ್ರಿಯ ಪ್ರಮಾಣೀಕರಣಕ್ಕೆ ಅರ್ಹತೆ ಪಡೆದಿರವ ಬಗ್ಗೆ ಪ್ರಶಂಸೆ ವ್ಯಕ್ತಪಡಿಸಿದರು. ಜಿಲ್ಲೆಯ ಎಲ್ಲಾ ಆರೋಗ್ಯ ಕೇಂದ್ರಗಳು ಪ್ರಶಸ್ತಿಗೆ ಭಾಜನರಾಗುವ ನಿಟ್ಟಿನಲ್ಲಿ ಕರ್ತವ್ಯ ನಿರ್ವಹಿಸಲು ಕ್ರಮವಹಿಸುವಂತೆ ತಿಳಿಸಿದರು. ಸಭೆಯಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರ ಡಾ. ಪಿ.ಸಿ.ಕುಮಾರಸ್ವಾಮಿ ಇನ್ನಿತರರು ಭಾಗವಹಿಸಿದ್ದರು.

## ಫೆ.19ಕ್ಕೆ ಶಿವಾಜಿ ಜಯಂತಿ ಯಶಸ್ವಿಗೆ ಮನವಿ

**ಮೈಸೂರು:** ಜಿಲ್ಲಾಡಳಿತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಛತ್ರಪತಿ ಶ್ರೀ ಶಿವಾಜಿ ಮಹಾರಾಜರ ಜಯಂತೋತ್ಸವ ಸಮಿತಿಯಿಂದ ಛತ್ರಪತಿ ಶ್ರೀ ಶಿವಾಜಿ ಮಹಾರಾಜ 399ನೇ ಜಯಂತೋತ್ಸವವನ್ನು ಆಚರಿಸಲಾಗುತ್ತಿದ್ದು, ಕಾರ್ಯಕ್ರಮ ಯಶಸ್ವಿಗೊಳಿಸುವಂತೆ ಛತ್ರಪತಿ ಶ್ರೀ ಶಿವಾಜಿ ಮಹಾರಾಜ 399ನೇ ಜಯಂತೋತ್ಸವ ಸಮಿತಿ ಅಧ್ಯಕ್ಷ ಕೆ.ನಾಗೇಂದ್ರರಾವ್ ಅವತಾಡೆ ಕೋರಿದರು.



ಅಂದು ಬೆ.9.30ಕ್ಕೆ ಗಂಟೆಗೆ ಅರಮನೆ ಕೋಟೆ ಆಂಜನೇಯಸ್ವಾಮಿ ದೇವಾಲಯದಿಂದ ಕಲಾತಂಡಗಳೊಂದಿಗೆ ಕಲಾಮಂದಿರದವರೆಗೂ ಮೆರವಣಿಗೆ ನಡೆಯಲಿದೆ. ಬಳಿಕ ಕಲಾಮಂದಿರದಲ್ಲಿ ಸಭಾ ಕಾರ್ಯಕ್ರಮ ನಡೆಯಲಿದೆ. ಕಾರ್ಯಕ್ರಮದ ಯಶಸ್ವಿಗೆ ಈಗಾಗಲೇ ಸ್ವಾಗತ, ಹಣಕಾಸು, ಪ್ರಚಾರ, ಅಲಂಕಾರ, ಮೆರವಣಿಗೆ, ಸಾಂಸ್ಕೃತಿಕ, ಆಹಾರ ಸಮಿತಿಗಳನ್ನು ರಚನೆ ಮಾಡಲಾಗಿದೆ.

ಜಯಂತಿ ಕಾರ್ಯಕ್ರಮವನ್ನು ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಚ್.ಸಿ.ಮಹದೇವಪ್ಪ ಉದ್ಘಾಟಿಸಲಿದ್ದು, ವಿಶೇಷ ಅತಿಥಿಗಳಾಗಿ ಸಂಸದರಾದ ಯಧುವೀರ ಕೃಷ್ಣದತ್ತ ಚಾಮರಾಜ, ಸುನೀಲ್ ಬೋಸ್ ಆಗಮಿಸುವರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಶಾಸಕರಾದ ಕೆ. ಹರೀಶ್‌ಗೌಡ, ಶ್ರೀವತ್ಸ, ತನ್ವೀರ್ ಸೇಠ್, ಜಿ.ಟಿ.ದೇವೇಗೌಡ, ನಗರಪಾಲಿಕೆ ಮಾಜಿ ಸದಸ್ಯರಾದ ಶೋಭಾ, ಸುನೀಲ್ ವಹಿಸುವರು. ಮುಖ್ಯಭಾಷಣಕಾರರಾಗಿ ಭಾರತೀಯ ಭಾಷಾಸಂಸ್ಥಾನದ ಶಾಸ್ತ್ರೀಯ ಕನ್ನಡ ಅಧ್ಯಯನ ಕೇಂದ್ರ ಹಿರಿಯ ಸಂಶೋಧಕ ಡಾ.ಆರ್.ಚಲಪತಿ ಮಾತನಾಡುವರು. ಸಭಾ ಕಾರ್ಯಕ್ರಮದ ನಂತರ ಸಾಂಸ್ಕೃತಿಕ ಕಾರ್ಯಕ್ರಮ ನಡೆಯಲಿದೆ. ಸಮುದಾಯದ ಹಾಗೂ ಸಾರ್ವಜನಿಕರು ಆಗಮಿಸಿ ಕಾರ್ಯಕ್ರಮ ಯಶಸ್ವಿಗೊಳಿಸುವಂತೆ ಕೋರಿದ್ದಾರೆ.

## ನಾಳೆ ವಿಟಿಯುನಲ್ಲಿ ಸಾಂಸ್ಕೃತಿಕ ಹಬ್ಬ




**ಮೈಸೂರು:** ನಗರದ ಸಾತಗಳ್ಳಿಯ ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವದ್ಯಾಲಯ ಪ್ರಾದೇಶಿಕ ಕೇಂದ್ರದಲ್ಲಿ ಫೆ.19 ಮತ್ತು 20ರಂದು ಪ್ರಾದೇಶಿಕ ಮಟ್ಟದ ತಾಂತ್ರಿಕ ಮತ್ತು ಸಾಂಸ್ಕೃತಿಕ ಹಬ್ಬ–ಯುಕ್ತಿ 2026 ಆಯೋಜಿಸಲಾಗಿದೆ ಎಂದು ಕೇಂದ್ರದ ನಿರ್ದೇಶಕ ಎಚ್.ಎಂ.ನಂಜುಂಡಸ್ವಾಮಿ ತಿಳಿಸಿದರು.

ನಗರದಲ್ಲಿ ಸುದ್ದಿಗಾರರೊಡನೆ ಮಾತನಾಡಿ, ಫೆ.19ರಂದು ಬೆಳಿಗ್ಗೆ 10ಕ್ಕೆ ಕುಲಪತಿ ಎಸ್.ವಿದ್ಯಾಶಂಕರ್ ಕಾರ್ಯಕ್ರಮ ಉದ್ಘಾಟಿಸುವರು. ನಟ ಶರಣ್, ನಟಿಯರಾದ ಸೋನಲ್ ಮೊಂಥೆರೋ, ಧನ್ಯಾ ರಾಮ್‌ಕುಮಾರ್, ಗಾಯಕ ವಾಸುಕಿ ವೈಭವ್, ವಯೋಲಿನ್ ವಾದಕ ಅನೀಶ್ ವಿದ್ಯಾಶಂಕರ್ ಪಾಲ್ಗೊಳ್ಳುವರು ಎಂದರು. ವಿವಿಧ ತಾಂತ್ರಿಕ ಹಾಗೂ ಸಾಂಸ್ಕೃತಿಕ ಸ್ಪರ್ಧೆಗಳಲ್ಲಿ ಸುಮಾರು 1,200 ವಿದ್ಯಾರ್ಥಿಗಳು ಪಾಲ್ಗೊಳ್ಳುವ ನಿರೀಕ್ಷೆಯಿದೆ. ಫೆ.20ರಂದು ಸಂಜೆ 5ಕ್ಕೆ ಸಮಾರೋಪ ನಡೆಯಲಿದ್ದು, ವಿವಿಸಿಇ ಪ್ರಾಂಶುಪಾಲ ಬಿ.ಸದಾಶಿವೇಗೌಡ ಅತಿಥಿಯಾಗಿ ಪಾಲ್ಗೊಳ್ಳಲಿದ್ದು, ವಿಜೇತರಿಗೆ ಬಹುಮಾನ ವಿತರಿಸಲಾಗುವುದು ಎಂದರು. ಸಂಘಟನಾ ಕಾರ್ಯದರ್ಶಿ ಎಸ್.ತಿಮ್ಮರಾಜು, ಬೋಧಕ ಸಿಬ್ಬಂದಿ ಪ್ರಕೃತಿ, ಪ್ರಸನ್ನ, ಕೀರ್ತಿ ಗೌಡ ಹಾಜರಿದ್ದರು.

## ಫೆ.20ಕ್ಕೆ ಧರ್ಮಿಷ್ಠ ಚಿತ್ರ ತೆರೆಗೆ



**ಮೈಸೂರು:** ಗೋಲ್ಡನ್ ಸುರೇಶ್ ಫಿಲಂಸ್ ಬ್ಯಾನರ್‌ನಲ್ಲಿ ನಿರ್ಮಿಸಿರುವ ಧರ್ಮಿಷ್ಠ ಚಲನಚಿತ್ರವು ಫೆ.20ರಂದು ರಾಜ್ಯಾದ್ಯಂತ ಬಿಡುಗಡೆಯಾಗಲಿದ್ದು, ಎಲ್ಲರೂ ವೀಕ್ಷಿಸಿ ಪ್ರೋತ್ಸಾಹಿಸಬೇಕು ಎಂದು ಚಿತ್ರ ನಿರ್ದೇಶಕ ಎಚ್.ವಿ.ಪುಟ್ಟಸ್ವಾಮಿ ಮನವಿ ಮಾಡಿದರು.

ನಗರದಲ್ಲಿ ಸುದ್ದಿಗಾರರೊಡನೆ ಮಾತನಾಡಿ, ತಾಳಿದವನು ಬಾಳಿಯಾನು ಎಂಬ ಸಂದೇಶವಿರುವ ಈ ಚಿತ್ರದಲ್ಲಿ ಜ್ಯೂನಿಯರ್ ರಾಜ್‌ಕುಮಾರ್ ಖ್ಯಾತಿಯ ಅಜಿತ್‌ಕುಮಾರ್ ಪ್ರಥಮ ಬಾರಿ ನಾಯಕನಾಗಿ ಅಭಿನಯಿಸಿದ್ದಾರೆ. ಬಹುತೇಕ ಹೊಸ ಕಲಾವಿದರಿಗೆ ಅವಕಾಶ ನೀಡಲಾಗಿದೆ. ಭಾಸ್ಕರ್ ಕೃಷ್ಣ ಸಂಭಾಷಣೆ, ಚೇತನ್ ಛಾಯಾಗ್ರಹಣ, ಮಹೇಂದ್ರ ಮಹಾದೇವು ಸಂಕಲನ ಹಾಗೂ ರವಿಶಂಕರ್ ಸಂಗೀತ ನೀಡಿದ್ದಾರೆ ಎಂದು ಮಾಹಿತಿ ನೀಡಿದರು. ಚಿತ್ರ ನಿರ್ಮಾಪಕ ಗೋಲ್ಡನ್ ಸುರೇಶ್, ರಾಜ್‌ಕುಮಾರ್ ಅಭಿಮಾನಿಗಳ ಸಂಘದ ಅಧ್ಯಕ್ಷ ಎಂ.ರಾಮೇಗೌಡ, ಬಸವ ಬಳಗಗಳ ಒಕ್ಕೂಟದ ಅಧ್ಯಕ್ಷ ಎಂ.ಚಂದ್ರಶೇಖರ್, ಪ್ರಮುಖರಾದ ಎಂ.ನಂದೀಶ್, ಎಂ.ಸುರೇಶ್ ಹಾಜರಿದ್ದರು.

## ಫೆ.19ಕ್ಕೆ ರಸಸಂಜೆ ಕಾರ್ಯಕ್ರಮ

ಮೈಸೂರು: ಮೈಸೂರು ರಿದಮ್ಸ್ ಕರೋಕೆ ಕ್ಲಬ್‌ನಿಂದ ನಗರದ ನಾದಬ್ರಹ್ಮ ಸಂಗೀತ ಸಭಾಂಗಣದಲ್ಲಿ ಫೆ.19ರಂದು ಸಂಜೆ 4.30ಕ್ಕೆ ಸಂಗೀತದ ಅಲೆಗಳ ಮೇಲೆ ಪ್ರೀತಿಯ ಪಯಣ ಶೀರ್ಷಿಕೆಯಲ್ಲಿ ಬಹುಭಾಷಾ ಚಲನಚಿತ್ರಗೀತೆಗಳ ರಸಸಂಜೆ– ಸೀಸನ್ 3 ಕಾರ್ಯಕ್ರಮ ಆಯೋಜಿಸಲಾಗಿದೆ ಎಂದು ಕ್ಲಬ್ ಸಂಚಾಲಕ ಎಸ್. ಅಮರ್ ತಿಳಿಸಿದರು. ನಗರದಲ್ಲಿ ಸುದ್ದಿಗಾರರೊಡನೆ ಮಾತನಾಡಿ, ವಿವಿಧ ಕ್ಷೇತ್ರಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಹವ್ಯಾಸಿ ಗಾಯಕರು ಸುಮಾರು 40 ಗೀತೆಗಳನ್ನು ಹಾಡಲಿದ್ದು, ಕರೋಕೆ ಕಾರ್ಯಕ್ರಮವಾಗಿದೆ. ಅತಿಥಿಗಳಾಗಿ ಪತ್ರಕರ್ತ ಅಂಶಿ ಪ್ರಸನ್ನಕುಮಾರ್, ಕನ್ನಡ ಸುಗಮ ಸಂಗೀತ ಪರಿಷತ್ತು ಜಿಲ್ಲಾ ಘಟಕದ ಅಧ್ಯಕ್ಷ ನಾಗರಾಜ್ ವಿ.ಬೈರಿ, ಕನ್ನಡ ಸಾಹಿತ್ಯ ಪರಿಷತ್ತು ಜಿಲ್ಲಾ ಘಟಕದ ಅಧ್ಯಕ್ಷ ಮಡ್ಡೀಕೆರೆ ಗೋಪಾಲ್, ಬಿಜೆಪಿ ನಗರ ಘಟಕದ ಉಪಾಧ್ಯಕ್ಷ ಎಂ.ಎ.ಬಾಲಕೃಷ್ಣ, ಪ್ರಮುಖರಾದ ವೈ.ಡಿ.ರಾಜಣ್ಣ, ಗುಬ್ಬಿಗೂಡು ರಮೇಶ್ ಪಾಲ್ಗೊಳ್ಳುವರು ಎಂದರು.

## ಡೂಪ್ಲಿನ್ ಕಾಂಪ್ಲೆಕ್ಸ್ ಎಂಡಿಎ ವಶಕ್ಕೆ ನ್ಯಾಯಾಲಯ ಆದೇಶ

**ಮೈಸೂರು:** ಮೈಸೂರಿನ ಹೃದಯಭಾಗದಲ್ಲಿರುವ "ಡೂಪ್ಲಿನ್ ಕಾಂಪ್ಲೆಕ್ಸ್"ನ ವರ್ತಕರಿಗೆ ಹೈಕೋರ್ಟ್ ಬಿಸಿ ಮುಟ್ಟಿಸಿದೆ. ಅನಧಿಕೃತ ವಾಗಿ ಸ್ವಾಧೀನದಲ್ಲಿರುವ ವರ್ತಕರನ್ನು ಖಾಲಿ ಮಾಡಿಸಿ ಆಸ್ತಿಯನ್ನ ತಮ್ಮ ವಶಕ್ಕೆ ಪಡೆಯುವಂತೆ ಹೈಕೋರ್ಟ್ ತೀರ್ಪು ನೀಡಿದೆ.

ಮೈಸೂರಿನ ಡಿ.ದೇವರಾಜ ಅರಸ್ ರಸ್ತೆ ಹಾಗೂ ಶಿವರಾಂ ಪೇಟೆಯ ವಿನೋಬಾ ರಸ್ತೆ ಮತ್ತು ದೇವರಾಜ ಮಾರುಕಟ್ಟೆಯ ಚಿಕ್ಕಗಡಿಯಾರ ಮುಂಭಾಗವಿರುವ "ಡೂಪ್ಲಿನ್ ಕಾಂಪ್ಲೆಕ್ಸ್" ಅಂದಿನ ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ ನಿರ್ಮಿಸಿದೆ. ಸುಮಾರು 40ಕ್ಕೂ ಹೆಚ್ಚು ಮಳಿಗೆಗಳಿರುವ ವಾಣಿಜ್ಯ ಸಂಕೀರ್ಣ ಇದಾಗಿದೆ. ಬಹುತೇಕ ಎಲ್ಲಾ ಮಳಿಗೆಗಳಲ್ಲಿ ಸದ್ಯ ವರ್ತಕರು ಸ್ವಾಧೀನದಲ್ಲಿದ್ದಾರೆ. ಬಾಡಿಗೆ ಹಾಗೂ ಮಾಲೀಕತ್ವದ ವಿಚಾರದಲ್ಲಿ ವರ್ತಕರು ಹಾಗೂ ಅಂದಿನ ಮುಡಾ ನಡುವೆ ಕಾನೂನು ಹೋರಾಟ ನಡೆಯುತ್ತಿದೆ. ವರ್ತಕರನ್ನ ಖಾಲಿ ಮಾಡಿಸುವ ಉದ್ದೇಶದಿಂದ ಪ್ರಾಧಿಕಾರ ನ್ಯಾಯಾಲಯದ ಮೊರೆ ಹೋಗಿ ಹಲವು ವರ್ಷಗಳೇ ಉರುಳಿದೆ. ತಾವೇ ಮಾಲೀಕರೆಂಬಂತೆ ವರ್ತಿಸಿದ ವರ್ತಕರು ಮುಡಾ ನಿರ್ಧಾರಕ್ಕೆ ಸೆಡ್ಡು ಹೊಡೆದು ಕಾನೂನು ಹೋರಾಟ ನಡೆಸುತ್ತಿದ್ದು ಪ್ರಕರಣ ಹೈಕೋರ್ಟ್ ಮೆಟ್ಟಿಲೇರಿತ್ತು. ಈ ಹಿನ್ನೆಲೆಯಲ್ಲಿ ಎರಡೂ ಬದಿಯಿಂದ ವಾದ ಪ್ರತಿವಾದಗಳನ್ನ ಆಲಿಸಿದ ನ್ಯಾಯಾಲಯ ಸದ್ಯ ಮೈಸೂರು ಅಭಿವೃದ್ಧಿ ಪ್ರಾಧಿಕಾರದ ಪರವಾಗಿ ತೀರ್ಪು ಪ್ರಕಟಿಸಿದೆ. ಅನಧಿಕೃತವಾಗಿ ಸ್ವಾಧೀನದಲ್ಲಿರುವ ವರ್ತಕರನ್ನ ಮೂರು ತಿಂಗಳ ಒಳಗಾಗಿ ತೆರುವುಗೊಳಿಸಿ ತಮ್ಮ ಸುಪರ್ದಿಗೆ ಪಡೆಯುವಂತೆ ತೀರ್ಪು ನೀಡಿದೆ. ಸುಮಾರು 250 ಕೋಟಿ ರೂ. ಮೌಲ್ಯದ ಆಸ್ತಿ ಎಂಡಿಎ ವಶಕ್ಕೆ ಪಡೆಯಬೇಕಿದೆ. ಹಲವಾರು ವರ್ಷಗಳ ಹೋರಾಟಕ್ಕೆ ಸಂದ ಜಯ ಇದಾಗಿದ್ದು, ಎಂಡಿಎ ಆಯುಕ್ತ ರಕ್ಷಿತ್ ಈ ಕೂಡಲೇ ಆಸ್ತಿ ವಶಕ್ಕೆ ಅಗತ್ಯ ಕ್ರಮ ಜರುಗಿಸಲಿ. ಎಂಡಿಎ ಪರವಾದ ಮಂಡಿಸಿದ ಹೈಕೋರ್ಟ್ ವಕೀಲರು ಪ್ರಾಧಿಕಾರ ಆಯುಕ್ತರಿಗೆ ಕ್ರಮವಹಿಸಿ ಎಂದು ಪತ್ರ ಬರೆದಿದ್ದಾರೆ.

# ಕಾಂಗ್ರೆಸ್ ಸೇವಾದಳ, ಆರ್‌ಎಸ್‌ಎಸ್ ಭಿನ್ನತೆಗೆ ನೂರು ವರ್ಷ: ಡಾ.ಬಿಜೆವಿ




**ಮೈಸೂರು:** ರಾಷ್ಟ್ರೀಯ ಕಾಂಗ್ರೆಸ್ ಸೇವಾದಳ, ರಾಷ್ಟ್ರೀಯ ಸ್ವಯಂಸೇವಾ ಸಂಘ ದೇಶದಲ್ಲಿ ನೂರು ವರ್ಷಗಳಿಂದಲೂ ಭಿನ್ನತೆಯಲ್ಲೇ ಸಾಗಿ ಬಂದ ಸಂಘಟನೆಗಳಾಗಿವೆ ಎಂದು ಮೈಸೂರು ಜಿಲ್ಲಾ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಡಾ.ಬಿ.ಜೆ. ವಿಜಯಕುಮಾರ್ ಹೇಳಿದರು.

ನಗರ ಹಾಗೂ ಜಿಲ್ಲಾ ಕಾಂಗ್ರೆಸ್ ಸಮಿತಿ ಸೇವಾದಳವು ಕಾಂಗ್ರೆಸ್ ಭವನದಲ್ಲಿ ಆಯೋಜನೆ ಮಾಡಿದ್ದ ಕರ್ನಾಟಕ ಪ್ರದೇಶ್ ಕಾಂಗ್ರೆಸ್ ಸೇವಾದಳದ ನಿಕಟಪೂರ್ವ ಅಧ್ಯಕ್ಷೆ ಪ್ಯಾರಿಜಾನ್ ಅಭಿನಂದನಾ ಸಮಾರಂಭದ ಅಧ್ಯಕ್ಷತೆವಹಿಸಿ ಮಾತನಾಡಿದರು. 1923ರಲ್ಲಿ ಸ್ಥಾಪನೆಯಾದ ಭಾರತ ರಾಷ್ಟ್ರೀಯ ಕಾಂಗ್ರೆಸ್ ಸೇವಾದಳ ತ್ಯಾಗ, ಬಲಿದಾನ, ಜಾತ್ಯತೀತತೆ, ಶಿಸ್ತು ಹಾಗೂ ಸಮಾನತೆಯ ಮೂಲ ಉದ್ದೇಶವನ್ನು ಹೊಂದಿದೆ. ಹಾಗೆಯೇ ಭಾರತ ರಾಷ್ಟ್ರೀಯ ಸ್ವಾತಂತ್ರ್ಯ ಚಳುವಳಿಯಲ್ಲಿ ಕಾಂಗ್ರೆಸ್ ಸೇವಾದಳ ಪ್ರಮುಖ ಪಾತ್ರವಹಿಸಿ ಶಾಂತಿಯುತ ಹೋರಾಟಕ್ಕೆ ಮೂಲ ಪ್ರೇರಣೆಯಾಗಿತ್ತು. ಆದರೆ, 1925ರಲ್ಲಿ ಆರಂಭವಾದ ರಾಷ್ಟ್ರೀಯ ಸ್ವಯಂಸೇವಾ ಸಂಘ ದೇಶದ ಉದ್ದಗಲಕ್ಕೂ ಹಿಂದೂ ರಾಷ್ಟ್ರದ ನಿರ್ಮಾಣಕ್ಕೆ ಹಾಗೂ ಅದನ್ನು ಅತ್ಯಂತ ಸಮರ್ಥವಾಗಿ ಉತ್ತೇಜಿಸುವ ಬಹುದೊಡ್ಡ ಮೂಲ ಉದ್ದೇಶವನ್ನು ಹೊಂದಿತ್ತು. ಆರ್ ಎಸ್ ಎಸ್ ಇತಿಹಾಸದುದ್ದಕ್ಕೂ ಕಾಂಗ್ರೆಸ್ ಸೇವಾದಳಕ್ಕೆ ಭಿನ್ನವಾದ ನಿಲುವುಗಳೊಂದಿಗೆ ದೇಶದಲ್ಲಿ ಹೊಸ ಆಯಾಮವನ್ನು ಕಟ್ಟುವ ವಿಚಾರವಂತಿಕೆ ರೂಡಿಸಿಕೊಂಡು ಬಂತು. ಈಗ ಈ ಎರಡು ರಾಷ್ಟ್ರೀಯ ಸಂಘಟನೆಗಳಿಗೆ ವಿಷಯ ವಾಸ್ತವಿಕತೆಯ ನೆಲಗಟ್ಟಿನಲ್ಲಿ ಬಹುದೊಡ್ಡ ನಿರಂತರ ಭಿನ್ನತೆ ಆರಂಭವಾಗಿ 100 ವರ್ಷಗಳು ಕಳೆದಿದೆ ಎಂದರು.

ಕಾಂಗ್ರೆಸ್ ಪಕ್ಷ ಭಾರತ ಸಂವಿಧಾನದ ಮೂಲ ಆಶಯಗಳಿಗೆ ಬದ್ಧವಾಗಿ ದೇಶ ಮುನ್ನಡೆಸಿದೆ. ಬಿಜೆಪಿ ಮಾತ್ರ ಅದರ ವಿರುದ್ಧ ದಿಕ್ಕಿನಲ್ಲಿ ಸಾಗಿದೆ. ರಾಜ್ಯ ಕಾಂಗ್ರೆಸ್ ಸೇವಾದಳದ ಅಧ್ಯಕ್ಷರಾಗಿ ಸೇವೆ ಸಲ್ಲಿಸಿದ ಪ್ಯಾರಿಜಾನ್ ದಕ್ಷಿಣ ಭಾರತದಲ್ಲಿ ಸುಮಾರು 40 ವರ್ಷಗಳ ಕಾಲ ಕಾಂಗ್ರೆಸ್ ಸೇವಾದಳದಲ್ಲಿ ಅತ್ಯಂತ ಯಶಸ್ವಿ ಶಿಸ್ತಿನ ಸಿಪಾಯಿಯಾಗಿ ಕೆಲಸ ಮಾಡಿದ್ದಾರೆಂದರು. ಪಕ್ಷ ಹೊಸ ಮೀಸಲಾತಿ ಆಧಾರದಲ್ಲಿ ಹಿರಿಯ ಸಮರ್ಥ ಪದಾಧಿಕಾರಿಗಳಿಗೆ ಸರ್ಕಾರದಲ್ಲಿ ಉನ್ನತ ಸ್ಥಾನ ನೀಡುವುದು ತುರ್ತು ಅನಿವಾರ್ಯ ಎಂದರು.

ಅಭಿನಂದನೆ ಸ್ವೀಕರಿಸಿ ಮಾತನಾಡಿದ ಪ್ಯಾರಿಜಾನ್ ಮಾತನಾಡಿದರು. ಸಮಾರಂಭದಲ್ಲಿ ಮಾಜಿ ಮಹಾಪೌರರಾದ ಚಿಕ್ಕಣ್ಣ, ಮೂದಮಣಿ, ಸೇವಾದಳದ ಜಿಲ್ಲಾ ಅಧ್ಯಕ್ಷ ಶಾಮ, ಯೋಗೀಶ್, ನಗರ ಸೇವಾದಳದ ಅಧ್ಯಕ್ಷ ಅಶೋಕ್, ಕಾರ್ಯಾಧ್ಯಕ್ಷ ಮೋಹನ್, ಕಾಂಗ್ರೆಸ್ ಪದಾಧಿಕಾರಿಗಳಾದ ಈಶ್ವರ್ ಚಕ್ಕಡಿ, ಮಂಚೇಗೌಡನ ಕೊಪ್ಪಲು ರವಿ, ವೆಂಕಟ ಸುಬ್ಬಯ್ಯ, ಗೋಪಿನಾಥ್, ಸೋಮಶೇ ಖರ್, ಡೈರಿ ವೆಂಕಟೇಶ್, ರಾಮಚಂದ್ರು ಶಿವ ಶಂಕರಮೂರ್ತಿ, ರಾಮು, ರಾಜು, ಮುರುಡೇಶ್, ಮಹದೇವ್, ಆರ್.ಎಚ್.ಕುಮಾರ, ಲಲಿತಾ ಇತರರಿದ್ದರು.

# ಹೊಸ ಜ್ಞಾನದ ಅರಿವಿಗೆ ಸಂಶೋಧನೆ ಅಗತ್ಯ: ಪ್ರೊ.ಟಿಬಿಬಿಎಸ್‌ವಿ ರಮಣಯ್ಯ




**ಮೈಸೂರು:** ಹೊಸ ಜ್ಞಾನ, ಮಾಹಿತಿಯನ್ನು ಪಡೆದುಕೊಳ್ಳಬೇಕೆಂದರೆ ಸಂಶೋಧನೆ ಮಾಡುವುದು ಅವಶ್ಯಕ ಎಂದು ಸಮಾಜ ಕಾರ್ಯ ಅಧ್ಯಯನ ವಿಭಾಗದ ನಿವೃತ್ತ ಪ್ರಾಧ್ಯಪರಾದ ಪ್ರೊ.ಟಿ.ಬಿ.ಬಿ.ಎಸ್.ವಿ ರಮಣಯ್ಯ ಹೇಳಿದರು.

ನಗರದ ಮಾನಸ ಗಂಗೋತ್ರಿಯ ಸಮಾಜ ಕಾರ್ಯ ಅಧ್ಯಯನ ವಿಭಾಗದ ಸೆಮಿನಾರ್ ಹಾಲ್‌ನಲ್ಲಿ ರೂಸ 2.0ಪ್ರಾಯೋಜಿತ 2 ದಿನಗಳ ವಿಚಾರ ಸಂಕಿರಣವನ್ನು ಉದ್ಘಾಟಿಸಿ ಮಾತನಾಡಿದರು. ಸಂಶೋಧನೆಯನ್ನು ವಿಶ್ವವಿದ್ಯಾನಿಲಯದ ಎಲ್ಲಾ ವಿಭಾಗಗಳಲ್ಲಿ ಮಾಡಬಹುದು. ಸಂಶೋಧನೆ ಮುಖಾಂತರ ಜನರಿಗೆ ಉತ್ತಮ ಸೇವೆ ಮಾಡಬಹುದು. ಸಂಶೋಧನೆಯನ್ನು ಹೊಸ ವಿಷಯಗಳನ್ನು ತಿಳಿದುಕೊಳ್ಳುವುದರ ಜತೆಗೆ ಜನರಲ್ಲಿರುವ ತಪ್ಪು ನಂಬಿಕೆಗಳನ್ನು ಹೋಗಲಾಡಿಸಬಹುದು. ಇದರಿಂದ ಸಮಾಜಕ್ಕೆ ಬೇಕಾಗಿರುವ ಉತ್ತಮವಾದ ಕಾರ್ಯಕ್ರಮಗಳತ್ತ ಹೋಗಬಹುದು. ಈ ಎಲ್ಲಾ ಅನುಕೂಲಗಳನ್ನು ಸಂಶೋಧನೆ ಮೂಲಕ ಪಡೆಯಬಹುದು ಎಂದರು.

ಸಮಾಜಕ್ಕೆ ಸಂಶೋಧನೆಯಿಂದ ಒಳ್ಳೆಯ ಬದಲಾವಣೆಗಳನ್ನು ಹಾಗೂ ಯೋಜನೆಗಳನ್ನು ತರಬಹುದು. ಉತ್ತಮವಾದ ಅಂಕಪಡೆದರೆ ದೇಶದ ಯಾವ ಮೂಲೆಯಲ್ಲಾದರೂ ಪಿಎಚ್.ಡಿ ಮಾಡಬಹುದು. ಹಿಂದೆ ಪಿಎಚ್.ಡಿ ಮಾಡುವವರಿಗೆ ಯಾವ ಬ್ಯಾಂಕಿನಲ್ಲೂ ಸಾಲ ಸಿಗುತ್ತಿರಲಿಲ್ಲ. ಆದರೆ ಇತ್ತೀಚೆಗೆ ಪಿಎಚ್.ಡಿ ಮಾಡಲು ಒಳ್ಳೆಯ ಅವಕಾಶಗಳು ಇವೆ. ಸರ್ಕಾರ ಒಳ್ಳೆಯ ಪ್ರೋತ್ಸಾಹಧನ ನೀಡುತ್ತಿದೆ. ಕೆಲವರು ಫೆಲೋಶಿಪ್‌ಗಾಗಿ ಪಿಎಚ್.ಡಿ ಮಾಡಬಾರದು. ಹಾಗೆ ಮಾಡುತ್ತಿದ್ದರೆ ಅವರು ಪಿಎಚ್.ಡಿಯಿಂದ ದೂರ ಸರಿದು ಮತ್ತೊಬ್ಬರಿಗೆ ಅವಕಾಶ ನೀಡಬೇಕು. ಪ್ರಮುಖವಾಗಿ ಪಿಎಚ್.ಡಿ ಮಾಡುವವರು ಉತ್ತಮವಾದ ಗೈಡ್ ಅನ್ನು ಆಯ್ಕೆ ಮಾಡಿಕೊಳ್ಳಬೇಕು. ಯಾರೋ ಒಬ್ಬರು ಸಹಿ ಮಾಡಿದರೆ ಅದು ಅಷ್ಟು ಉಪಯೋಗವಾಗುವುದಿಲ್ಲ. ಉತ್ತಮವಾದ ವಿಶ್ವವಿದ್ಯಾನಿಲಯ, ಉತ್ತಮವಾದ ಗೈಡ್, ಉತ್ತಮವಾದ ವಿಷಯಗಳನ್ನು ಆಯ್ಕೆ ಮಾಡಿಕೊಳ್ಳಬೇಕು ಎಂದು ಸಲಹೆ ನೀಡಿದರು. ಕಾರ್ಯಕ್ರಮದಲ್ಲಿ ಸಮಾಜ ಕಾರ್ಯ ಅಧ್ಯಯನ ವಿಭಾಗದ ಅಧ್ಯಕ್ಷರಾದ ಹಿರಿಯ ಪ್ರಾಧ್ಯಪಕ ಪ್ರೊ.ಆರ್.ಶಿವಪ್ಪ, ನಿರ್ದೇಶಕರಾದ ಪ್ರೊ.ಹೆಚ್.ಪಿ.ಜ್ಯೋತಿ, ಶಿಬಿರ ಸಂಯೋಜಕ ಪ್ರೊ.ಚಂದ್ರಮೌಳಿ ಹಾಜರಿದ್ದರು.

# ಮೈಮುಲ್‌ಗೆ ಭೇಟಿ ನೀಡಿದ ವಿಶೇಷಚೇತನ ಮಕ್ಕಳು



**ಮೈಸೂರು:** ಯಂಗ್ ಇಂಡಿಯಾ ಮೈಸೂರು ವಿಭಾಗದವತಿಯಿಂದ ಕಿವುಡು ಮತ್ತು ಮೂಗ ಮಕ್ಕಳ ಸರ್ಕಾರಿ ಶಾಲಾ ವಿದ್ಯಾರ್ಥಿಗಳಿಗಾಗಿ ಮೈಸೂರು ಜಿಲ್ಲಾ ಹಾಲು ಒಕ್ಕೂಟದ ಘಟಕಕ್ಕೆ ಶೈಕ್ಷಣಿಕ ಹಾಗೂ ಪ್ರಾಯೋಗಿಕ ಭೇಟಿ ನೀಡಿದರು.

ಸಮಗ್ರ ಹಾಗೂ ಅನುಭವಾಧಾರಿತ ಕಲಿಕೆಗೆ ಉತ್ತೇಜನ ನೀಡುವ ಉದ್ದೇಶದಿಂದ ಆಯೋಜಿಸಲಾದ ಈ ಕಾರ್ಯಕ್ರಮಕ್ಕೆ ಯಂಗ್ ಇಂಡಿಯಾ ಮೈಸೂರು ಘಟಕದ ಅಧ್ಯಕ್ಷೆ ಪ್ರಿಯಾಂಕಾ ಶ್ರೀಧರ್ ನೇತೃತ್ವವಹಿಸಿದ್ದರು. ಕಾರ್ಯಕಾರಿ ಸಮಿತಿಯ ವಿಶೇಷ ಸಲಹೆಗಾರ ಭರತ್ ಹಾಗೂ ಅಕ್ಸೆಸಿಬಿಲಿಟಿ ಚೇರ್ ಮರಿಯಾ ಆಂಡ್ರ್ಯೂಸ್ ಸಹಕಾರ ನೀಡಿದರು. ವಿದ್ಯಾರ್ಥಿಗಳ ಸುಗಮ ಸಂಚಾರಕ್ಕಾಗಿ ಸೇಫ್ ವೀಲ್ಸ್ ಪ್ರಜ್ವಲ್ ಬಸ್ ವ್ಯವಸ್ಥೆಯನ್ನು ಪ್ರಾಯೋಜಿಸಿದರು. ಭೇಟಿಯ ವೇಳೆ ವಿದ್ಯಾರ್ಥಿಗಳು ಹಾಲಿನ ಸಂಸ್ಕರಣೆ, ಪ್ಯಾಕೇಜಿಂಗ್, ಗುಣಮಟ್ಟ ನಿಯಂತ್ರಣ ಮತ್ತು ವಿತರಣೆಯಂತಹ ಡೈರಿ ಉದ್ಯಮದ ವಿವಿಧ ಹಂತಗಳನ್ನು ನೇರವಾಗಿ ವೀಕ್ಷಿಸಿದರು. ಮಾರ್ಗದರ್ಶಿತ ಪ್ರವಾಸದ ಮೂಲಕ ಉತ್ಪಾದನಾ ಪ್ರಕ್ರಿಯೆಯ ಪ್ರತಿಯೊಂದು ಹಂತವನ್ನು ವಿವರವಾಗಿ ತಿಳಿದುಕೊಂಡು, ಕೈಗಾರಿಕಾ ವಾತಾವರಣದ ಅನುಭವವನ್ನು ಪಡೆದುಕೊಂಡರು. ಇದರಿಂದ ಕಲಿಕೆ ಹೆಚ್ಚು ಆಸಕ್ತಿದಾಯಕವಾಗಿದ್ದು, ವಿಷಯಗಳ ಅರಿವು ಸುಲಭವಾಗಿ ಮೂಡಿತು.

## ಮಾದಕ ವಸ್ತು ಜಾಲ ನಿಷ್ಕ್ರಿಯಗೊಳಿಸಲು ಸಹಕರಿಸಿ: ಮಲ್ಲಿಕ್ ಸಲಹೆ




ಮೈಸೂರು: ಮಾದಕ ವಸ್ತುಗಳ ಸೇವನೆಯ ದುಷ್ಪರಿಣಾಮಗಳ ಬಗ್ಗೆ ಜಾಗೃತಿ ಕಾರ್ಯಕ್ರಮಗಳನ್ನು ನಿರಂತರವಾಗಿ ನಡೆಸಲಾಗುತ್ತಿದೆ. ಇದರೊಂದಿಗೆ ಮಾದಕ ವಸ್ತುಗಳ ಉತ್ಪಾದನೆ ಹಾಗೂ ಬೇಡಿಕೆಯ ಜಾಲವನ್ನು ನಿಷ್ಕ್ರಿಯೆಗೊಳಿಸಬೇಕಿದೆ ಎಂದು ಹೆಚ್ಚುವರಿ ಪೊಲೀಸ್ ಅಧೀಕ್ಷಕ ಸಿ.ಮಲ್ಲಿಕ್ ತಿಳಿಸಿದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಆಯೋಜಿಸಲಾಗಿದ್ದ ನಾರ್ಕೋರ್ಡ್ ಸಮಿತಿ ಸಭೆಯ ಅಧ್ಯಕ್ಷತೆವಹಿಸಿ ಮಾತನಾಡಿದರು. ಮಾದಕ ವಸ್ತುಗಳ ವ್ಯಸನಿಗಳನ್ನು ಗುರುತಿಸಿ ಅವರಿಗೆ ವ್ಯಸನ ಮುಕ್ತ ಕೇಂದ್ರಗಳ ಮೂಲಕ ಸಮಾಲೋಚನೆ ಏರ್ಪಡಿಸಿ ವ್ಯಸನ ಮುಕ್ತರನ್ನಾಗಿಸಲು ಶ್ರಮಿಸಬೇಕು. ಪೊಲೀಸ್ ಇಲಾಖೆವತಿಯಿಂದ ಹಲವಾರು ದಾಳಿಗಳನ್ನು ನಡೆಸಲಾಗುತ್ತಿದೆ. ಸಾರ್ವಜನಿಕರು ಮಾದಕ ವಸ್ತುಗಳ ಮಾರಾಟ ಜಾಲವನ್ನು ಸಂಪೂರ್ಣವಾಗಿ ತೊಡೆದುಹಾಕಲು ಸಾರ್ವಜನಿಕರು ಹಾಗೂ ವಿವಿಧ ಇಲಾಖೆಗಳ ಸಹಕಾರ ಅತಿಮುಖ್ಯ ಎಂದರು. ಡಿಸಿಪಿ ಸುಂದರ್ ರಾಜ್ ಮಾತನಾಡಿ ವಿಮುಕ್ತಿ ಎಂಬ ಹೊಸ ಯೋಜನೆಯನ್ನು ಜಾರಿ ಮಾಡಲಾಗಿದ್ದು, ನಕಾಡ್ 9 ಡ್ರಗ್ಸ್ ಮಾರಾಟದ ಬಗ್ಗೆ ಮಾಹಿತಿ ನೀಡಿದರೆ ಅವರ ಹೆಸರನ್ನು ಗೌಪ್ಯವಾಗಿ ಇಡಲಾಗುವುದು. ಡ್ರಗ್ಸ್ ವ್ಯಸನಿಗಳು ಕಂಡು ಬಂದಲ್ಲಿ ಅವರು ಮಾದಕವಸ್ತು ಸೇವನೆ ಮಾಡದಂತೆ ನೋಡಿಕೊಳ್ಳಲು ಒಬ್ಬರು ಪೊಲೀಸ್ ಪೇದೆಯನ್ನು ನಿಗಾವಹಿಸಲು ನಿಯೋಜಿಸಲಾಗುತ್ತಿದೆ ಎಂದರು.

### ಶಾಸಕ ಎಂ.ಆರ್.ಮಂಜುನಾಥ್ ಹೇಳಿಕೆ

# ಸರ್ಕಾರಿ ಶಾಲೆ ಖಾಸಗಿ ಶಾಲೆಗಿಂತ ಕಡಿಮೆ ಇಲ್ಲ




ಹನೂರು : ಖಾಸಗಿ ಶಾಲೆಗೆ ಯಾವುದರಲ್ಲೂ ಕಡಿಮೆ ಇಲ್ಲ ಎಂಬಂತೆ ವಿಭಿನ್ನವಾಗಿ ಶಾಲಾ ವಾರ್ಷಿಕೋತ್ಸವ ಕಾರ್ಯಕ್ರಮ ಹಮ್ಮಿಕೊಂಡಿರುವುದು ಶ್ಲಾಘನೀಯವಾಗಿದೆ ಎಂದು ಶಾಸಕ ಎಂ ಆರ್ ಮಂಜುನಾಥ್ ತಿಳಿಸಿದರು.

ತಾಲೂಕಿನ ಬಂಡಳ್ಳಿ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಹಮ್ಮಿಕೊಂಡಿದ್ದ ಶಾಲಾ ವಾರ್ಷಿಕೋತ್ಸವ ಕಾರ್ಯಕ್ರಮವನ್ನು ಉದ್ಘಾಟನೆ ಮಾಡಿ ನಂತರ ಮಾತನಾಡಿದರು.

ಇತ್ತೀಚಿನ ದಿನಗಳಲ್ಲಿ ಶಿಕ್ಷಣವು ಒಂದು ವ್ಯಾಪಾರವಾಗಿದ್ದು ಇದರ ನಡುವೆ ಸರ್ಕಾರಿ ಶಾಲೆಗಳು ನಲುಗಿ ಹೋಗುವಂತಹ ಪರಿಸ್ಥಿತಿ ನಿರ್ಮಾಣವಾಗಿದೆ. ಇಂತಹ ದಿನಮಾನಗಳಲ್ಲಿ ಇಲ್ಲೊಂದು ಸರ್ಕಾರಿ ಶಾಲೆ ಎಲ್ಲದರಲ್ಲೂ ಮೇಲುಗೈ ಸಾಧಿಸುವ ಮೂಲಕ ಖಾಸಗಿ ಶಾಲೆಗೆ ಕಮ್ಮಿ ಇಲ್ಲ ಎಂಬುದನ್ನ ಸಾಕ್ಷಿ ಸಮೇತ ದೃಢಪಡಿಸಿದೆ. ನಾವೆಲ್ಲರೂ ಕೂಡ ಈ ಶಾಲೆಯ ವ್ಯವಸ್ಥೆಯನ್ನು ನೋಡಿ ಕಣ್ತುಂಬಿಕೊಂಡು ತುಂಬಾ ಖುಷಿಯನ್ನು ಪಟ್ಟಿದ್ದೇವೆ. ನಮ್ಮ ಹನೂರು ಶೈಕ್ಷಣಿಕ ವಲಯದ ಇನ್ನಿತರ ಸರ್ಕಾರಿ ಶಾಲೆಗಳು ಸಹ ಇದೇ ಮಾದರಿಯಲ್ಲಿ ಬೆಳೆದರೆ ಉತ್ತಮವಾಗಿರುತ್ತದೆ ಎಂದರು.

ಚಲನಚಿತ್ರ ನಿರ್ದೇಶಕ ಚೇತನ್ ಕುಮಾರ್ ಮಾತನಾಡಿ ಹಳ್ಳಿಗಾಡಿನಲ್ಲಿರುವ ಸರ್ಕಾರಿ ಶಾಲೆಗಳಲ್ಲಿ ಅನೇಕ ಪ್ರತಿಭೆಗಳು ಹುಟ್ಟುತ್ತವೆ. ಇಂತಹ ಬಂಡಳ್ಳಿ ಗ್ರಾಮದಲ್ಲಿ ಹುಟ್ಟಿದಂತಹ ಪ್ರತಿಭೆ ಖ್ಯಾತ ಚಲನಚಿತ್ರ ನಿರ್ದೇಶಕ ಎಸ್. ಮಹೇಂದರ್ ಇಂದು ದೇಶದಾದ್ಯಂತ ಉತ್ತಮ ಹೆಸರು ಮಾಡಿದ್ದಾರೆ. ಅವರ ಚಿತ್ರಗಳನ್ನು ನೋಡುತ್ತಾ ಬೆಳೆದಂತಹ ನಾವು ಅವರಿಂದಲೇ ಸ್ಪೂರ್ತಿ ಪಡೆದು ಅವರಂತೆ ಆಗಿದ್ದೇವೆ . ಹಾಗಾಗಿ ಸರ್ಕಾರಿ ಶಾಲಾ ಮಕ್ಕಳು ಹೆಚ್ಚು ಪ್ರತಿಭೆಗಳನ್ನು ಒಳಗೊಂಡಂತ ಮಕ್ಕಳಾಗಿದ್ದು ಪೋಷಕರು ಸಹ ತಮ್ಮ ಮಕ್ಕಳನ್ನು ಸರ್ಕಾರಿ ಶಾಲೆಯಲ್ಲಿ ವಿದ್ಯಾಭ್ಯಾಸ ಕೊಡುವ ಕಡೆ ಗಮನ ವಹಿಸಬೇಕು ಎಂದರು.

### ಗಮನ ಸೆಳೆದ ನೃತ್ಯಗಳು

ಬಂಡಳ್ಳಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಶಾಲಾ ವಾರ್ಷಿಕೋತ್ಸವ ಪ್ರಯುಕ್ತ ಹಮ್ಮಿಕೊಂಡಿದ್ದ ನೃತ್ಯಗಳು ನೆರೆದಿದ್ದ ಸಭಿಕರನ್ನ ಮನೋರಂಜನೆಯ ಜೊತೆಗೆ ಪುಳಕಿತಗೊಳಿಸಿದವು. ಬಣ್ಣ ಬಣ್ಣದ ಚಿತ್ತಾರಗಳನ್ನು ಒಳಗೊಂಡಂತಹ ಆಕರ್ಷಕ ಕೊಡುಗೆಗಳನ್ನು ತೊಟ್ಟು ಮಕ್ಕಳು ವಿವಿಧ ಹಾಡುಗಳಿಗೆ ನೃತ್ಯ ಮಾಡಿದ್ದು ಎಲ್ಲರ ಮೆಚ್ಚುಗೆಗೆ ಪಾತ್ರವಾಯಿತು. ಇದೆ ಸಂದರ್ಭದಲ್ಲಿ ಮಾಜಿ ಶಾಸಕರಾದ ಆರ್ ನರೇಂದ್ರ, ಪರಿಮಳ ನಾಗಪ್ಪ, ಕ್ಷೇತ್ರ ಶಿಕ್ಷಣಾಧಿಕಾರಿ ಮಹೇಶ್, ಚಾಮುಲ್ ನ ಅಧ್ಯಕ್ಷ ನಂಜುಂಡಸ್ವಾಮಿ, ತಾಲೂಕು ಪಂಚಾಯಿತಿ ಮಾಜಿ ಸದಸ್ಯ ಜಾವದ್ ಅಹಮದ್, ಮುಖಂಡರಾದ ತಾರಿಕ್, ಜೆಸ್ಸಿಮ್, ಮುರುಡೇಶ್ವರ ಸ್ವಾಮಿ, ಹಾಗೂ ಶಿಕ್ಷಣ ಸಂಯೋಜಕರಾದ ಅಶೋಕ್, ಬಂಡಳ್ಳಿ ಶಾಲೆಯ ಮುಖ್ಯ ಶಿಕ್ಷಕ ಗುರುಸ್ವಾಮಿ, ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ಕೃಷ್ಣೇಗೌಡ, ಸೇರಿದಂತೆ ಇನ್ನೂ ಅನೇಕರು ಉಪಸ್ಥಿತರಿದ್ದರು.

## ಕೆ.ಆರ್.ಪೇಟೆಯಲ್ಲಿ ರಾಗಿ ಮತ್ತು ಭತ್ತದ ಖರೀದಿ ಕೇಂದ್ರವನ್ನು, ಶಾಸಕ ಹೆಚ್.ಟಿ.ಮಂಜು ಉದ್ಘಾಟಿಸಿದರು



**ಕೆ.ಆರ್.ಪೇಟೆ:** ರೈತ ಬಾಂಧವರು ತಾವು ಬೆಳೆದಿರುವ ಭತ್ತ ಮತ್ತು ರಾಗಿಯನ್ನು ಸರ್ಕಾರವು ಆರಂಭಿಸಿರುವ ಬೆಂಬಲ ಬೆಲೆಯ ಖರೀದಿ ಕೇಂದ್ರದಲ್ಲಿಯೇ ಮಾರಾಟ ಮಾಡಬೇಕು. ಯಾವುದೇ ಕಾರಣಕ್ಕೂ ಖಾಸಗಿ ವ್ಯಕ್ತಿಗಳಿಗೆ ಮಾರಾಟ ಮಾಡಿದರೆ ಕಷ್ಟಪಟ್ಟು ಬೆಳೆದ ಬೆಳೆಯ ಲಾಭವು ದಲ್ಲಾಳಿಯ ಪಾಲಾಗದಂತೆ ನೋಡಿಕೊಳ್ಳಬೇಕು ಎಂದು ಶಾಸಕ ಹೆಚ್.ಟಿ.ಮಂಜು ರೈತರಲ್ಲಿ ಮನವಿ ಮಾಡಿದರು.

ಅವರು ಪಟ್ಟಣದ ಎಪಿಎಂಸಿ ಆವರಣದಲ್ಲಿ ಕರ್ನಾಟಕ ನಾಗರೀಕ ಸರಬರಾಜು ನಿಗಮದ ವತಿಯಿಂದ ಸರ್ಕಾರದ ಬೆಂಬಲಿ ಬೆಲೆಯಲ್ಲಿ ಭತ್ತ ಮತ್ತು ರಾಗಿ ಖರೀದಿ ಕೇಂದ್ರವನ್ನು ರಾಮದಾನ್ಯ ರಾಗಿಯ ರಾಶಿಗೆ ಪೂಜೆ ಸಲ್ಲಿಸುವ ಮೂಲಕ ಚಾಲನೆ ನೀಡಿದರು.

ರೈತರು ಖರೀದಿ ಕೇಂದ್ರಕ್ಕೆ ಗುಣಮಟ್ಟದ ರಾಗಿ ಮತ್ತು ಭತ್ತವನ್ನು ಸರಬರಾಜು ಮಾಡಬೇಕು. ಯಾವುದೇ ಕಾರಣಕ್ಕೂ ಗುಣಮಟ್ಟ ಇಲ್ಲದೇ ಮಾರಾಟ ಮಾಡಬಾರದು. ರೈತರು ಮೋಸಗಾರರಲ್ಲ. ಅವರು ಬೆಳೆದ ರಾಗಿಯನ್ನು ಗುಣಮಟ್ಟವನ್ನು ಕಾಪಾಡಿಯೇ ಸರಕಾರದ ಬೆಂಬಲ ಬೆಲೆಯಲ್ಲಿ ಮಾರಾಟವನ್ನು ಮಾಡುತ್ತಾರೆ. ಆದರೆ ಮಧ್ಯವರ್ತಿಗಳು ಬೇರೆ ಭಾಗಗಳಿಂದ ರಾಗಿಯನ್ನು ಕಡಿಮೆ ಬೆಲೆಗೆ ಖರೀದಿಸಿ ನಮ್ಮದೆ ರೈತರ ಆರ್‌ಟಿಸಿಗಳನ್ನು ದುರುಪಯೋಪಡಿಸಿಕೊಂಡು ಸರಕಾರಕ್ಕೆ ಮಾರಾಟ ಮಾಡುತ್ತಾರೆ. ಎಂದರು.ಟಿಎಪಿಸಿಎಂಎಸ್ ಅಧ್ಯಕ್ಷ ರ್‍ನೇನಹಳ್ಳಿ ಬಲದೇವ್, ಎಪಿಎಂಸಿ ಮಾಜಿ ಅಧ್ಯಕ್ಷ ಹೊನ್ನೇನಹಳ್ಳಿ ನಾಗರಾಜೇಗೌಡ, ಎಪಿಎಂಸಿ ಕಾರ್ಯದರ್ಶಿ ವಿದ್ಯಾ, ಕೆಎಸ್‌ಎಫ್‌ಸಿ ವ್ಯವಸ್ಥಾಪಕ ಮನೋಹರ್, ಆಹಾರ ಇಲಾಖೆಯ ಅಧಿಕಾರಿ ನಟರಾಜ್, ಜೆಡಿಎಸ್ ಮುಖಂಡ ಪಿಕೆಜಿ ಮಹೇಶ್ ಮತ್ತಿತರರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು,


ಕರ್ನಾಟಕ ಸರ್ಕಾರ
(ಆಯುಷ್ ಇಲಾಖೆ)
**ಸರ್ಕಾರಿ ಪ್ರಕೃತಿ ಚಿಕಿತ್ಸೆ ಮತ್ತು ಯೋಗ ವೈದ್ಯಕೀಯ ಮಹಾವಿದ್ಯಾಲಯ ಮತ್ತು ಆಸ್ಪತ್ರೆ,**
ಬೃಂದಾವನ ಬಡಾವಣೆ, ಕೆ.ಆರ್.ಎಸ್.ರಸ್ತೆ,ಮೈಸೂರು–570020.
Email ID:gncymchospital2017@gmail.com
Ph. No.0821-2512121
ಸಂಖ್ಯೆ:ಜಿಎನ್‌ಸಿ&ಹೆಚ್/10/ಸರಬ/2025–26 ದಿನಾಂಕ: 12.02.2026

**ಇ–ಟೆಂಡರ್ ಆಹ್ವಾನ ಪ್ರಕಟಣೆ**

ಸರ್ಕಾರಿ ಪ್ರಕೃತಿ ಚಿಕಿತ್ಸೆ ಮತ್ತು ಯೋಗ ವೈದ್ಯಕೀಯ ಮಹಾವಿದ್ಯಾಲಯ ಮತ್ತು ಆಸ್ಪತ್ರೆ ಮೈಸೂರು ಇಲ್ಲಿನ ಒಳರೋಗಿಗಳ ಹಿತದೃಷ್ಠಿಯಿಂದ 2025–26ನೇ ಸಾಲಿನಿಂದ ಒಂದು ವರ್ಷದ ಅವಧಿಗೆ ಇ–ಟೆಂಡರ್ ಮುಖಾಂತರ ಸಿದ್ಧಪಡಿಸಿದ ಉಪಹಾರ ಮತ್ತು ಪಥ್ಯಾಹಾರವನ್ನು ಖರೀದಿಸುವ ಸಲುವಾಗಿ ಕೆಪಿಪಿ–ಪ್ರಕ್ಯೂರ್‌ಮೆಂಟ್ ಮುಖಾಂತರ ಇ–ಟೆಂಡರ್ ಆಹ್ವಾನಿಸಲಾಗಿದೆ. ಆಸಕ್ತಿಯುಳ್ಳವರು ನಿಗಧಿತ **ದಿ: 12.02.2026 ರಿಂದ 26.02.2026ರ ಸಂಜೆ 5.30** ಗಂಟೆಯವರೆಗೆ ಸಲ್ಲಿಸುವುದು ಇ–ಟೆಂಡರ್ ಅಂದಾಜು ಮೊತ್ತ **ರೂ.42.00** ಲಕ್ಷಗಳು ಹಾಗೂ ಹೆಚ್ಚಿನ ಮಾಹಿತಿಗಾಗಿ ಕಛೇರಿ ವೇಳೆಯಲ್ಲಿ ಸಂಪರ್ಕಿಸುವುದು.

ಸಹಿ/– ಪ್ರಾಚಾರ್ಯರು
DIPR/DDMYS/1665/KSMCA/941/2025-26


# ತಾಲ್ಲೂಕಿನ ವಿವಿಧೆಡೆ ಸಡಗರ ಸಂಭ್ರಮದ ಶಿವರಾತ್ರಿ ಹಬ್ಬ ಆಚರಣೆ

## ತಾಲ್ಲೂಕಿನ ವಿವಿಧೆಡೆ ಈಶ್ವರ, ಶಿವನ ದೇವಾಲಯಗಳಲ್ಲಿ ಶಿವರಾತ್ರಿ

**ಕೆ.ಆರ್.ಪೇಟೆ:** ತಾಲ್ಲೂಕಿನ ವಿವಿಧೆಡೆ ಈಶ್ವರ ಹಾಗೂ ಶಿವನ ದೇವಾಲಯಗಳಲ್ಲಿ ಶಿವರಾತ್ರಿ ಹಬ್ಬವನ್ನು ಶ್ರದ್ಧಾ–ಭಕ್ತಿಯಿಂದ, ಸಡಗರ ಸಂಭ್ರಮದಿಂದ ಆಚರಿಸಲಾಯಿತು.

ಭಾನುವಾರ ಮುಂಜಾನೆಯಿಂದಲೇ ಶಿವನ ದೇವಾಲಯಗಳಲ್ಲಿ ದೇವರಿಗೆ ಬಿಲ್ವಪತ್ರೆ, ಜೇನುತುಪ್ಪ, ಎಳೆನೀರು, ಗಂಗಾಜಲ ಮತ್ತು ಬಿಲ್ವ ಪತ್ರೆಯನ್ನು, ಬಿಲ್ವದ ಹಣ್ಣು, ದಾತುರ ಅರ್ಪಿಸಿ ಶಿವನನ್ನು ಪೂಜಿಸಿಲಾಯಿತು. ಭಕ್ತಾಧಿಗಳು ಬೆಳಿಗ್ಗೆಯಿಂದ ಸಂಜೆಯವರೆವಿಗೂ ಸರತಿಯ ಸಾಲಿನಲ್ಲಿ ನಿಂತು ಹೂ,ಹಣ್ಣು–ಕಾಯಿ ಅರ್ಪಿಸಿ ಪೂಜೆ ಸಲ್ಲಿಸಿ ದೇವರ ದರ್ಶನ ಪಡೆದುಕೊಂಡರು.

ಅನೇಕ ದೇವಾಲಯಗಳಲ್ಲಿ ಹಾಲು, ಮೊಸರು, ಜೇನು, ತುಪ್ಪ, ಸಕ್ಕರೆ, ಗಂಗಾಜಲ ಸೇರಿದಂತೆ ವಿವಿಧ ಅಭಿಷೇಕಗಳನ್ನು ಅರ್ಚನೆಗಳನ್ನು ಭಕ್ತರ ಇಷ್ಟಾರ್ಥ ಸಿದ್ದಿಗೆ ದೇವರಲ್ಲಿ ಪ್ರಾರ್ಥನೆ ಸಲ್ಲಿಸಲಾಯಿತು. ಹಲವು ದೇವಾಲಯಗಳಲ್ಲಿ ಭಕ್ತರಿಗೆ ಹಣ್ಣು ಮತ್ತ ಹಣ್ಣಿನ ರಸವನ್ನು ಪ್ರಸಾದದ ರೂಪವಾಗಿ ನೀಡಲಾಯಿತು. ಶಿವಲಿಂಗವನ್ನು ಬಿಲ್ವಪತ್ರೆಗಳಿಂದ ಅಲಂಕರಿಸಲಾಗಿತ್ತು. ಚಂದನ ಮತ್ತು ವಿಭೂತಿ ಭಸ್ಮವನ್ನು ಅರ್ಪಿಸಿ ಅದನ್ನು ಭಕ್ತರಿಗೆ ಹಣೆಗೆ ಹಚ್ಚಿಕೊಳ್ಳಲು ನೀಡಲಾಯಿತು. ದೇವಾಲಯಕ್ಕೆ ತೆರಳಿದ ಭಕ್ತರು ನಮಃ ಶಿವಾಯ, ಓಂ ನಮಃ ಶಿವಾಯ ಎಂದು ಶಿವನನ್ನು ಜಪಿಸುತ್ತಾ ಪೂಜೆ ಸಲ್ಲಿಸಿ ತಮ್ಮ ಭಕ್ತಿ–ಭಾವ ಪ್ರದರ್ಶನ ಮಾಡಿದರು.

ಶಾಸಕ ಹೆಚ್.ಟಿ.ಮಂಜು, ಕರ್ನಾಟಕ ರಾಜ್ಯ ಕೈಮಗ್ಗ ಅಭಿವೃದ್ಧಿ ನಿಗಮದ ರಾಜ್ಯಾಧ್ಯಕ್ಷ ಬಿ.ನಾಗೇಂದ್ರಕುಮಾರ್, ಉಪ ವಿಭಾಗಾಧಿಕಾರಿ ಡಾ.ಕೆ.ಶ್ರೀನಿವಾಸ್, ತಹಸೀಲ್ದಾರ್ ಎಸ್.ಯು.ಅಶೋಕ್, ಮಾಜಿ ಶಾಸಕರಾದ ಕೆ.ಬಿ.ಚಂದ್ರಶೇಖರ್, ಬಿ.ಪ್ರಕಾಶ್, ಸಮಾಜ ಸೇವಕ ಆರ್.ಟಿ.ಓ.ಮಲ್ಲಿಕಾರ್ಜುನ್, ಮಿತ್ರ ಫೌಂಡೇಷನ್ ಅಧ್ಯಕ್ಷ ವಿಜಯ್ ರಾಮೇಗೌಡ, ಸಮಾಜ ಸೇವಕ ಹೊಸಹೊಳಲು ನಂಜುಂಡಸ್ವಾಮಿ, ಡಿಸಿಸಿ ಬ್ಯಾಂಕ್ ನಿರ್ದೇಶಕ ಎಸ್.ಅಂಬರೀಶ್, ಮನ್‌ಮುಲ್ ನಿರ್ದೇಶಕರಾದ ಡಾಲು ರವಿ, ಎಂ.ಬಿ.ಹರೀಶ್, ಟಿಎಪಿಸಿಎಂಎಸ್ ಅಧ್ಯಕ್ಷ ಬಲದೇವ್, ನಿರ್ದೇಶಕರಾದ ಹೆಚ್.ಟಿ.ಲೋಕೇಶ್, ದಿಲೀಪ್‌ಕುಮಾರ್, ಕರ್ನಾಟಕ ರಾಜ್ಯ ಕೈಗಾರಿಕಾ ಸರಬರಾಜು ಸಹಕಾರ ಸಂಘಗಳ ಮಹಾಮಂಡಳದ ರಾಜ್ಯಾಧ್ಯಕ್ಷ ಬಸ್ ಸಂತೋಷ್‌ಕುಮಾರ್, ತಾಲ್ಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷ ಎ.ಬಿ.ಕುಮಾರ್, ಅಗ್ರಹಾರಬಾಚಹಳ್ಳಿ ಗ್ರಾ.ಪಂ.ಅಧ್ಯಕ್ಷ ಎ.ಸಿ.ದಿವಿಕುಮಾರ್, ಬಲ್ಲೇನಹಳ್ಳಿ ಬಿ.ಎಸ್.ರಾಮು, ಬಲ್ಲೇನಹಳ್ಳಿ ರಮೇಶ್, ಕಬ್ಬಲಗೆರೆಪುರ ಪುಟ್ಟಸ್ವಾಮೀಗೌಡ, ಸೇರಿದಂತೆ ವಿವಿಧ ಗಣ್ಯರು ಇಡೀ ದಿನ ತಾಲ್ಲೂಕಿನ ಹಲವಾರು ಶಿವಾಲಯಗಳಿಗೆ ತೆರಳಿ ವಿಶೇಷ ಪೂಜೆ ಸಲ್ಲಿಸಿ, ದೇವರ ದರ್ಶನ ಪಡೆದರು. ನಾಡಿಗೆ ಶಿವರಾತ್ರಿ ಹಬ್ಬವು ಸುಖ–ಶಾಂತಿ ನೆಮ್ಮದಿಯನ್ನು ತರಲಿ ಎಂದು ಹಾರೈಸಿದರು.

ತಾಲ್ಲೂಕಿನ ಅಗ್ರಹಾರಬಾಚಹಳ್ಳಿ ಶ್ರೀ ಹುಣಸೇಶ್ವರ, ಶ್ರೀ ಅಮೃತೇಶ್ವರ ದೇವಾಲಯ, ಕೆ.ಆರ್.ಪೇಟೆ ಪಟ್ಟಣದ ಶ್ರೀ ಮಲ್ಲಿಕಾರ್ಜುನ–ಭ್ರಮರಾಂಭ ದೇವಾಲಯ, ಸಾರಂಗಿಯ ಶ್ರೀ ರಾಮೇಶ್ವರ ಹಾಗೂ ಶ್ರೀ ಈಶ್ವರ ದೇವಾಲಯ, ವಳಗೆರೆಮೆಣಸದ ಏಕಾಥೇಶ್ವರ ದೇವಾಲಯ, ಬಲ್ಲೇನಹಳ್ಳಿ, ಮಲ್ಲೇನಹಳ್ಳಿ, ಜಿ.ಬೊಪ್ಪನಹಳ್ಳಿ, ಬಿ.ಗಂಗನಹಳ್ಳಿಗಳ ಶಿವಾಲಯಗಳಲ್ಲಿ, ಅಂಬೇಡ್ಕರ್‌ನಗರ ಶ್ರೀ ಶನೇಶ್ವರ ದೇವಾಲಯ, ದೊಡ್ಡಗಾಡಿಗನಹಳ್ಳಿಯ ಅರ್ಚಕ ರಂಗೇಗೌಡರ ನೇತೃತ್ವದ ಶ್ರೀ ಶನೇಶ್ವರ ದೇವಾಲಯ, ಜೋಡಿಲಿಂಗೇಶ್ವರ ದೇವಾಲಯ, ಕಾಪನಹಳ್ಳಿಯ ಬಿಳಿಕಲ್ ಬಾರೆಯ ಶ್ರೀ ಶನೇಶ್ವರ ದೇವಾಲಯ, ಅಂಬಿಗರಹಳ್ಳಿಯ ತ್ರಿವೇಣಿ ಸಂಗಮ ಹಾಗೂ ಪುರ ಗ್ರಾಮದ ಶ್ರೀ ಮಲೆ ಮಹದೇಶ್ವರ ದೇವಾಲಯ, ಚಿಕ್ಕಗಾಡಿಗನಹಳ್ಳಿಯ ಕಾಡು ಬಸವೇಶ್ವರ ದೇವಾಲಯ, ಮೋದೂರಿನ ಶ್ರೀ ರಾಮಲಿಂಗೇಶ್ವರ ದೇವಾಲಯ, ಹೊಸಹೊಳಲು ಶ್ರೀ ಶನೇಶ್ವರ ದೇವಾಲಯ ಸೇರಿದಂತೆ ತಾಲ್ಲೂಕಿನ ಶಿವರಾತ್ರಿ ಹಬ್ಬವನ್ನು ಆಚರಣೆ ಮಾಡಲಾಯಿತು.






### ಹೊಸಹೊಳಲಿನಲ್ಲಿ ಅನ್ನಧಾನ

**ಪಟ್ಟಣದ ಹೊಸಹೊಳಲು ವಾರ್ಡ್ ನಂ.18ರಲ್ಲಿರುವ ಶ್ರೀ ಶನೇಶ್ವರ ಸ್ವಾಮಿ ದೇವಾಲಯದ ವತಿಯಿಂದ ಶಿವರಾತ್ರಿ ಅಂಗವಾಗಿ ಜಾನಪದ ಕಲಾತಂಡಗಳೊಂದಿಗೆ ಗ್ರಾಮದಲ್ಲಿ ಶನೇಶ್ವರ ಸ್ವಾಮಿಯ ಮೆರವಣಿಗೆ ಮಾಡಲಾಯಿತು. ಭಾನುವಾರ ರಾತ್ರಿ ಜಾಗರಣೆಯಲ್ಲಿ ಭಾಗವಹಿಸಿದ್ದ ಎಲ್ಲಾ ಭಕ್ತಾಧಿಗಳಿಗೆ ಸೋಮವಾರ ಅನ್ನಧಾನ ಕಾರ್ಯಕ್ರಮ ಏರ್ಪಡಿಸಲಾಗಿತ್ತು. ಸಮಾಜ ಸೇವಕ ಹೊಸಹೊಳಲು ನಂಜುಂಡಸ್ವಾಮಿ ಅವರು ಅನ್ನಧಾನದ ಸಂಪೂರ್ಣ ಖರ್ಚುವೆಚ್ಚವನ್ನು ವಹಿಸಿಕೊಂಡು ಅನ್ನಧಾನ ಕಾರ್ಯಕ್ರಮ ನಡೆಸಿಕೊಟ್ಟರು.**

# ಸಾಮಾಜಿಕ ಜವಾಬ್ದಾರಿಯ ಜೊತೆಗೆ ಶಿಕ್ಷಣಕ್ಕೆ ಬೆಂಬಲ

**ಚಾಮರಾಜನಗರ:** ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಇಂದು ಹಿಂದುಳಿದ ವರ್ಗಗಳ ಬಾಲಕಿಯರ ವಸತಿ ನಿಲಯಕ್ಕೆ ಭೇಟಿ ನೀಡಿ ವಿದ್ಯಾರ್ಥಿನಿಯರ ಕಲ್ಯಾಣದ ಬಗ್ಗೆ ಸಮಗ್ರ ಪರಿಶೀಲನೆ ನಡೆಸಿದರು.

ಭೇಟಿಯ ವೇಳೆ ವಸತಿ ನಿಲಯದ ಮೂಲಸೌಕರ್ಯಗಳು, ವಸತಿ ವ್ಯವಸ್ಥೆ, ಸ್ವಚ್ಛತೆ ಹಾಗೂ ಆಹಾರ ಗುಣಮಟ್ಟವನ್ನು ಪರಿಶೀಲಿಸಲಾಯಿತು.



ವಿದ್ಯಾರ್ಥಿನಿಯರೊಂದಿಗೆ ಸಂವಾದ ನಡೆಸಿ ಅವರ ಆರೋಗ್ಯ, ಶಿಕ್ಷಣ ಹಾಗೂ ಇತರ ಅಗತ್ಯಗಳ ಕುರಿತು ಮಾಹಿತಿ ಪಡೆದು, ಉತ್ತಮ ಕಲಿಕಾ ವಾತಾವರಣ ಒದಗಿಸುವಂತೆ ಅಧಿಕಾರಿಗಳಿಗೆ ಸೂಚನೆ ನೀಡಲಾಯಿತು.

ಈ ಸಂದರ್ಭದಲ್ಲಿ ರೋಟರಿ ಸಿಲ್ಕ್ ಸಿಟಿ ಸಂಸ್ಥೆಯವರು ಆಯೋಜಿ ಸಿದ್ದ ಆಹಾರ ಮೇಳದಿಂದ ಸಂಗ್ರಹಿಸಿದ ನಿಧಿಯನ್ನು ಸಾಮಾಜಿಕ ಹಿತಾರ್ಥ ಕ್ಕಾಗಿ ಬಳಸಿ, ವಸತಿ ನಿಲಯದ ವಿದ್ಯಾರ್ಥಿನಿಯರಿಗೆ ಓದು ಮೇಜುಗಳು ಮತ್ತು ಕುರ್ಚಿಗಳನ್ನು ದಾನ ಮಾಡಿದರು. ಈ ಸೇವಾ ಕಾರ್ಯಕ್ಕೆ ಜಿಲ್ಲಾ ಆಡಳಿತವು ಪ್ರತೀಕಾತ್ಮಕವಾಗಿ ಬೆಂಬಲ ಸೂಚಿಸಿ, ಸಂಸ್ಥೆಯ ಸಮಾಜಮುಖಿ ಕಾರ್ಯಚಟುವಟಿಕೆಗಳನ್ನು ಶ್ಲಾಘಿಸಿತು. ಸಾಮಾಜಿಕ ಹೊಣೆಗಾರಿಕೆಯಿಂದ ಕಾರ್ಯನಿರ್ವಹಿಸುವ ರೋಟರಿ ಮುಂತಾದ ಸಂಸ್ಥೆಗಳ ಸೇವಾ ಚಟುವಟಿಕೆಗಳಿಗೆ ಜಿಲ್ಲಾ ಆಡಳಿತವು ಸದಾ ಬೆಂಬಲ ನೀಡುತ್ತದೆ. ಸರ್ಕಾರ ಹಾಗೂ ಸಮಾಜ ಕೈಜೋಡಿಸಿದಾಗ ಶಿಕ್ಷಣ ಕ್ಷೇತ್ರದಲ್ಲಿ ಮಹತ್ವದ ಬದಲಾವಣೆ ಸಾಧ್ಯವಾಗುತ್ತದೆ ಎಂಬುದನ್ನು ಈ ಉಪಕ್ರಮ ಮತ್ತೊಮ್ಮೆ ಸಾಬೀತುಪಡಿಸಿದೆ.

## ಆಡುವಳ್ಳಿ ಅಶೋಕ ಬಡಾವಣೆಯಲ್ಲಿ ಜಾತ್ರಾ ಮಹೋತ್ಸವ

**ಹಾಸನ:** ಮಹಾಶಿವರಾತ್ರಿ ಹಬ್ಬದ ಅಂಗವಾಗಿ ನಗರದ ಆಡುವಳ್ಳಿ ಅಶೋಕ ಬಡಾವಣೆಯ ಗ್ರಾಮದೇವತೆ ಶ್ರೀ ಲಕ್ಷ್ಮೀದೇವಿ, ಶ್ರೀ ಲಕ್ಕಮ್ಮ, ಶ್ರೀ ಶನೇಶ್ವರಸ್ವಾಮಿಯವರ ದೇವಾಲಯದಲ್ಲಿ ಅದ್ದೂರಿ ಜಾತ್ರಾ ಮಹೋತ್ಸವ ಜರುಗಿತು.

ಆಡುವಳ್ಳಿ ಅಶೋಕ ಬಡಾವಣೆಯ ಗ್ರಾಮದೇವತೆ ಶ್ರೀ ಲಕ್ಷ್ಮೀದೇವಿ, ಶ್ರೀ ಲಕ್ಕಮ್ಮ, ಶ್ರೀ ಶನೇಶ್ವರಸ್ವಾಮಿಯವರ ದೇವಾಲಯದಲ್ಲಿ ಫೆ.14 ರಿಂದ ಫೆ.17 ಮಂಗಳವಾರದವರೆಗೆ ವಿವಿಧ ಧಾರ್ಮಿಕ ಕಾರ್ಯಕ್ರಮಗಳನ್ನು ಆಯೋಜಿಸಲಾಗಿತ್ತು. ಫೆ.14 ರಂದು ಶನಿವಾರ ಶ್ರೀ ಲಕ್ಷ್ಮೀದೇವಿ, ಶ್ರೀ ಲಕ್ಕಮ್ಮ ಮತ್ತು ಶ್ರೀ ಶನೇಶ್ವರಸ್ವಾಮಿ ಹಾಗೂ ಶ್ರೀ ಭೂತರಾಯ, ಶ್ರೀ ಕೆಂಚರಾಯಸ್ವಾಮಿಯವರಿಗೆ ಶ್ರೀ ಕ್ಷೇತ್ರ ರಾಮದೇವರಹಳ್ಳದಲ್ಲಿ ಪುಣ್ಯ ಮಾಡಿಸುವ ಕಾರ್ಯ ಜರುಗಿತು. ಫೆ 15 ಭಾನುವಾರ ಗಂಗಾಪೂಜೆಯೊಂದಿಗೆ ಅಮ್ಮನವರನ್ನು ನೆಡೆಮುಡಿಗೆಯಲ್ಲಿ ಗ್ರಾಮದ ಮುಖ್ಯ ದ್ವಾರದಿಂದ ಸನ್ನಿಧಿಗೆ ಬರಮಾಡಿಕೊಳ್ಳಯಾಯಿತು. ಸಂಜೆ ಅಲಂಕಾರ ಸಹಿತ ದೇವರ ದರ್ಶನ ಹಾಗೂ ಅಮ್ಮನವರಿಗೆ ಸಂಪ್ರದಾಯಿಕ ಪೂಜಾ ವಿಧಿವಿಧಾನಗಳಿಂದ ವಿಶೇಷ ಪೂಜೆಯನ್ನು ನೆರವೇರಿಸಿ ಪ್ರಸಾದ ವಿನಿಯೋಗ ಮಾಡಲಾಯಿತು.

ಫೆ.16 ಸೋಮವಾರ ಶ್ರೀ ಶನೇಶ್ವರ ಜಯಂತಿ ಪ್ರಯುಕ್ತ ವಿಶೇಷ ಅಲಂಕಾರದೊಂದಿಗೆ ಶ್ರೀ ಸ್ವಾಮಿಯವರಿಗೆ ಪೂಜಾ ಕಾರ್ಯಕ್ರಮ ಹಾಗೂ ಬಡಾವಣೆಯ ಪ್ರಮುಖ ಬೀದಿಗಳಲ್ಲಿ ಪುಷ್ಪಾಲಂಕೃತ ಭವ್ಯ ಮಂಟಪದಲ್ಲಿ ಶ್ರೀಯವರ ಅದ್ದೂರಿ ಮೆರವಣಿಗೆ ನೆಡದು ಫೆ.17 ಮಂಗಳವಾರ ಶ್ರೀ ಭೂತರಾಯ, ಶ್ರೀ ಕೆಂಚರಾಯಸ್ವಾಮಿಯವರಿಗೆ ಎಡೆ ಕೊಡುವ ಕಾರ್ಯಕ್ರಮ ಯಶಸ್ವಿಯಾಗಿ ಜರುಗಿತು.

ಈ ಅದ್ದೂರಿ ಜಾತ್ರಾ ಮಹೋತ್ಸವದಲ್ಲಿ ಆಡುವಳ್ಳಿ ಅಶೋಕ ಬಡಾವಣೆಯ ಹಿರಿಯ ಮುಖಂಡರು ಯುವಕರು ಹಾಜರಿದ್ದರು, ಮಹೋತ್ಸವವನ್ನು ಯಶಸ್ವಿಗೊಳಿಸಿದರು.



## ಬಿಲ್ವಪತ್ರೆ, ಜೇನುತುಪ್ಪ, ಎಳೆನೀರು, ಗಂಗಾಜಲ ಪೂಜೆ ಸಲ್ಲಿಕೆ

# ತಾಲ್ಲೂಕಿನ ವಿವಿಧೆಡೆ ಶಿವರಾತ್ರಿ ಆಚರಣೆ


**ಕೆ.ಆರ್.ಪೇಟೆ:** ತಾಲ್ಲೂಕಿನ ವಿವಿಧೆಡೆ ಈಶ್ವರ ಹಾಗೂ ಶಿವನ ದೇವಾಲಯಗಳಲ್ಲಿ ಶಿವರಾತ್ರಿ ಹಬ್ಬವನ್ನು ಶ್ರದ್ಧಾ ಭಕ್ತಿಯಿಂದ ಹಾಗೂ ಸಡಗರ ಸಂಭ್ರಮದಿಂದ ಆಚರಿಸಲಾಯಿತು.

ಭಾನುವಾರ ಮುಂಜಾನೆಯಿಂದಲೇ ಶಿವನ ದೇವಾಲಯಗಳಲ್ಲಿ ದೇವರಿಗೆ ಬಿಲ್ವಪತ್ರೆ, ಜೇನುತುಪ್ಪ, ಎಳೆನೀರು, ಗಂಗಾಜಲ ಮತ್ತು ಬಿಲ್ವ ಪತ್ರೆಯನ್ನು, ಬಿಲ್ವದ ಹಣ್ಣು, ದಾತುರ ಅರ್ಪಿಸಿ ಶಿವನನ್ನು ಪೂಜಿಸಿಲಾಯಿತು. ಭಕ್ತಾಧಿಗಳು ಬೆಳಿಗ್ಗೆಯಿಂದ ಸಂಜೆಯವರೆವಿಗೂ ಸರತಿಯ ಸಾಲಿನಲ್ಲಿ ನಿಂತು ಹೂ,ಹಣ್ಣು–ಕಾಯಿ ಅರ್ಪಿಸಿ ಪೂಜೆ ಸಲ್ಲಿಸಿ ದೇವರ ದರ್ಶನ ಪಡೆದುಕೊಂಡರು.

ಅನೇಕ ದೇವಾಲಯಗಳಲ್ಲಿ ಹಾಲು, ಮೊಸರು, ಜೇನು, ತುಪ್ಪ, ಸಕ್ಕರೆ, ಗಂಗಾಜಲ ಸೇರಿದಂತೆ ವಿವಿಧ ಅಭಿಷೇಕಗಳನ್ನು ಅರ್ಚನೆಗಳನ್ನು ಭಕ್ತರ ಇಷ್ಟಾರ್ಥ ಸಿದ್ದಿಗೆ ದೇವರಲ್ಲಿ ಪ್ರಾರ್ಥನೆ ಸಲ್ಲಿಸಲಾಯಿತು. ಹಲವು ದೇವಾಲಯಗಳಲ್ಲಿ ಭಕ್ತರಿಗೆ ಹಣ್ಣು ಮತ್ತ ಹಣ್ಣಿನ ರಸವನ್ನು ಪ್ರಸಾದದ ರೂಪವಾಗಿ ನೀಡಲಾಯಿತು. ಶಿವಲಿಂಗವನ್ನು ಬಿಲ್ವಪತ್ರೆಗಳಿಂದ ಅಲಂಕರಿಸಲಾಗಿತ್ತು. ಚಂದನ ಮತ್ತು ವಿಭೂತಿ ಭಸ್ಮವನ್ನು ಅರ್ಪಿಸಿ ಅದನ್ನು





ಭಕ್ತರಿಗೆ ಹಣೆಗೆ ಹಚ್ಚಿಕೊಳ್ಳಲು ನೀಡಲಾಯಿತು. ದೇವಾಲಯಕ್ಕೆ ತೆರಳಿದ ಭಕ್ತರು ನಮಃ ಶಿವಾಯ, ಓಂ ನಮಃ ಶಿವಾಯ ಎಂದು ಶಿವನನ್ನು ಜಪಿಸುತ್ತಾ ಪೂಜೆ ಸಲ್ಲಿಸಿ ತಮ್ಮ ಭಕ್ತಿ–ಭಾವ ಪ್ರದರ್ಶನ ಮಾಡಿದರು.

ಶಾಸಕ ಹೆಚ್.ಟಿ.ಮಂಜು, ಕರ್ನಾಟಕ ರಾಜ್ಯ ಕೈಮಗ್ಗ ಅಭಿವೃದ್ಧಿ ನಿಗಮದ ರಾಜ್ಯಾಧ್ಯಕ್ಷ ಬಿ.ನಾಗೇಂದ್ರಕುಮಾರ್, ಉಪ ವಿಭಾಗಾಧಿಕಾರಿ ಡಾ.ಕೆ.ಶ್ರೀನಿವಾಸ್, ತಹಸೀಲ್ದಾರ್ ಎಸ್.ಯು.ಅಶೋಕ್, ಮಾಜಿ ಶಾಸಕರಾದ ಕೆ.ಬಿ.ಚಂದ್ರಶೇಖರ್, ಬಿ.ಪ್ರಕಾಶ್, ಸಮಾಜ ಸೇವಕರು ಆರ್.ಟಿ.ಓ.ಮಲ್ಲಿಕಾರ್ಜುನ್, ಡಿಸಿಸಿ ಬ್ಯಾಂಕ್ ನಿರ್ದೇಶಕ ಎಸ್.ಅಂಬರೀಶ್, ಮನ್‌ಮುಲ್ ನಿರ್ದೇಶಕರಾದ ಡಾಲು ರವಿ, ಎಂ.ಬಿ.ಹರೀಶ್, ಟಿಎಪಿಸಿಎಂಎಸ್ ಅಧ್ಯಕ್ಷ ಬಲದೇವ್, ನಿರ್ದೇಶಕರಾದ ಹೆಚ್.ಟಿ.ಲೋಕೇಶ್, ದಿಲೀಪ್‌ಕುಮಾರ್, ಮಿತ್ರ ಫೌಂಡೇಷನ್ ಅಧ್ಯಕ್ಷ ವಿಜಯ್ ರಾಮೇಗೌಡ, ಕರ್ನಾಟಕ ರಾಜ್ಯ ಕೈಗಾರಿಕಾ ಸರಬರಾಜು ಸಹಕಾರ ಸಂಘಗಳ ಮಹಾಮಂಡಳದ ರಾಜ್ಯಾಧ್ಯಕ್ಷ ಬಸ್ ಸಂತೋಷ್‌ಕುಮಾರ್, ತಾಲ್ಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷ ಎ.ಬಿ.ಕುಮಾರ್ ಸೇರಿದಂತೆ ವಿವಿಧ ಗಣ್ಯರು ಇಡೀ ದಿನ ತಾಲ್ಲೂಕಿನ ಹಲವಾರು ಶಿವಾಲಯಗಳಿಗೆ ತೆರಳಿ ವಿಶೇಷ ಪೂಜೆ ಸಲ್ಲಿಸಿ, ದೇವರ ದರ್ಶನ ಪಡೆದರು. ನಾಡಿಗೆ ಶಿವರಾತ್ರಿ ಹಬ್ಬವು ಸುಖ–ಶಾಂತಿ ನೆಮ್ಮದಿಯನ್ನು ತರಲಿ ಎಂದು ಹಾರೈಸಿದರು.

ತಾಲ್ಲೂಕಿನ ಅಗ್ರಹಾರಬಾಚಹಳ್ಳಿ ಶ್ರೀ ಹುಣಸೇಶ್ವರ, ಶ್ರೀ ಅಮೃತೇಶ್ವರ ದೇವಾಲಯ, ಕೆ.ಆರ್.ಪೇಟೆ ಪಟ್ಟಣದ ಶ್ರೀ ಮಲ್ಲಿಕಾರ್ಜುನ–ಭ್ರಮರಾಂಭ ದೇವಾಲಯ, ಸಾರಂಗಿಯ ಶ್ರೀ ರಾಮೇಶ್ವರ ಹಾಗೂ ಶ್ರೀ ಈಶ್ವರ ದೇವಾಲಯ, ಬಲ್ಲೇನಹಳ್ಳಿ, ಮಲ್ಲೇನಹಳ್ಳಿ, ಜಿ.ಬೊಪ್ಪನಹಳ್ಳಿ, ಶಿವರಾತ್ರಿ ಹಬ್ಬವನ್ನು ಆಚರಣೆ ಮಾಡಲಾಯಿತು.


# ರಾಜ್ಯ ಬಜೆಟ್: ಜಿಲ್ಲೆಯ ರೈತರಿಂದ ಮುಖ್ಯಮಂತ್ರಿಗಳಿಗೆ ಬೇಡಿಕೆ ಸಲ್ಲಿಕೆ

**ಮೇಕೆದಾಟು ಯೋಜನೆಯ ಸಂಪೂರ್ಣ ಹಣ ಮೀಸಲಿಡಿ | ವೃಷಭಾವತಿ ನದಿ ನೀರು ಶುದ್ದೀಕರಣಕ್ಕೆ ಒತ್ತಾಯ | ಕೃಷಿ ಬಜೆಟ್ ಮಂಡನೆಗೆ ಸಲಹೆ**

**ರಾಮನಗರ:** ಮೇಕೆದಾಟು ಯೋಜನೆ ಅನುಷ್ಠಾನ, ವೃಷಭಾವತಿ ನದಿ ನೀರು ಶುದ್ದೀಕರಣ, ಪ್ರತಿ ಹೋಬಳಿಯಲ್ಲಿ ವೈಜ್ಞಾನಿಕ ಕಸ ವಿಲೇವಾರಿ, ಸರ್ಕಾರಿ ಶಾಲೆಗಳನ್ನು ಉಳಿಸಿಕೊಳ್ಳುವುದು ಸೇರಿದಂತೆ ವಿವಿಧ ಬೇಡಿಕೆಗಳನ್ನು 2026–27ನೇ ಅಯವ್ಯಯದಲ್ಲಿ ಈಡೇರಿಸಬೇಕು ಎಂದು ಕರ್ನಾಟಕ ರಾಜ್ಯ ರೈತ ಸಂಘದ ರಾಜ್ಯ ಮತ್ತು ಜಿಲ್ಲಾ ಪದಾಧಿಕಾರಿಗಳು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಮನವಿ ಸಲ್ಲಿಸಿದ್ದಾರೆ.

ಈ ವಿಚಾರವನ್ನು ಮಾಧ್ಯಮ ಪ್ರತಿನಿಧಿಗಳೊಂದಿಗೆ ಹಂಚಿಕೊಂಡಿರುವ ಕರ್ನಾಟಕ ರಾಜ್ಯ ರೈತ ಸಂಘದ ರಾಜ್ಯ ಸಂಚಾಲಕ ಚೀಲೂರು ಮುನಿರಾಜು, 2026–27ನೇ ಸಾಲಿನ ಬಜೆಟ್ ಮಂಡನೆಗೂ ಮುನ್ನ ಮುಖ್ಯಮಂತ್ರಿಗಳು ರಾಜ್ಯಾದ್ಯಂತ ರೈತ ಪ್ರಮುಖರನ್ನು ಆಹ್ವಾನಿಸಿ ಸಲಹೆಗಳನ್ನು ಪಡೆದುಕೊಂಡಿದ್ದಾರೆ. ಮುಖ್ಯಮಂತ್ರಿಗಳಿಗೆ ಸಲ್ಲಿಸಿರುವ ಮನವಿಯಲ್ಲಿ ಮೇಕೆದಾಟು ಯೋಜನೆಯ ಅನುಷ್ಠಾನ ಜಿಲ್ಲೆಯ ಬಹುಜನರ ಬಹು ನೀರೀಕ್ಷಿತ ಯೋಜನೆ. 2026–26ನೇ ಸಾಲಿನ ಆಯವ್ಯಯದಲ್ಲಿ ಈ ಯೋಜನೆಗೆ ಅಗತ್ಯವಿರುವ ಸಂಪೂರ್ಣ ಹಣವನ್ನು ಮೀಸಲಿಟ್ಟು, ನಿಮ್ಮ ಅವಧಿಯಲ್ಲೇ ಕಾಮಗಾರಿ ಪೂರ್ಣಗೊಳಿಸಲು ತಿಳಿಸಲಾಗಿದೆ ಎಂದರು.

### ವೃಷಭಾವತಿ ನೀರು ಶುದ್ದೀಕರಣಕ್ಕೆ ಒತ್ತಾಯ

ಬಿಡದಿ ಹೋಬಳಿಯಲ್ಲಿ ಹರಿಯುವ ವೃಷಭಾವತಿ ನದಿ ನೀರು ಶುದ್ದೀಕರಣಕ್ಕಾಗಿ ವೈಜ್ಞಾನಿಕವಾಗಿ ಜಲ ಶುದ್ದೀಕರಣ ಕಾರ್ಯಾಗಾರಗಳನ್ನು ಸ್ಥಾಪಿಸಬೇಕು ಬೈರಮಂಗಲ ಮತ್ತು ಸುತ್ತಮುತ್ತಲ ಗ್ರಾಮಗಳಲ್ಲಿ ಕೊಳಚೆ ನೀರು ಹರಿಯುವುದನ್ನು ತಪ್ಪಿಸಬೇಕು ಎಂದು ಮನವಿಯಲ್ಲಿ ಆಗ್ರಹಿಸಲಾಗಿದೆ ಎಂದರು.

ಬೆಂಗಳೂರು ದಕ್ಷಿಣ ಜಿಲ್ಲೆಗೆ ಬಜೆಟ್ ನ ವಿಶೇಷ ಕೊಡುಗೆ ಕೊಡಲು ಒತ್ತಾಯಿಸಲಾಗಿದೆ, ಸರ್ಕಾರಿ ಶಲೆಗಳ ಪುನಶ್ಚೇತನಕ್ಕೆ ಪ್ರತಿ ಶಾಲೆಗೆ ವಿಶೇಷ ಅನುದಾನ ಘೋಷಿಸಬೇಕು, ರಾಮನಗರ, ಕನಕಪುರ ಭಾಗದಲ್ಲಿ



ಮೆಡಿಕಲ್ ಕಾಲೇಜು ನಿರ್ಮಾಣ ಮಾಡಬೇಕು, ಜಿಲ್ಲೆಯ ಪ್ರತಿ ಹೋಬಳಿ ಯಲ್ಲಿ ವೈಜ್ಞಾನಿಕ ಕಸ ತ್ಯಾಜ್ಯ ಸಂಸ್ಕರಣ ಘಟಕ ಸ್ಥಾಪಿಸಬೇಕು, ರೇಷ್ಮೆ ನಗರಿ ಖ್ಯಾತಿಯ ರಾಮನಗರದಲ್ಲಿ ರೇಷ್ಮೆಗೆ ಪೂರಕವಾದ ಉತ್ಪಾದನಾ ಘಟಕಗಳ ಕೈಗಾರಿಕೆಗಳನ್ನು ತೆರೆಯಬೇಕು ಎಂದು ಒತ್ತಾಯಿಸಲಾಗಿದೆ ಎಂದು ತಿಳಿಸಿದರು.

### ಕೃಷಿ ಬೆಳೆಗೆ ಬೆಂಬಲ ಬೆಲೆಗೆ ಒತ್ತಾಯ

ರೈತರು ಬೆಳೆಯುವ ಎಲ್ಲಾ ಬೆಳೆಗಳಿಗೆ ನ್ಯಾಯಯುತ ಮತ್ತು ಬೆಂಬಲ ಬೆಲೆಗಳನ್ನು ಬಜೆಟ್ ಮೂಲಕ ಘೋಷಿಸಬೇಕು. ಪ್ರತ್ಯೇಕ ಕೃಷಿ ಬಜೆಟ್ ಮಂಡಿಸುವುದರ ಮೂಲಕ ರೈತರ ಪರ ಮುಖ್ಯಮಂತ್ರಿಗಳಾಗಿ ಎಂದು ಸಲಹೆ ನೀಡಲಾಗಿದೆ.

### ಕೌಶಲ್ಯ ತರಬೇತಿ ಕೇಂದ್ರಗಳನ್ನು ಸ್ಥಾಪಿಸಿ

ಪ್ರತಿ ತಾಲ್ಲೂಕಿನಲ್ಲಿ ನಿರುದ್ಯೋಗಿ ಯುವಕ, ಯುವತಿಯರಿಗಾಗಿ, ಕೌಶಲ್ಯ ತರಬೇತಿ ಕೇಂದ್ರಗಳನ್ನು ಸ್ಥಾಪಿಸಿ, ಸ್ವಯಂ ಉದ್ಯೋಗ ಕೈಗೊಳ್ಳಲು ಉತ್ತೇಜಿಸಬೇಕು ಎಂದು ತಿಳಿಸಲಾಗಿದೆ ಎಂದರು.

ರಾಮನಗರದ ಜಿಲ್ಲಾಧಿಕಾರಿಗಳು ರೈತರು ಹಾಗೂ ವಿವಿಧ ಸಂಘಟನೆಗಳ ಬಗ್ಗೆ ದ್ವೇಷ ಇರಿಸಿಕೊಂಡಿದ್ದಾರೆ. ಹೀಗಾಗಿ ಅವರು ತಮ್ಮ ಕಚೇರಿ ಆವರಣದಲ್ಲಿ ಸಂವಿಧಾನ ಬಾಹಿರವಾಗಿ ನಿಷೇಧಾಜ್ಞೆ ವಿಧಿಸಿ ಪ್ರತಿಭಟನೆಗಳಿಗೆ ಅವಕಾಶ ನೀಡುತ್ತಿಲ್ಲ. ಹೀಗಾಗಿ ಜಿಲ್ಲಾಧಿಕಾರಿಗಳ ಆದೇಶವನ್ನು ಶಾಶ್ವತವಾಗಿ ರದ್ದುಪಡಿಸಬೇಕು. ರೈತರು ಮತ್ತು ವಿವಿಧ ಸಂಘಟನೆಗಳ ಹೋರಾಟಗಾರರ ವಿರುದ್ದ ಹಾಕಿರುವ ಎಲ್ಲಾ ಕೇಸುಗಳನ್ನು ವಾಪಸ್ ಪಡೆಯಬೇಕು. ಈ ವಿಚಾರದಲ್ಲಿ ಸಂಬಂಧಿಸಿದ ಅಧಿಕಾರಿಗಳಿಗೆ ಸೂಕ್ತ ಸೂಚನೆ ನೀಡಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಗಮನಕ್ಕೆ ತರಲಾಗಿದೆ ಎಂದು ತಿಳಿಸಿದರು.

ಮುಖ್ಯಮಂತ್ರಿಗಳ ಸಭೆಯಲ್ಲಿ ತಾವು, ರಾಜ್ಯ ಉಪಾಧ್ಯಕ್ಷ ಮಲ್ಲಯ್ಯ, ಜಿಲ್ಲಾ ಕಾರ್ಯದರ್ಶಿ ಕಿರಣ್ ಕುಮಾರ್, ಜಿಲ್ಲಾ ರೈತ ಮಹಿಳಾ ಘಟಕದ ಅಧ್ಯಕ್ಷೆ ರತ್ನಮ್ಮ ಭಾಗವಹಿಸಿದ್ದಾಗಿ ಮಾಹಿತಿ ಕೊಟ್ಟರು.


**ಪಟ್ಟಣ ಪಂಚಾಯಿತಿ ಕಾರ್ಯಾಲಯ, ಯಳಂದೂರು**
Phone No: 08226-240026 HelpLine: 08226-240226
Website: www.yelandurtown.gov.in E-mail: itstaff_ulb_yelandur@yahoo.com
ನಂ.ಯು.ಪ.ಪಂ./ತಾವಿ/ಟೆಂಡರ್/03/2025–26 ದಿನಾಂಕ: 13.02.2026

**ಅಲ್ಪಾವಧಿ ಮರು ಟೆಂಡರ್ ಪ್ರಕಟಣೆ**

ಯಳಂದೂರು ಪಟ್ಟಣ ಪಂಚಾಯಿತಿಯ ವಿವಿಧ ಅನುದಾನಗಳ ಅಡಿಯಲ್ಲಿ ಈ ಕೆಳಕಂಡ ಕಾಮಗಾರಿಗಳಿಗೆ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಆಧ್ಯಾದೇಶ 1999 ಮತ್ತು ನಿಯಮಗಳು 2000 ದಂತೆ, ಕರ್ನಾಟಕ ಲೋಕೋಪಯೋಗಿ ಇಲಾಖೆ, ಮತ್ತು ಇ–ಪ್ರೊಕ್ಯೂರ್‌ಮೆಂಟ್ ಸೆಲ್, ಬೆಂಗಳೂರು ರವರಲ್ಲಿ ನೋಂದಾಯಿತ ಅರ್ಹ 4ನೇ ದರ್ಜೆ ಹಾಗೂ ಮೇಲ್ಪಟ್ಟ ಸಿವಿಲ್ ಗುತ್ತಿಗೆದಾರರುಗಳಿಂದ ಕರ್ನಾಟಕ ಪಬ್ಲಿಕ್ ಪ್ರೊಕೊರ್‌ಮೆಂಟ್ https://kppp.karnataka.gov.in/ ಪೋರ್ಟಲ್ (ಕೆಪಿಪಿ) ಮೂಲಕ ಐಟಂವಾರು ಆನ್‌ಲೈನ್ ಟೆಂಡರ್‌ಗಳನ್ನು ಆಹ್ವಾನಿಸಲಾಗಿದ್ದು, ಆಸಕ್ತ ಗುತ್ತಿಗೆದಾರರು ತಮ್ಮ ದರ ನಮೂದಿಸಿದ ಟೆಂಡರ್‌ಗಳನ್ನು KW-1 ರ ನಿಯಮಗಳಂತೆ ಈ ಕೆಳಗೆ ನಿಗಧಿಪಡಿಸಿದ ದಿನಾಂಕಗಳಂದು ಆನ್‌ಲೈನ್‌ನಲ್ಲಿ ಸಲ್ಲಿಸತಕ್ಕದ್ದು. ಕಾಮಗಾರಿಗಳ ವಿವರ ಹಾಗೂ ವಿವರವಾದ ಟೆಂಡರ್ ಪ್ರಕಟಣೆಯನ್ನು ಯಳಂದೂರು ಪಟ್ಟಣ ಪಂಚಾಯಿತಿ ಕಛೇರಿ ಸೂಚನಾ ಫಲಕದಲ್ಲಿ ಮತ್ತು ವೆಬ್ ಸೈಟ್ http://www.yelandurtown.mrc.gov.in ನಲ್ಲಿ ವೀಕ್ಷಿಸಬಹುದು. (ಮ್ಯಾನುಯಲ್ ಟೆಂಡರ್‌ಗಳನ್ನು ಸ್ವೀಕರಿಸಲಾಗುವುದಿಲ್ಲ) ಕೆಪಿಪಿ ಪೋರ್ಟಲ್ ಮೂಲಕ ಟೆಂಡರ್ ಸಲ್ಲಿಸಲು ಕೊನೆಯ ದಿನಾಂಕ ಮತ್ತು ಸಮಯ: 24.02.2026 up to 5.30 pm, ಕೆಪಿಪಿ ಪೋರ್ಟಲ್ ಮೂಲಕ ಟೆಂಡರ್ ತೆರೆಯುವ ದಿನಾಂಕ: 26.02.2026 at 11.00 am

| ಕ್ರ. ಸಂ | ಇಂಡೆಂಟ್ ನಂ | ಅಂದಾಜು ಮೊತ್ತ (ರೂ.ಲಕ್ಷಗಳಲ್ಲಿ) | ಟೆಂಡರ್‌ಗಿಟ್ಟ ಮೊತ್ತ (ರೂ.ಲಕ್ಷಗಳಲ್ಲಿ) | ಇಎಂಡಿ (ರೂಗಳಲ್ಲಿ) |
|---|---|---|---|---|
| 1 | DMA/2025-26/RD/WORK INDENT 49487/CALL-3 | 4.58 | 3.87 | 9675.00 |
| 2 | DMA/2025-26/OW/WORK INDENT 49489/CALL-3 | 2.30 | 1.94 | 4850.00 |
| 3 | DMA/2025-26/OW/WORK_INDENT 49493/CALL-3 | 4.58 | 3.86 | 9650.00 |
| 4 | DMA/2025-26/OW/WORK INDENT 49481/CALL-3 | 2.29 | 1.92 | 4800.00 |
| 5 | DMA/2025-26/RD/WORK_INDENT 49500/CALL-3 | 1.775 | 1.49 | 3725.00 |
| 6 | DMA/2025-26/OW/WORK INDENT 55336 | 1.00 | 0.84 | 2100.00 |

ಸಹಿ/– ಮುಖ್ಯಾಧಿಕಾರಿ, ಪಟ್ಟಣ ಪಂಚಾಯಿತಿ ಯಳಂದೂರು.
ಸಂ: ವಾಸಾಸಂಇ:ಚಾನಗರ:719:2025–26

## ಸಂಕ್ಷಿಪ್ತ ಸುದ್ದಿ

### ಫೆ.19 ರಂದು ಛತ್ರಪತಿ ಶಿವಾಜಿ ಜಯಂತಿ



**ಮೈಸೂರು:** ಜಿಲ್ಲಾಡಳಿತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಮೈಸೂರು ಮಹಾನಗರ ಪಾಲಿಕೆ ವತಿಯಿಂದ ಛತ್ರಪತಿ ಶಿವಾಜಿ ಜಯಂತಿ ಫೆಬ್ರವರಿ 19 ರಂದು ಬೆಳಗ್ಗೆ 12.30 ಘಂಟೆಗೆ ಕರ್ನಾಟಕ ಕಲಾ ಮಂದಿರದಲ್ಲಿ ಆಯೋಜಿಸಲಾಗಿದೆ. ಬೆಳಗ್ಗೆ 9 ಘಂಟೆಗೆ ಅರಮನೆಯ ಕೋಟೆ ಆಂಜನೇಯ ಸ್ವಾಮಿ ದೇವಸ್ಥಾನದ ಮುಂಭಾಗದಿಂದ ಕಲಾ ಮಂದಿರದವರೆಗೂ ಮೆರವಣಿಗೆ ಹಮ್ಮಿಕೊಳ್ಳಲಾಗಿದೆ.

ಮುಖ್ಯ ಮಂತ್ರಿಗಳಾದ ಸಿದ್ದರಾಮಯ್ಯ ಹಾಗೂ ಉಕ್ಕು ಮತ್ತು ಕೈಗಾರಿಕ ಕೇಂದ್ರ ಸಚಿವ ಹೆಚ್.ಡಿ ಕುಮಾರಸ್ವಾಮಿಯವರ ಉಪಸ್ಥಿತಿಯಲ್ಲಿ, ಜಿಲ್ಲಾ ಉಸ್ತುವಾರಿ ಸಚಿವರು ಮತ್ತು ಸಮಾಜ ಕಲ್ಯಾಣ ಇಲಾಖೆಯ ಸಚಿವ ಡಾ.ಹೆಚ್.ಸಿ.ಮಹದೇವಪ್ಪ ಕಾರ್ಯಕ್ರಮದ ಉದ್ಘಾಟನೆ ಮಾಡಲಿದ್ದಾರೆ. ಚಾಮರಾಜ ಕ್ಷೇತ್ರದ ಶಾಸಕ ಕೆ.ಹರೀಶ್ ಗೌಡ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಲಿದ್ದಾರೆ.

ಪಶುಸಂಗೋಪನೆ ಮತ್ತು ರೇಷ್ಮೆ ಸಚಿವ ಕೆ.ವೆಂಕಟೇಶ್, ಅರಣ್ಯ ವಸತಿ ಮತ್ತು ವಿಹಾರ ಧಾಮಗಳ ನಿಗಮದ ಅಧ್ಯಕ್ಷ ಹಾಗೂ ಹೆಚ್.ಡಿ ಕೋಟೆ ವಿಧಾನಸಭಾ ಕ್ಷೇತ್ರದ ಶಾಸಕ ಅನಿಲ್ ಕುಮಾರ್.ಸಿ. ಹಾಗೂ ಚಾಮುಂಡೇಶ್ವರಿ ವಿದ್ಯುತ್ ನಿಗಮ ನಿಯಮಿತದ ಅಧ್ಯಕ್ಷ ಎ.ಬಿ. ರಮೇಶ್ ಬಂಡಿ ಸಿದ್ದೇಗೌಡ ಉಪಸ್ಥಿತರಿರಲಿದ್ದಾರೆ.

ಮುಖ್ಯ ಅತಿಥಿಗಳಾಗಿ ಮೈಸೂರು–ಕೊಡಗು ಲೋಕಸಭಾ ಕ್ಷೇತ್ರದ ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್, ಚಾಮರಾಜನಗರ ಲೋಕಸಭಾ ಕ್ಷೇತ್ರದ ಸಂಸದ ಸುನೀಲ್ ಬೋಸ್, ಕನ್ನಡ ಪುಸ್ತಕ ಪ್ರಾಧಿಕಾರದ ಅಧ್ಯಕ್ಷರಾದ ಡಾ. ಮಾನಸ, ಕರ್ನಾಟಕ ಭೋವಿ ಅಭಿವೃದ್ಧಿ ನಿಗಮದ ಅಧ್ಯಕ್ಷ ರಾಮಪ್ಪ.ಎಂ, ಮೈಸೂರು ಪೇಂಟ್ಸ್ ಮತ್ತು ವಾರ್ನಿಂಷ್ ಲಿಮಿಟೆಡ್ ಅಧ್ಯಕ್ಷ ಹೆಚ್.ಡಿ.ಗಣೇಶ್, ಕರ್ನಾಟಕ ಮೃಗಾಲಯ ಪ್ರಾಧಿಕಾರದ ಅಧ್ಯಕ್ಷ ರಂಗಸ್ವಾಮಿ, ಕರ್ನಾಟಕ ವಸ್ತು ಪ್ರದರ್ಶನ ಪ್ರಾಧಿಕಾರದ ಅಧ್ಯಕ್ಷ ಅಯೂಬ್ ಖಾನ್, ಕರ್ನಾಟಕ ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷರಾದ ಡಾ.ಪುಷ್ಪ ಅಮರನಾಥ್ ಆಗಮಿಸಲಿದ್ದಾರೆ.

ನರಸಿಂಹರಾಜ ವಿಧಾನಸಭಾ ಕ್ಷೇತ್ರದ ಶಾಸಕ ತನ್ವೀರ್ ಸೇಠ್, ಚಾಮುಂಡೇಶ್ವರಿ ವಿಧಾನಸಭಾ ಕ್ಷೇತ್ರದ ಶಾಸಕ ಜಿ.ಟಿ.ದೇವೇಗೌಡ, ಕೆ.ಆರ್ ನಗರ ವಿಧಾನಸಭಾ ಕ್ಷೇತ್ರದ ಶಾಸಕ ರವಿಶಂಕರ್.ಡಿ, ಕೃಷ್ಣರಾಜ ವಿಧಾನಸಭಾ ಕ್ಷೇತ್ರದ ಶಾಸಕ ಟಿ.ಎಸ್.ಶ್ರೀವತ್ಸ, ಹುಣಸೂರು ವಿಧಾನಸಭಾ ಕ್ಷೇತ್ರದ ಶಾಸಕ ಜಿ.ಡಿ.ಹರೀಶ್ ಗೌಡ, ನಂಜನಗೂಡು ವಿಧಾನಸಭಾ ಕ್ಷೇತ್ರದ ಶಾಸಕ ದರ್ಶನ್ ಧ್ರುವನಾರಾಯಣ್ ಹಾಗೂ ವಿಧಾನ ಪರಿಷತ್ ಸದಸ್ಯರಾದ ಹೆಚ್. ವಿಶ್ವನಾಥ್, ಡಾ.ಡಿ.ತಿಮ್ಮಯ್ಯ, ಸಿ.ಎನ್.ಮಂಜೇಗೌಡ, ಮಧು ಜಿ. ಮಾದೇಗೌಡ, ಡಾ.ಯತಿಂದ್ರ.ಎಸ್, ಕೆ.ವಿವೇಕಾನಂದ, ಕೆ.ಶಿವಕುಮಾರ್, ಕಾವೇರಿ ಜಲಾನಯನ ಯೋಜನೆಯ ಅಚ್ಚುಕಟ್ಟು ಪ್ರಾಧಿಕಾರದ ಅಧ್ಯಕ್ಷ ಮರಿಸ್ವಾಮಿ ಹಾಗೂ ಕರ್ನಾಟಕ ರಾಜ್ಯ ಕಾಂಪೋಸ್ಟ್ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಪ್ಯಾರಿಜಾನ್ ಮುಖ್ಯ ಅತಿಥಿಗಳಾಗಿ ಭಾಗವಹಿಸಲಿದ್ದಾರೆ.

ಶ್ರೀರಂಗಪಟ್ಟಣದ ದೊಡ್ಡೇಗೌಡನ ಕೊಪ್ಪಲು ಚಂದ್ರಮೌಳೇಶ್ವರ ಸ್ವಾಮಿ ದೇವಸ್ಥಾನ ಟ್ರಸ್ಟ್‌ನ ಗಜಾನನ ಸ್ವಾಮೀಜಿ ಸಾನಿಧ್ಯ ವಹಿಸಲಿದ್ದಾರೆ. ಭಾರತೀಯ ಭಾಷಾ ಸಂಸ್ಥಾನ ಶಾಸ್ತ್ರೀಯ ಕನ್ನಡ ಅಧ್ಯಯನ ಕೇಂದ್ರದ ಹಿರಿಯ ಸಂಶೋಧಕ ಡಾ.ಆರ್.ಚಲಪತಿ ಉಪನ್ಯಾಸ ನೀಡಲಿದ್ದಾರೆ.

## ಬೂದನೂರು ಉತ್ಸವ-2026: ಚಿತ್ರಕಲಾ ಸ್ಪರ್ಧೆ

# ಮಕ್ಕಳು ಪಠ್ಯೇತರ ಚಟುವಟಿಕೆಲ್ಲಿ ಹೆಚ್ಚಿನ ಆಸಕ್ತಿ ಬೆಳೆಸಿಕೊಳ್ಳಬೇಕು: ದಿನೇಶ್ ಗೂಳಿಗೌಡ



**ಮಂಡ್ಯ. :** ಮಕ್ಕಳು ಪಠ್ಯಪುಸ್ತಕಗಳ ಜೊತೆ ಪಠ್ಯೇತರ ಚಟುವಟಿಕೆಗಳಾದ ಚಿತ್ರಕಲೆ,ಸಂಗೀತ,ಕ್ರೀಡಾ ಆಶಕ್ತಿಯನ್ನು ಬೆಳೆಸಿಕೊಳ್ಳಬೇಕು ಜಿಲ್ಲೆಯ ವಿದ್ಯಾರ್ಥಿಗಳು ಸ್ಪರ್ಧಾತ್ಮಕ ಪರೀಕ್ಷೆಗಳನ್ನು ಎದುರಿಸಬೇಕು ಎಂದು ವಿಧಾನ ಪರಿಷತ್ ಸದಸ್ಯರು ಹಾಗೂ ಕರ್ನಾಟಕ ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರ ಉಪಾಧ್ಯಕ್ಷ ದಿನೇಶ್ ಗೂಳಿಗೌಡ ಅವರು ಹೇಳಿದರು.

ಮಂಗಳವಾರ ಬೂದನೂರು ಉತ್ಸವ – 2026" ಹಿನ್ನೆಲೆಯಲ್ಲಿ ಚಿತ್ರಕಲಾ ಸ್ಪರ್ಧೆಯನ್ನು ಹೊಸ ಬೂದನೂರು ಗ್ರಾಮದ ಶ್ರೀ ಕಾಶಿ ವಿಶ್ವನಾಥ ಮತ್ತು ಅನಂತ ಪದ್ಮನಾಭ ಆವರಣದಲ್ಲಿ ಕಾರ್ಯಕ್ರಮ ಅಧ್ಯಕ್ಷತೆ ವಹಿಸಿ ಮಾತನಾಡಿ ಬೂದನೂರುನಲ್ಲಿ 12ನೇ ಶತಮಾನದಲ್ಲಿ ಕಾಶಿನಾಥೇಶ್ವರ ದೇವಾಲಯ ನಿರ್ಮಾಣವಾಗಿದ್ದು ಬೂದನೂರು ಸುತ್ತಮುತ್ತಲಿನ ಗ್ರಾಮಗಳಲ್ಲಿ ಕಲೆ ಮತ್ತು ಸಂಸ್ಕೃತಿಯನ್ನು ಜನರಿಗೆ ಪರಿಚಯಿಸಲು ಕಾರ್ಯಕ್ರಮವನ್ನು ಆಯೋಜಿಸಲಾಗಿದೆ.

ಕಳೆದ ಬಾರಿ ಜಿಲ್ಲೆಯಲ್ಲಿ 19 ಸಾವಿರ ವಿದ್ಯಾರ್ಥಿಗಳು ಎಸ್.ಎಸ್. ಎಲ್.ಸಿ. ಪರೀಕ್ಷೆಯಲ್ಲಿ ಬರೆದಿದ್ದು ರಾಜ್ಯದಲ್ಲಿ 12 ಸ್ಥಾನದಲ್ಲಿ ಮಂಡ್ಯ ಜಿಲ್ಲೆ ಬಂದಿತ್ತು.

ಜಿಲ್ಲೆಯಲ್ಲಿ ಕಳೆದ ಬಾರಿ ಎಸ್ ಎಸ್ ಎಲ್ ಸಿ ಪರೀಕ್ಷೆಯಲ್ಲಿ ಶೇಕಡಾ 69% ವಿದ್ಯಾರ್ಥಿಗಳು ಉತ್ತೀರ್ಣರಾಗಿದ್ದು ಮರು ಪರೀಕ್ಷೆಯಲ್ಲಿ ಒಟ್ಟು ಶೇಕಡಾ 72 % ವಿದ್ಯಾರ್ಥಿಗಳು ಉತ್ತೀರ್ಣರಾಗಿರುತ್ತಾರೆ.

ಜಿಲ್ಲೆಯಲ್ಲಿ ಕಳೆದ ಐದು ವರ್ಷದಲ್ಲಿ 83,000 ವಿದ್ಯಾರ್ಥಿಗಳು ಎಸ್ ಎಸ್ ಎಲ್ ಸಿ ಪರೀಕ್ಷೆ ಎದುರಿಸಿ ಅದರಲ್ಲಿ 33 ಸಾವಿರ ವಿದ್ಯಾರ್ಥಿಗಳು ಅನುತ್ತೀರ್ಣ ಹೊಂದಿದ್ದರು. ವಿದ್ಯಾರ್ಥಿಗಳು ಗಣಿತ ಮತ್ತು ಆಂಗ್ಲ (ಇಂಗ್ಲಿಷ್ )ವಿಷಯದಲ್ಲಿ ಹೆಚ್ಚು ಅನುತ್ತೀರ್ಣವಾಗುತ್ತಿದ್ದು ಶಿಕ್ಷಕರು ವಿದ್ಯಾರ್ಥಿಗಳಿಗೆ ಗಣಿತ ಮತ್ತು ಇಂಗ್ಲಿಷ್ ವಿಷಯಗಳಿಗೆ ಹೆಚ್ಚು ಒತ್ತು ನೀಡಬೇಕು. ಅಧಿಕಾರಿಗಳು ಪೋಷಕರು ಮತ್ತು ಶಿಕ್ಷಕರ ಜೊತೆ ಸಭೆ ಮಾಡಿ ಉತ್ತಮ ಫಲಿತಾಂಶವನ್ನು ಜಿಲ್ಲೆಗೆ ತರಬೇಕು ಎಂದು ಸೂಚಿಸಿದರು

ರಾಜ್ಯದಲ್ಲಿ 347 ಇಂಜಿನಿಯರಿಂಗ್ ಕಾಲೇಜುಗಳಿದ್ದು ಪ್ರತಿವರ್ಷ 90 ಸಾವಿರ ಇಂಜಿನಿಯರಿಂಗ್ ಪದವೀಧರರು ತೇರ್ಗದೆಯಾಗುತ್ತಿದ್ದಾರೆ. ಜಿಲ್ಲೆಯ ವಿದ್ಯಾರ್ಥಿಗಳು ಸ್ಪರ್ಧಾತ್ಮಕ ಪರೀಕ್ಷೆಗಳನ್ನು ಎದುರಿಸುವ ನಿಟ್ಟಿನಲ್ಲಿ ಜಿಲ್ಲಾಡಳಿತ ಸೂಕ್ತ ಮಾರ್ಗದರ್ಶನ ನೀಡಿ ಆತ್ಮಸ್ಥೈರ್ಯ ತುಂಬಬೇಕು ಎಂದು ಸೂಚಿಸಿದರು.

ವಿದ್ಯಾರ್ಥಿಗಳು ಮತ್ತು ಬೋಧಕರ ಜೊತೆ ಸಮಾಲೋಚನೆ ನಡೆಸಿ ಮಕ್ಕಳಿಗೆ ಅರಿವು ಮತ್ತು ಜ್ಞಾನವನ್ನು ಬೆಳೆಸಿಕೊಳ್ಳುವಂತೆ ಮಾರ್ಗದರ್ಶನ ನೀಡಬೇಕು. ರಾಜ್ಯ ಮತ್ತು ರಾಷ್ಟ್ರ ಮಟ್ಟದಲ್ಲಿ ಜಿಲ್ಲೆಯ ವಿದ್ಯಾರ್ಥಿಗಳು ಭಾಗವಹಿಸುವಂತೆ ಆತ್ಮಸ್ಥೈರ್ಯ ತುಂಬಬೇಕು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಜಿಲ್ಲಾಧಿಕಾರಿಗಳಾದ ಡಾ. ಕುಮಾರ್ ರವರು ಮಾತನಾಡಿ ಮಕ್ಕಳ ಪ್ರತಿಭೆಯನ್ನು ಪೋಷಕರು ಗುರುತಿಸಬೇಕು. ಚಿತ್ರಕಲೆ ಎಂಬುದು ಪ್ರತಿಯೊಂದು ಮಗುವಿನಲ್ಲೂ ಹುಟ್ಟಿನಿಂದಲೇ ಬರುವಂತಹ ಕಲೆ. ಮಕ್ಕಳು ತಮ್ಮ ಪ್ರತಿಭೆಯನ್ನು ವ್ಯಕ್ತಪಡಿಸಲು ಒಳ್ಳೆಯ ವೇದಿಕೆಯಾಗಿದೆ ಎಲ್ಲರೂ ಮುಕ್ತವಾಗಿ ಕಾರ್ಯಕ್ರಮದಲ್ಲಿ ಭಾಗವಹಿಸಿ ಎಂದು ಹೇಳಿದರು. ಕಾರ್ಯಕ್ರಮದಲ್ಲಿ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳಾದ ಕೆ.ಆರ್. ನಂದಿನಿ ರವರು ಮಾತನಾಡಿ ಬೂದನೂರಿನ ಇತಿಹಾಸ ಮತ್ತು ನಿಸರ್ಗದ ಚಿತ್ರಣ ಮತ್ತು ಜಿಲ್ಲೆಯ ಐತಿಹಾಸಿಕ ಸ್ಥಳಗಳ ಮೇಲೆ ಅರಿವು ಮೂಡಿಸುವಂತಹ ಕಲಾಚಿತ್ರಗಳನ್ನು

ಬಿಡಿಸುವುದರ ಜೊತೆ ಬೂದನೂರು ಉತ್ಸವದಲ್ಲಿ ಶಾಲಾ ಮಕ್ಕಳ ಕಲೆ ಪ್ರತಿಭೆಯನ್ನು ಅನಾವರಣಗೊಳ್ಳಲು ಮಕ್ಕಳಿಗೆ ಅವಕಾಶವನ್ನು ಕಲ್ಪಿಸಿದೆ. ಮಕ್ಕಳು ಅವಕಾಶವನ್ನು ಸದುಪಯೋಗಪಡಿಸಿಕೊಳ್ಳಬೇಕು.

ಎಸ್.ಎಸ್.ಎಲ್.ಸಿ ಪರೀಕ್ಷೆ ಇರುವುದರಿಂದ ಮಕ್ಕಳು ಆರೋಗ್ಯದ ಕಡೆ ಗಮನ ಹರಿಸಿಬೇಕು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಶಾಸಕರಾದ ಪಿ. ರವಿಕುಮಾರ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ ಶೋಭಾ ರಾಣಿ,ಮನ್ ಮುಲ್ ಅಧ್ಯಕ್ಷ ಶಿವಕುಮಾರ್, ತಹಶೀಲ್ದಾರ್ ವಿಶ್ವನಾಥ್, ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿ ಸ್ವಾಮಿ ರವರು ಉಪಸ್ಥಿತರಿದ್ದರು.

## ವಿಜೃಂಭಣೆಯಿಂದ ಜರುಗಿದ ಶ್ರೀ ಆದಿಶಕ್ತಿ ತೋಪಮ್ಮ ನವರ 40ನೇ ವರ್ಷದ ಜಾತ್ರಾ ಮಹೋತ್ಸವ

**ಕೆ.ಆರ್.ನಗರ:** ಪಟ್ಟಣದ ಹೊರವಲಯದ ಶ್ರೀ ಆದಿಶಕ್ತಿ ತೋಪಮ್ಮ ನವರ 40ನೇ ವರ್ಷದ ಜಾತ್ರಾ ಮಹೋತ್ಸವ ವಿಜೃಂಭಣೆಯಿಂದ ಸಡಗರ ಸಂಭ್ರಮದಿಂದ ನಡೆಯಿತು

ಬೆಳಗಿನಿಂದಲೇ ಮೂರ್ತಿಗೆ ವಿಶೇಷ ಅಲಂಕಾರ ಮತ್ತು ವಿಶೇಷ ಪೂಜೆ ಅಭಿಷೇಕವನ್ನು ಏರ್ಪಡಿಸಲಾಗಿತ್ತು ದೇವಸ್ಥಾನ ವಿದ್ಯುತ್ ದೀಪಗಳಿಂದ ಅಲಂಕೃತಗೊಂಡಿತು.

ಭಕ್ತಾದಿಗಳು ಸರದಿ ಸಾಲಿನಲ್ಲಿ ನಿಂತು ದೇವರ ದರ್ಶನ ಪಡೆದರು ಬಂದಂತ ಭಕ್ತಾದಿಗಳಿಗೆ ಪ್ರಸಾದ ವಿನಿಯೋಗವನು ಏರ್ಪಡಿಸಲಾಯಿತು

ದೇವಸ್ಥಾನದ ಸುತ್ತ ಆಟಿಕೆ ಸಾಮಾನುಗಳ ಅಂಗಡಿ ಪಾನಿಪುರಿ, ಗೋಬಿ. ಕಡ್ಲೆಪುರಿ ಅಂಗಡಿ ಇನ್ನು ಮುಂತಾದ ಅಂಗಡಿಗಳಲ್ಲಿ ಬಂದಂತ ಭಕ್ತಾದಿಗಳು ತಮಗಿಷ್ಟ ಬಂದ ವಸ್ತುಗಳನ್ನು ಖರೀದಿಸುವಲ್ಲಿ ಬಿಜಿಯಾಗಿದ್ದರು ಈ ಒಂದು ಜಾತ್ರೆಗೆ ವಿವಿಧ ಜಿಲ್ಲೆಗಳಿಂದ ಭಕ್ತಾದಿಗಳು ಆಗಮಿಸಿದರು

ಪೊಲೀಸರು ಯಾವುದೇ ರೀತಿಯ ಹಹಿತಕರ ಘಟನೆ ನಡೆದಂತೆ ಸೂಕ್ತ ಬಂದುಬಸ್ತು ವ್ಯವಸ್ಥೆ ಮಾಡಿದರು

ಈ ಸಂದರ್ಭದಲ್ಲಿ ಒಂಬತ್ತು ಗ್ರಾಮಗಳ ಮುಖಂಡರು ಹಾಗೂ ಶ್ರೀ ಆದಿಶಕ್ತಿ ತೋಪಮ ಟ್ರಸ್ಟ್ ಅಧ್ಯಕ್ಷ ಚೌಕಹಳ್ಳಿ ರಾಜಣ್ಣ , ಕೆ.ಪಿ ಜಗದೀಶ್ ಮತ್ತು ಭಕ್ತಾದಿಗಳು ಹಾಜರಿದ್ದರು.





# ವಿದ್ಯಾರ್ಥಿಗಳು ಪಠ್ಯದ ಜೊತೆಯಲ್ಲಿ ಸಂಸ್ಕಾರವನ್ನು ಕಲಿಯಬೇಕು: ರಾಮಾನುಜ ಜೀಯರ್ ಸ್ವಾಮೀಜಿ



**ಕೆ.ಆರ್.ನಗರ:** ವಿದ್ಯಾರ್ಥಿಗಳು ಪಠ್ಯದ ಜೊತೆಯಲ್ಲಿ ಸಂಸ್ಕಾರವನ್ನು ಕಲಿಯಬೇಕು ಎಂದು ಶ್ರೀ ದ್ವಯ ಸಿದ್ಧಾಂತ ಪೀಠದ ಶ್ರೀ ದನುರ್ಧಾಸ ರಾಮಾನುಜ ಜೀಯರ್ ಸ್ವಾಮಿಗಳು ಹೇಳಿದರು.

ಅವರು ಸಾಲಿಗ್ರಾಮ ಪಟ್ಟಣದಲ್ಲಿ ಸಾಧನ ಶಿಕ್ಷಣ ಸಂಸ್ಥೆ ಮತ್ತು ಸಾಧನ ಟ್ಯುಟೋರಿಯಲ್ ಆಯೋಜಿಸಿದ್ದ ಐದನೇ ಶಾಲಾ ವಾರ್ಷಿಕೋತ್ಸವ ಸಮಾರಂಭವನ್ನು ಉದ್ಘಾಟಿಸಿ ಮಾತನಾಡಿದರು. ಮಕ್ಕಳು ಶಿಸ್ತು, ಸಂಯಮ, ಸಂಸ್ಕಾರದಂತಹ ಉತ್ತಮ ಮೌಲ್ಯಗಳನ್ನು ತಮ್ಮ ಬದುಕಿನಲ್ಲಿ ಅಳವಡಿಸಿಕೊಂಡು ಸಮಾಜದಲ್ಲಿ ಉತ್ತಮ ಪ್ರಜೆಗಳಾಗಬೇಕು ಎಂದರು. ಶಿಕ್ಷಕರುಗಳು ಮಕ್ಕಳಿಗೆ ಪಠ್ಯದಲ್ಲಿರುವ ವಿಷಯಗಳನ್ನು ಕಲಿಸುವುದರ ಜೊತೆಗೆ ಪಠ್ಯೇತರ ಚಟುವಟಿಕೆಗಳಲ್ಲೂ ಭಾಗವಹಿಸುವಂತೆ ಮಾಡಬೇಕು ಆ ಮೂಲಕ ವಿದ್ಯಾರ್ಥಿಗಳು ಉನ್ನತ ಸ್ಥಾನಮಾನಗಳನ್ನು ಗಳಿಸಬೇಕು ಎಂದರು. ಪೋಷಕರುಗಳು ಮಕ್ಕಳ ಕಲಿಕೆಯ ಬಗ್ಗೆ ಹೆಚ್ಚಿನ ಗಮನವನ್ನು ಹರಿಸಬೇಕು ಎಂದು ಸಲಹೆ ನೀಡಿದರು.

ಕರುನಾಡ ದೀಪ ಸೇವಾ ಟ್ರಸ್ಟ್ ಅಧ್ಯಕ್ಷ ಕೆ.ಟಿ.ಮೋಹನ್ ಕುಮಾರ್ ಮಾತನಾಡಿ ಶಾಲಾ ವಾರ್ಷಿಕೋತ್ಸವಗಳು ವಿದ್ಯಾರ್ಥಿಗಳ ಕಲಾ ಪ್ರತಿಭೋತ್ಸವವಾಗಿ ಅರ್ಥಪೂರ್ಣವಾಗಿ ಆಚರಣೆಗಳಾಗಬೇಕು ಎಂದರು.

ಪ್ರತಿಯೊಬ್ಬರಲ್ಲೂ ಒಂದೊಂದು ಪ್ರತಿಭೆ ಇರುತ್ತದೆ. ಅಂತಹ ಕಲೆಯನ್ನು ಅನಾವರಣಗೊಳಿಸಲು ಇಂತಹ ವೇದಿಕೆಗಳು ಅತ್ಯವಶ್ಯಕವಾಗಿದ್ದು ವಿದ್ಯಾರ್ಥಿಗಳು ಯಾವುದೇ ಅಂಜಿಕೆ ಇಲ್ಲದೆ ತಮಗೆ ಗೊತ್ತಿರುವ ವಿವಿಧ ಕಲೆಗಳ ಪ್ರದರ್ಶನವನ್ನು ಮಾಡಬೇಕು. ಪೋಷಕರಗಳು ಹಾಗೂ ಶಿಕ್ಷಕರುಗಳು ಮಕ್ಕಳು ಯಾವ ಕ್ಷೇತ್ರದಲ್ಲಿ ಹೆಚ್ಚಿನ ಆಸಕ್ತಿಯನ್ನು ಹೊಂದಿರುತ್ತಾರೆ ಆ ಕ್ಷೇತ್ರದಲ್ಲಿ ಅವರು ಉತ್ತಮ ಸಾಧನೆ ಮಾಡಲು ಹೆಚ್ಚಿನ ಪ್ರೋತ್ಸಾಹವನ್ನು ನೀಡಬೇಕು ಎಂದರು.

ಈ ಸಂದರ್ಭದಲ್ಲಿ ವಿವಿಧ ಸ್ಪರ್ಧೆಗಳಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ಬಹುಮಾನಗಳನ್ನು ವಿತರಿಸಿ, ಗಣ್ಯರುಗಳನ್ನು ಸನ್ಮಾನಿಸಲಾಯಿತು. ವಿದ್ಯಾರ್ಥಿಗಳಿಂದ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳು ಮಾಡಲಾಯಿತು.

ಕಾರ್ಯಕ್ರಮದಲ್ಲಿ ರಾಜ್ಯ ಕಬ್ಬು ಬೆಳೆಗಾರರ ಸಂಘದ ರಾಜ್ಯ ಉಪಾಧ್ಯಕ್ಷ ಅಂಕನಹಳ್ಳಿ ತಿಮ್ಮಪ್ಪ, ಮುಖಂಡರಾದ ಸುನಿಲ್, ಎಸ್.ಜಿ.ಅಮರಜಿತ್ ಜೈನ್, ಸವಿತ ಅಮರಜಿತ್, ಸಂಸ್ಥೆಯ ಅಧ್ಯಕ್ಷ ಪುನೀತ್ ಕುಮಾರ್, ಉಪಾಧ್ಯಕ್ಷ ಆರ್.ಪಿ.ಅಮಿತ್ ಕುಮಾರ್, ಖಜಾಂಚಿ ಹರೀಶ್ ಕುಮಾರ್, ನಿರ್ದೇಶಕ ಭರತ್ ಜೈನ್, ಮುಖ್ಯ ಶಿಕ್ಷಕರಾದ ಸುಮಾಮಣಿ, ವಿನಾಯಕನಾಯಕ, ಯಶಸ್ವಿನಿ, ಚಾಮುಂಡೇಶ್ವರಿ ಚಾರಿಟೇಬಲ್ ಟ್ರಸ್ಟ್ ಉಪಾಧ್ಯಕ್ಷ ಅಮಿತ್ ಕುಮಾರ್, ಕಿರಿಯ ತರಬೇತಿ ಅಧಿಕಾರಿ ಆರ್.ಸೋಮಶೇಖರ್, ಪತ್ರಕರ್ತ ಎಸ್.ಬಿ.ಬಸವರಾಜು, ನೃತ್ಯ ತರಬೇತುದಾರ ಅವಿನಾಶ್, ಶಿಕ್ಷಕರಾದ ಬಿ.ಆರ್.ಮಹೇಶ್, ಹರೀಶ್ ಕುಮಾರ್, ಉಷಾ, ದರ್ಶನ್, ಸಿಮ್ರಾನ್ ತಾಜ್, ರಾಜೇಶ್ವರಿ, ಅರ್ಚನಾ, ಪೋಷಕರು, ವಿದ್ಯಾರ್ಥಿಗಳು ಇದ್ದರು.

## ಗುರುವಂದನಾ ಕಾರ್ಯಕ್ರಮ

**ಕೆ.ಆರ್.ನಗರ:** ಪಟ್ಟಣದ ಮೈಸೂರು ರಸ್ತೆಯಲ್ಲಿರುವ ಜೆಎಸ್‌ಎಸ್ ಪ್ರೌಢಶಾಲೆಯ ಹಳೆಕಟ್ಟಡದಲ್ಲಿ 1991ರಿಂದ1994ರವರೆಗೆ ಕಲಿತ ಹಿರಿಯ ವಿದ್ಯಾರ್ಥಿಗಳ ಬಳಗದ ವತಿಯಿಂದ ಗುರುವಂದನಾ ಕಾರ್ಯಕ್ರಮವನ್ನು ಏರ್ಪಡಿಸಲಾಗಿತ್ತು

ಈ ಒಂದು ಕಾರ್ಯಕ್ರಮದಲ್ಲಿ ಜೆಎಸ್‌ಎಸ್ ಶಾಲೆಯ ನಿವೃತ್ತ ಹಿರಿಯ ಶಿಕ್ಷಕ ಮಲ್ಲಾರಾಧ್ಯ ಹಿರಿಯರಾದ ಶಿವಸ್ವಾಮಿ, ಪುಟ್ಟಲಿಂಗಪ್ಪ, ರಾಜಪ್ಪ, ಕಾಂತರಾಜ್, ನಾಗರಾಜ್, ಜ್ಞಾನಾನಂದ, ನಂಜಪ್ಪ, ದೇವಲಿಂಗಸ್ವಾಮಿ, ಅಡವೀಶ್, ಓಂಕಾರೇಶ್ವರಿ, ಸರ್ವಮಂಗಳಾ, ಮೋಹನ್ ಶಾಲೆಯ ಹಿರಿಯ ವಿದ್ಯಾರ್ಥಿಗಳಾದ ಕೆ.ಆರ್. ಮಂಜುನಾಥ್, ಆರ್.ಶಿವಾನಂದ, ಎ.ಎಂ. ಸೋಮಣ್ಣ, ಸಿ.ಎಸ್.ಮಧುಸೂಧನ್, ಮಹಮ್ಮದ್‌ವಿಜಾಜ್, ಚಂದ್ರಶೇಖರರಾವ್ ಪಾಟೀಲ್ಕರ್, ಸಿ.ಎಸ್.ತೋಂಟದಾರ್ಯ, ಸಿ. ವೀರೇಂದ್ರಪಾಟೀಲ್, ಮಂಜುನಾಥ್, ಶಂಕರ್, ಈರೇಶ್, ಸಚ್ಚಿದಾನಂದ, ಜಗನ್ನಾಥ್, ಸುಮಾ, ಶಾಲಿನಿ, ಪ್ರಭ, ರಾಜು, ನೇತ್ರಾವತಿ, ಮಂಜುಳಾ,ವೇಣುಗೋಪಾಲ್

ದೈಹಿಕಶಿಕ್ಷಕ ಮಹೇಶ್ ಬಳಿಗಾರ್, ನಿವೃತ್ತಉಪನ್ಯಾಸಕ ಕೃಷ್ಣ ಮುಳ್ಳೂರುಗಂಗಾಧರ್,ಜೆಎಸ್‌ಎಸ್‌ಶಾಲೆಯವಿದ್ಯಾರ್ಥಿ,ವಿದ್ಯಾರ್ಥಿನಿಯರು ಹಾಗೂ ಪೋಷಕರು ಮತ್ತಿತರರು ಹಾಜರಿದ್ದರು.




# 40ನೇ ರಾಜ್ಯ ಪತ್ರಕರ್ತರ ಸಮ್ಮೇಳನಕ್ಕೆ ರಾಜ್ಯಪಾಲರಿಗೆ ಕೆಯುಡಬ್ಲ್ಯೂಜೆ ಆಹ್ವಾನ



**ಬೆಂಗಳೂರು:** ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದಿಂದ ಈ ಬಾರಿ ಬೀದರನಲ್ಲಿ ಮಾರ್ಚ್ ಅಂತ್ಯದಲ್ಲಿ ಆಯೋಜಿಸಲಾಗುತ್ತಿರುವ 40ನೇ ರಾಜ್ಯ ಪತ್ರಕರ್ತರ ಸಮ್ಮೇಳನದಲ್ಲಿ ಭಾಗವಹಿಸುವಂತೆ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯಾಧ್ಯಕ್ಷರಾದ ಶಿವಾನಂದ ತಗಡೂರು ನೇತೃತ್ವದ ಕೆಯುಡಬ್ಲ್ಯೂಜೆ ನಿಯೋಗವು ಲೋಕಭವನದಲ್ಲಿ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಅವರನ್ನು ಮನವಿ ಮಾಡಿ ಆಹ್ವಾನಿಸಿತು.

ಸಂಘದ ಮನವಿಗೆ ಪ್ರತಿಕ್ರಿಯಿಸಿದ ರಾಜ್ಯಪಾಲರು, ಸಮ್ಮೇಳನದಲ್ಲಿ ಭಾಗವಹಿಸಲು ಆಸಕ್ತನಾಗಿದ್ದೇನೆ ಎಂದರು. ರಾಜ್ಯಸಂಘದ ಇತಿಹಾಸವನ್ನು ಕೇಳಿಕೊಂಡ ಅವರು ಡಿವಿಜಿ ಸಂಸ್ಥಾಪಿಸಿದ, ನಾಲ್ವಡಿ ಕೃಷ್ಣರಾಜ ಒಡೆಯರ್ ಅವರು ದೇಣಿಗೆ ನೀಡಿದ ಸಂಘಕ್ಕೆ ತೊಂಬತ್ತೈದು ವಸಂತ ತುಂಬುತ್ತಿರುವ ಬಗ್ಗೆ ಮೆಚ್ಚುಗೆ ಮತ್ತು ಅಭಿಮಾನ ವ್ಯಕ್ತಪಡಿಸಿದರು. ಇದೇ ಸಂಧರ್ಭದಲ್ಲಿ ಅವರಿಗೆ ಕೆಯುಡಬ್ಲ್ಯೂಜೆ ನೆನಪಿನ ಸಂಚಿಕೆ, ಕೋವಿಡ್ ಕಥೆಗಳು ಮತ್ತು ಅಮೃತ ಬೀಜ ಪುಸ್ತಕವನ್ನು ನೀಡಲಾಯಿತು. ಕೆಯುಡಬ್ಲ್ಯೂಜೆ ಲೋಗೋ ಜೊತೆಗೆ ಅವರದೇ ಭಾವಚಿತ್ರವಿರುವ ಕಾಫಿ ಕಪ್ ಮತ್ತು ಕೆಯುಡಬ್ಲ್ಯೂಜೆ ಕ್ಯಾಲೆಂಡರ್ ನೀಡಲಾಯಿತು.

ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಉಪಾಧ್ಯಕ್ಷರಾದ ಎಚ್.ಬಿ.ಮದನಗೌಡ, ಪ್ರಧಾನ ಕಾರ್ಯದರ್ಶಿ ಜಿ.ಸಿ.ಲೋಕೇಶ, ಕಾರ್ಯದರ್ಶಿ ಸೋಮಶೇಖರ ಕೆರಗೋಡು, ಖಜಾಂಚಿ ವಾಸುದೇವ ಹೊಳ್ಳ ಅವರುಗಳು ನಿಯೋಗದಲ್ಲಿದ್ದರು.



# ರಾಜ್ಯದಲ್ಲಿ ಗ್ಯಾರೆಂಟಿ ಹುಸಿ: ಕಾಂಗ್ರೆಸ್‌ನ ಸಾಧನೆ: ಪ್ರತಾಪ್ ಸಿಂಹ ವ್ಯಂಗ್ಯ



**ಮಂಡ್ಯ:** ರಾಜ್ಯದಲ್ಲಿ ಗ್ಯಾರಂಟಿಯ ವಾತಾವರಣ ಸೃಷ್ಟಿಸಿ ಕಾಂಗ್ರೆಸ್ ಅಧಿಕಾರಕ್ಕೆ ಬಂದಿದ್ದು, ರಾಜ್ಯದಲ್ಲಿ ಗ್ಯಾರಂಟಿಗಳನ್ನು ಹುಸಿ ಮಾಡಿರುವುದು ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರಕಾರದ ಸಾಧನೆ ಎಂದು ಮಾಜಿ ಸಂಸದ ಪ್ರತಾಪ್ ಸಿಂಹ ವ್ಯಂಗ್ಯವಾಡಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಗೃಹಲಕ್ಷ್ಮಿ ಯೋಜನೆಯಡಿ ಯಾವುದಾದರೊಂದು ಚುನಾವಣೆ ಬಂದಾಗ ಮಾತ್ರ ಖಾತೆಗೆ ಹಣ ಜಮಾವಣೆ ಮಾಡುವುದು, ಗೃಹ ಜ್ಯೋತಿ ಯೋಜನೆಯಲ್ಲಿ ಸುಳ್ಳಿನ ಮೂಲಕ ವಿದ್ಯುತ್ ವಂಚನೆ, ಶಕ್ತಿ ಯೋಜನೆ ಜಾರಿ ಮಾಡಿ ಹೊಸ ಬಸ್ ನೀಡದೇ, ಇರುವ ಬಸ್‌ಗಳ ನಿರ್ವಹಣೆಗೂ ಹಣವಿಲ್ಲದ ಪರಿಸ್ಥಿತಿ ನಿರ್ಮಾಣವಾಗಿದ್ದು, ಕೆಎಸ್‌ಆರ್‌ಟಿಸಿ ಮುಳುಗುವ ಸ್ಥಿತಿಯಲ್ಲಿದೆ. ಯುವನಿಧಿ ಯೋಜನೆಯ ಫಲಾನುಭವಿಗಳ ಪಟ್ಟಿಯನ್ನೇ ಮಾಡಿಲ್ಲ. ಇಂದಿನವರೆಗೂ ಸಮರ್ಪಕವಾಗಿ ಚಾಲನೆಯಾಗಿಲ್ಲ ಎಂದು ಆರೋಪಿಸಿದರು.

ಬರಿ ಸುಳ್ಳಿನಿಂದಲೇ ಅಧಿಕಾರಕ್ಕೆ ಬಂದ ಕಾಂಗ್ರೆಸ್ ಸರಕಾರ 1000 ದಿನಗಳಲ್ಲಿ ಸುಳ್ಳಿನಲ್ಲೆ ಆಡಳಿತ ನಡೆಸುತ್ತಿದ್ದಾರೆ. ಮೈಸೂರು ಮುಡಾದಲ್ಲಿ 3500 ಕೋಟಿ ಹಗರಣ, 178 ಕೋಟಿ ವಾಲ್ಮೀಕಿ ಹಗರಣ, ವಕ್ಫ್ ಮಂಡಳಿಗೆ 4 ಕೋಟಿ ಅಕ್ರಮ ವರ್ಗಾವಣೆ, 11 ಇಲಾಖೆ, 9 ನಿಗಮಗಳಲ್ಲಿ 42.88 ಕೋಟಿ ದುರುಪಯೋಗ ಸೇರಿದಂತೆ ಎಣಿಕೆಯಿಲ್ಲದಟ್ಟು ಹಗರಣಗಳಲ್ಲಿ ಮುಳುಗಿದೆ ಎಂದು ದೂರಿದರು.


ಸಿದ್ದರಾಮಯ್ಯ ಸರಕಾರ ರಾಜ್ಯಾದ್ಯಂತ ಒಂದು ಸಮುದಾಯವನ್ನು ಓಲೈಸುವತ್ತ ಮಾತ್ರ ಆಡಳಿತ ನಡೆಸಿದೆ. ಜನನ, ಮರಣ ಪ್ರಮಾಣ ಪತ್ರ, ಮುದ್ರಾಂಕ ಶುಲ್ಕ, ಕಸ ಸಂಗ್ರಹ, ನೀರು ಸರಬರಾಜು, ಹಾಲಿನ ಬೆಲೆ ಏರಿಕೆ ಹೀಗೆ ಪ್ರತಿಯೊಂದರಲ್ಲೂ ಲೂಟಿ ಮಾಡಿದ್ದಾರೆ. ಅವರ ಅಭಿವದ್ಧಿ ಧೋರಣೆ ಮುಚ್ಚಿಕೊಳ್ಳಲು ವಿಬಿ ಜಿ ರಾಮ್ ಜಿ ವಿರೋಧಿಸಿ ವಿಶೇಷ ಅಧಿವೇಶನ ಕರೆದಿದ್ದಾರೆ ಎಂದುರು.

ರಾಜ್ಯದಲ್ಲಿ ಅಧಿಕಾರಿಗಳಿಗೆ ಯಾವುದೇ ರಕ್ಷಣೆ ಇಲ್ಲದಂತಹ ಸ್ಥಿತಿ ನಿರ್ಮಿಸಿದ್ದು ಅವ್ಯಾಹಿತವಾದ ದಾಳಿ ನಡೆಯುತ್ತಿದೆ. ಹುಬ್ಬಳ್ಳಿಯ ನೇಹ ಕೊಲೆ ಪ್ರಕರಣವನ್ನು ವೈಯಕ್ತಿಕ ವಿಷಯ ಎಂದು ಹೇಳಿಕೆ ನೀಡಿದ್ದಾರೆ. ಶಿಡ್ಲಘಟ್ಟದಲ್ಲಿ ಪೌರಾಯುಕ್ತ ಮೇಲೆ ಆಕ್ರಮಣ ನಡೆಸಿ ನಿಧಿಸಿದರೂ ಆರೋಪಿಯ ಬಂಧನವಾಗಿಲ್ಲ ಇದು ರಾಜ್ಯದ ಕಾನೂನೂ ಸುವ್ಯವಸ್ಥೆ ಹಾಳಾಗಿರುವುದಕ್ಕೆ ಸಾಕ್ಷಿಯಾಗಿದೆ ಎಂದು ಖಂಡಿಸಿದರು.

ಈ ಸಾವಿರದಿನಗಳ ಕಾಂಗ್ರೆಸ್ ಸರಕಾರದಿಂದ ಅಲ್ಪಸಂಖ್ಯಾತ ಸಮುದಾಯಕ್ಕೆ ಶಾಂತಿ, ನೆಮ್ಮದಿ ದೊರೆತಿದೆ. ಸಿದ್ದರಾಮಯ್ಯ ಆ ಸಮುದಾಯವನ್ನು ಓಲೈಸುತ್ತಾರೆ. ಅವರಿಗೆ ಸಾಲಮನ್ನ ಮಾಡಿದ್ದಾರೆ. ಹಿಂದೂ ಧಾರ್ಮಿಕ ಮೆರವಣಿಗೆಗಳ ಮೇಲೆ ಕಲ್ಲು ತೂರಾಟ ನಡೆಸಿದರೂ ಯಾವುದೇ ಪ್ರಕರಣ ದಾಖಲಿಸಿಲ್ಲ. ಅಖಂಡ ಶ್ರೀನಿವಾಸ್ ಮನೆ ಮೇಲೆ ದಾಳಿ, ಪೊಲೀಸರ ಮೇಲೆ ದಾಳಿ ಮಾಡಿದರೂ ಯಾವುದೇ ಕ್ರಮ ಕೈಗೊಳ್ಳದೇ ನೆಮ್ಮದಿಯಿಂದಿರಲು ಅವಕಾಶ ನೀಡಿದ ಸಿದ್ದರಾಮಯ್ಯ, ಅವರ ಪಕ್ಷದ ಹೆಗಲಿಗೆ ಹೆಗಲು ನೀಡಿದ ಡಿ.ಕೆ.ಶಿವಕುಮಾರ್ ಅವರಿಗೂ ಸುಳ್ಳು ಹೇಳಿ ಸುಳ್ಳಿನ ಸರಕಾರ ನಡೆಸುತ್ತಿದ್ದಾರೆ ಎಂದು ಆರೋಪಿಸಿದರು.

ಗೋಷ್ಠಿಯಲ್ಲಿ ಮುಖಂಡರಾದ ಅಶೋಕ್ ಜಯರಾಂ, ಸಚ್ಚಿದಾನಂದ, ಡಾ.ಸಿದ್ದರಾಮಯ್ಯ, ಜಿಲ್ಲಾಧ್ಯಕ್ಷ ಡಾ.ಇಂದ್ರೇಶ್, ನಾಗಾನಂದ, ಪ್ರದೀಪ್ ಇದ್ದರು.

# ಫೆ.20ರಂದುಶ್ರೀ ಸೀತಾಳಲಿಂಗೇಶ್ವರ ಸ್ವಾಮಿ ರಥೋತ್ಸವ



**ಮಂಡ್ಯ:** ಮದ್ದೂರು ತಾಲೂಕಿನ ಸಬ್ಬನಹಳ್ಳಿ ಗ್ರಾಮದ ಶ್ರೀ ಸೀತಾಳಲಿಂಗೇಶ್ವರ ಸ್ವಾಮಿ ರಥೋತ್ಸವವು ಫೆ.20ರಂದು ಬೆಳಿಗ್ಗೆ 8.30ಕ್ಕೆ ಗ್ರಾಮದ ಶ್ರೀ ಮಂಚಮ್ಮನ ದೇವಸ್ಥಾನದಿಂದ ಶ್ರೀ ಸೀತಾಳಲಿಂಗೇಶ್ವರ ಸ್ವಾಮಿಯ ಸನ್ನಿಧಿವರೆಗೆ ಬಾಯಿ ಬೀಗ, ದೇವರ ಪೂಜರ ಸಮೇತ ನಡೆಲಿದೆ ಎಂದು ಶ್ರೀ ಸೀತಾಳಲಿಂಗೇಶ್ವರ ದೇವಸ್ಥಾನ ಅಭಿವೃದ್ಧಿ ಸೇವಾ ಟ್ರಸ್ಟ್‌ನ ಕಾರ್ಯದರ್ಶಿ ಎಸ್.ಕೆ.ಪುಟ್ಟರಾಜು ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಫೆ.17ರಿಂದಲೇ ದೇವಾಲಯದಲ್ಲಿ ವಿವಿದ ಪೂಜಾ ಕೈಕರ್ಯಗಳು ಆರಂಭಗೊಂಡಿದ್ದು, ಫೆ.21ರವರೆಗೆ ಮುಂದುವರೆಯಲಿವೆ ಎಂದರು.

ಫೆ.20ರಂದು ರಥೋತ್ಸವದ ನಂತರ ಮಧ್ಯಾಹ್ನ 1ಗಂಟೆಗೆ ಅನ್ನ ಸಂತರ್ಪಣೆ, ಸಂಜೆ 6ಕ್ಕೆ ಮಹಾಮಂಗಳಾರತಿ ರಾತ್ರಿ 9ಕ್ಕೆ ಶನಿಪ್ರಭಾವ ಪೌರಾಣಿಕ ನಾಟಕ ನಡೆಯಲಿದೆ. ಫೆ.21ರಂದು ಬೆಳಿಗ್ಗೆ 5 ಗಂಟೆಗೆ ಪಟ್ಟಲದಮ್ಮ ಅಮ್ಮನವರಿಗೆ ಮಡೇ ಆರತಿ ಹಾಗೂ ಪೂಜೆ ನೆರವೇರಲಿದೆ ರಾತ್ರಿ 9ಕ್ಕೆ ಸಂಸಾರ ಸಂದನ ಸಾಮಾಜಿಕ ನಾಟಕ ಪ್ರದರ್ಶನಗೊಳ್ಳಲಿದೆ ಎಂದು ಹೇಳಿದರು.

ದೇವರಿಗೆ ಹರಕೆ ಮತ್ತು ಕಾಣಿಕೆಗಳನ್ನು ನೀಡಿದವರು, ಟ್ರಸ್ಟ್‌ನ ರಸೀದಿ ಪಡೆಯಬಹುದಾಗಿದೆ. ದೇವಾಲಯದ ಆವರಣದಲ್ಲಿ ಬಸವಭವನಮ ತ್ತು ಬಸವರಥಕ್ಕೆ ಧನ ಸಹಾಯ ಮಾಡುವವರು, ಕರ್ನಾಟಕ ಗ್ರಾಮೀಣ ಬ್ಯಾಂಕ್‌ನ ಯಡಗನಹಳ್ಳಿ ಶಾಖೆಯ ಖಾತೆ ಸಂಖ್ಯೆ 12306101001981, IFSC Code PKGB0012306 ಗೆ ನೀಡುವಂತೆ ಮನವಿ ಮಾಡಿದರು.

ಗೋಷ್ಠಿಯಲ್ಲಿ ಟ್ರಸ್ಟ್‌ನ ಅಧ್ಯಕ್ಷ ನಾಡಗೌಡ್ನ ಮಂಚೇಗೌಡ, ಗೌರವ ಅಧ್ಯಕ್ಷ ಎಂ.ಪುಟ್ಟೇಗೌಡ, ಖಜಾಂಚಿ ಎಸ್.ಎಂ.ಮಂಚಲಿಂಗೇಗೌಡ, ಎಂ.ಬಲ್ಲೇಗೌಡ, ಹೊನ್ನೇಗೌಡ ಇದ್ದರು.

# ನಾಳೆ ವಿಟಿಯು ನಲ್ಲಿ ಸಾಂಸ್ಕೃತಿಕ ಹಬ್ಬ

**ಮೈಸೂರು:** ನಗರದ ಸಾತಗಳ್ಳಿಯ ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವದ್ಯಾಲಯ ಪ್ರಾದೇಶಿಕ ಕೇಂದ್ರದಲ್ಲಿ ಫೆ.19 ಮತ್ತು 20ರಂದು ಪ್ರಾದೇಶಿಕ ಮಟ್ಟದ ತಾಂತ್ರಿಕ ಮತ್ತು ಸಾಂಸ್ಕೃತಿಕ ಹಬ್ಬ–ಯುಕ್ತಿ 2026 ಆಯೋಜಿಸಲಾಗಿದೆ ಎಂದು ಕೇಂದ್ರದ ನಿರ್ದೇಶಕ ಎಚ್.ಎಂ.ನಂಜುಂಡಸ್ವಾಮಿ ತಿಳಿಸಿದರು.

ನಗರದಲ್ಲಿ ಸುದ್ದಿಗಾರರೊಡನೆ ಮಾತನಾಡಿ, ಫೆ.19ರಂದು ಬೆಳಿಗ್ಗೆ 10ಕ್ಕೆ ಕುಲಪತಿ ಎಸ್.ವಿದ್ಯಾಶಂಕರ್ ಕಾರ್ಯಕ್ರಮ ಉದ್ಘಾಟಿಸುವರು. ನಟ ಶರಣ್, ನಟಿಯರಾದ ಸೋನಲ್ ಮೊಂಥೆರೋ, ಧನ್ಯಾ ರಾಮ್‌ಕುಮಾರ್, ಗಾಯಕ ವಾಸುಕಿ ವೈಭವ್, ವಯೋಲಿನ್ ವಾದಕ ಅನೀಶ್ ವಿದ್ಯಾಶಂಕರ್ ಪಾಲ್ಗೊಳ್ಳುವರು ಎಂದರು.

ವಿವಿಧ ತಾಂತ್ರಿಕ ಹಾಗೂ ಸಾಂಸ್ಕೃತಿಕ ಸ್ಪರ್ಧೆಗಳಲ್ಲಿ ಸುಮಾರು 1,200 ವಿದ್ಯಾರ್ಥಿಗಳು ಪಾಲ್ಗೊಳ್ಳುವ ನಿರೀಕ್ಷೆಯಿದೆ. ಫೆ.20ರಂದು ಸಂಜೆ 5ಕ್ಕೆ ಸಮಾರೋಪ ನಡೆಯಲಿದ್ದು, ವಿವಿಸಿಇ ಪ್ರಾಂಶುಪಾಲ ಬಿ.ಸದಾಶಿವೇಗೌಡ ಅತಿಥಿಯಾಗಿ ಪಾಲ್ಗೊಳ್ಳಲಿದ್ದು, ವಿಜೇತರಿಗೆ ಬಹುಮಾನ ವಿತರಿಸಲಾಗುವುದು ಎಂದರು. ಸಂಘಟನಾ ಕಾರ್ಯದರ್ಶಿ ಎಸ್.ತಿಮ್ಮರಾಜು, ಬೋಧಕ ಸಿಬ್ಬಂದಿ ಪ್ರಕೃತಿ, ಪ್ರಸನ್ನ, ಕೀರ್ತಿ ಗೌಡ ಹಾಜರಿದ್ದರು.



# ಪ್ರಶ್ನೆಪತ್ರಿಕೆ ಸೋರಿಕೆಯಾಗದಂತೆ ಕಟ್ಟೆಚ್ಚರ ವಹಿಸಿ

## ಸಂಬಂಧಿಸಿದ ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಶುಭ ಕಲ್ಯಾಣ್ ಸೂಚನೆ

**ತುಮಕೂರು:** ಇದೇ 28 ರಿಂದ ದ್ವಿತೀಯ ಪಿಯುಸಿ ಪರೀಕ್ಷೆ ಹಾಗೂ ಮಾರ್ಚ್ 18 ರಿಂದ ಎಸ್‌ಎಸ್‌ಎಲ್‌ಸಿ ಪರೀಕ್ಷೆ ನಡೆಯುತ್ತಿದ್ದು, ಪ್ರಶ್ನೆಪತ್ರಿಕೆ ಸೋರಿಕೆಯಾಗದಂತೆ ಕಟ್ಟೆಚ್ಚರ ವಹಿಸುವಂತೆ ಜಿಲ್ಲಾಧಿಕಾರಿ ಶುಭ ಕಲ್ಯಾಣ್ ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.

ಜಿಲ್ಲಾಧಿಕಾರಿ ಕಚೇರಿಯಲ್ಲಿ ಮಂಗಳವಾರ ಶಾಲಾ ಶಿಕ್ಷಣ ಸಚಿವ ಮಧು ಬಂಗಾರಪ್ಪ ಹಾಗೂ ಶಿಕ್ಷಣ ಇಲಾಖೆಯ ಹಿರಿಯ ಅಧಿಕಾರಿಗಳೊಂದಿಗೆ ವಿಡಿಯೋ ಕಾನ್ಫರೆನ್ಸ್ ಸಭೆ ಬಳಿಕ ಜಿಲ್ಲಾ ಮಟ್ಟದ ಅಧಿಕಾರಿಗಳ ಸಭೆಯಲ್ಲಿ ಅವರು ಮಾತನಾಡಿದರು.

ಜಿಲ್ಲೆಯಲ್ಲಿ ಸುಮಾರು 50,000ಕ್ಕೂ ಹೆಚ್ಚು ವಿದ್ಯಾರ್ಥಿಗಳು ಪರೀಕ್ಷೆ ಬರೆಯುತ್ತಿದ್ದಾರೆ. ಅವರ ಭವಿಷ್ಯ ಈ ಪರೀಕ್ಷೆಯಲ್ಲಿ ಇರುತ್ತದೆ. ಈ ಹಿನ್ನೆಲೆಯಲ್ಲಿ ಯಾವುದೇ ಕಾರಣಕ್ಕೂ ಜಿಲ್ಲೆಯಲ್ಲಿ ಪ್ರಶ್ನೆಪತ್ರಿಕೆ ಸೋರಿಕೆಯಾಗದಂತೆ ನಿಯೋಜಿತ ಅಧಿಕಾರಿಗಳು ಕಟ್ಟೆಚ್ಚರವಹಿಸುವಂತೆ ಅವರು ಸೂಚಿಸಿದರು.




ಪ್ರಶ್ನೆಪತ್ರಿಕೆ ಸಂಗ್ರಹ ಹಾಗೂ ವಿತರಣೆ ಜವಾಬ್ದಾರಿಗೆ ತ್ರಿಸದಸ್ಯ ಸಮಿತಿಯನ್ನು ರಚಿಸಲಾಗಿದ್ದು, ಅಪರ ಜಿಲ್ಲಾಧಿಕಾರಿ, ಪದವಿಪೂರ್ವ ಶಿಕ್ಷಣ ಇಲಾಖೆಯ ಉಪನಿರ್ದೇಶಕರು ಹಾಗೂ ಜಿಲ್ಲಾ ಖಜಾನಾಧಿಕಾರಿಗಳು ಸಮಿತಿಯ ಸದಸ್ಯರಾಗಿರುತ್ತಾರೆ. ಪ್ರಶ್ನೆ ಪತ್ರಿಕೆ ಖಜಾನೆಯಲ್ಲಿ ಸೂಕ್ತ ಬಂದೋಬಸ್ತ್‌ನಲ್ಲಿ ಇರಿಸಲಾಗಿರುತ್ತದೆ. ಇದಕ್ಕೆ ಸಂಬಂಧಿಸಿದಂತೆ ಸಿ.ಸಿ.ಟಿವಿ ಹಾಗೂ ನಿರಂತರ ವಿದ್ಯುತ್ ಸಂಪರ್ಕ ವ್ಯವಸ್ಥೆಯಲ್ಲದೆ ಯುಪಿಎಸ್ ಸೌಲಭ್ಯವನ್ನೂ ಖಜಾನೆ ಹೊಂದಿರಬೇಕಾಗುತ್ತದೆ. ಇದಕ್ಕೆ ಸಂಬಂಧಿಸಿದಂತೆ ತ್ರಿಸದಸ್ಯ ಸಮಿತಿ ಸೂಕ್ತ ವ್ಯವಸ್ಥೆ ಕೈಗೊಳ್ಳುವಂತೆ ಅವರು ಸೂಚಿಸಿದರು. ಪ್ರಶ್ನೆಪತ್ರಿಕೆಗಳನ್ನು ಪರೀಕ್ಷಾ ಕೇಂದ್ರಗಳಿಗೆ ಕೊಂಡೊಯ್ಯಲು ನಿಗದಿಪಡಿಸಲಾದ ವಾಹನಗಳಿಗೆ ಜಿಪಿಎಸ್ ಅಳವಡಿಸಬೇಕು. ನಿಗದಿತ ಮಾರ್ಗದಲ್ಲಿ ವಾಹನಗಳು ನಿಗದಿತ ಸಮಯಕ್ಕೆ ಸರಿಯಾಗಿ ಪ್ರಶ್ನೆಪತ್ರಿಕೆಯನ್ನು ಕೊಂಡೊಯ್ಯಲು ಸೂಕ್ತ ವ್ಯವಸ್ಥೆ ಕೈಗೊಳ್ಳಬೇಕು ಎಂದರು. ಮುಕ್ತ ಹಾಗೂ ನಿರ್ಭೀತ ಪರೀಕ್ಷೆ ವಾತಾವರಣಕ್ಕಾಗಿ ಪರೀಕ್ಷಾ ಕೇಂದ್ರಗಳು ಸಜ್ಜುಗೊಳ್ಳಬೇಕು ಎಂದ ಅವರು, ಇದೇ 23ರೊಳಗೆ ಪರೀಕ್ಷಾ ಕೇಂದ್ರಗಳಲ್ಲಿ ಮೂಲ ಸೌಲಭ್ಯ ಒದಗಿಸಿರುವ ಬಗ್ಗೆ ವರದಿ ಸಲ್ಲಿಸಿ ತಮ್ಮಿಂದ ಸಹಿ ಪಡೆಯಬೇಕು ಎಂದು ತಿಳಿಸಿದರು.

ಪರೀಕ್ಷಾ ಕೊಠಡಿಗಳಲ್ಲಿ ವೆಬ್‌ಕಾಸ್ಟಿಂಗ್ ಇರುವುದರಿಂದ ಜಿಲ್ಲಾ ಪಂಚಾಯತಿ ಹಾಗೂ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ವಾರ್ ರೂಮ್ ಕಚೇರಿಗೆ ವ್ಯವಸ್ಥೆ ಮಾಡಬೇಕು ಎಂದ ಅವರು ಪರೀಕ್ಷೆಗೆ ಸಂಬಂಧಿಸಿದಂತೆ ಒಂದು ಲೋಪವೂ ಇಲ್ಲದಂತೆ ನಿಯೋಜಿತ ಅಧಿಕಾರಿಗಳು ಕರ್ತವ್ಯ ನಿರ್ವಹಿಸುವಂತೆ ಅವರು ಸೂಚಿಸಿದರು. ವಿದ್ಯಾರ್ಥಿಗಳ ಸುಗಮ ಪ್ರಯಾಣಕ್ಕಾಗಿ ಜಿಲ್ಲೆಯಾದ್ಯಂತ ಎಲ್ಲಾ ಮಾರ್ಗಗಳಲ್ಲಿ ಬಸ್ಸುಗಳು ಸರಿಯಾದ ಸಮಯಕ್ಕೆ ಸಂಚರಿಸಬೇಕು. ಸಂಬಂಧಿಸಿದಂತೆ ಸಾರಿಗೆ ಇಲಾಖೆಯ ವಿಭಾಗೀಯ ನಿಯಂತ್ರಣಾಧಿಕಾರಿ ಸಂಬಂಧಿಸಿದ ಘಟಕಗಳಿಗೆ ಸೂಕ್ತ ನಿರ್ದೇಶನ ನೀಡುವಂತೆ ಜಿಲ್ಲಾಧಿಕಾರಿ ಸೂಚಿಸಿದರು.

# ಸಿದ್ದರಾಮಯ್ಯ ನೇತೃತ್ವದ ಸರಕಾರ ರಾಜ್ಯದ ಅಭಿವೃದ್ಧಿಗೆ ಪೂರಕವಾಗಿ ಬಜೆಟ್ ಮಂಡಿಸಲಿ

## ಕದಸಂಸ ರಾಜ್ಯಾಧ್ಯಕ್ಷ ವೆಂಕಟಗಿರಿಯಯ್ಯ ಒತ್ತಾಯ




**ಮಂಡ್ಯ:** ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ಸರಕಾರ ಪ್ರಸಕ್ತ ಬಜೆಟ್‌ನಲ್ಲಿ ದಲಿತ ಸಮುದಾಯಕ್ಕಾಗಿರುವ ವಂಚನೆ ಸರಿಪಡಿಸಿ ರಾಜ್ಯದ ಅಭಿವೃದ್ಧಿ ಪೂರಕವಾಗಿ ಸ್ಪಂಧಿಸಲು ಮುಂದಾಗಬೇಕು ಎಂದು ಕದಸಂಸ ರಾಜ್ಯಾಧ್ಯಕ್ಷ ವೆಂಕಟಗಿರಿಯಯ್ಯ ಒತ್ತಾಯಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, 2025–26ನೇ ಸಾಲಿನ ಬಜೆಟ್‌ನಲ್ಲಿ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡಗಳ ಅಭಿವೃದ್ಧಿಗಾಗಿ 42 ಸಾವಿರ ಕೋಟಿ ಅನುದಾನದಲ್ಲಿ 30 ಸಾವಿರ ಕೋಟಿಯನ್ನು ಗ್ಯಾರಂಟಿಗಳಿಗೆ ಬಳಸಿಕೊಳ್ಳಲಾಗಿದೆ. ದಲಿತರನ್ನು ಎಸ್ಸಿಎಸ್ಪಿ ಮತ್ತು ಟಿಎಸ್ಪಿ ಅನುದಾನದಿಂದ ವಂಚಿಸಿ ಸಾಧನಾ ಸಮಾವೇಶ ಸಂಘಟಿಸುತ್ತಿರುವ ರಾಜ್ಯ ಕಾಂಗ್ರೆಸ್ ಸರಕಾರ ರಾಜೀನಾಮೆ ನೀಡಬೇಕೆಂದರು.

ಸಮುದಾಯದ ಹಣ ದುರ್ಬಗಳಕೆಯನ್ನೇ 1000 ದಿನಗಳ ಸಾಧನೆ ಎಂದುಕೊಂಡು ಸಮಾವೇಶ ನಡೆಸುತ್ತಿರುವುದು ನೈತಿಕ ಪ್ರಜಾಪ್ರಭುತ್ವದ ಅಧಃಪತನವಾಗಿದೆ. ಆದ್ದರಿಂದ ಪ್ರಸಕ್ತ ಬಜೆಟ್‌ನಲ್ಲಿ ತೆಲಂಗಾಣ ರಾಜ್ಯದ ಮಾದರಿ ರಾಜ್ಯದ ಪ್ರತಿ ಕುಟುಂಬಕ್ಕೆ 25 ಲಕ್ಷ ವಿಶೇಷ ಅನುದಾನ ಘೋಷಣೆ ಮಾಡಬೇಕು ಎಂದು ಆಗ್ರಹಿಸಿದರು.

ಬಜೆಟ್‌ನಲ್ಲಿ ಗ್ಯಾರೆಂಟಿಗೆಂದು 56 ಸಾವಿರ ಕೋಟ ಅನುದಾನ ಘೋಷಿಸಿದ್ದರೂ ಪರಿಶಿಷ್ಠರಿಗೆ ಮೀಸಲಿರಿಸಿದ ಅನುದಾನ ವರ್ಗಾಯಿಸಿದ್ದೇಕೆ ಎಂಬುದನ್ನು ಉತ್ತರಿಸಬೇಕು. 2013ರಲಿ ಎಸ್ಸಿಎಸ್ಪಿ & ಟಿಎಸ್ಪಿ ಅನುದಾನದ 2 ಲಕ್ಷ ಕೋಟಿ ರೂ ಅನ್ಯ ಯೋಜನೆಗಳಿಗೆ ಬಳಸಲಾಗಿದೆ. ಆದ್ದರಿಂದ ಪ್ರಸಕ್ತ ಬಜೆಟ್‌ನಲ್ಲಿ 25 ಲಕ್ಷ ರೂ .ಪ್ರತಿ ಕುಟುಂಬಕ್ಕೆ ಮೀಸಲಿಡಬೇಕು. ಮರ್ಯಾದೆ ಹತ್ಯೆ ನಿಷೇಧ ಕಾಯ್ದೆ ಜಾರಿ ಮಾಡಬೇಕು. ತಮಿಳುನಾಡು ಸರಕಾರದಂತೆ ಶೇ.75ರಷ್ಟು ಮೀಸಲಾತಿ ನೀತಿ ಜಾರಿ ಮಾಡಬೇಕು. ಉಚಿತ ಶಿಕ್ಷಣ, ಆರೋಗ್ಯ ಸೇವೆ ನೀಡಬೇಕು. ಸರಕಾರಿ ಸೇವಾ ಸಂಸ್ಥೆಗಳು, ಕೈಗಾರಿಕೆಗಳನ್ನು ಖಾಸಗೀಕರಿಸುವುದು ನಿಲ್ಲಿಸಿ, ಖಾಸಗಿ ಕ್ಷೇತ್ರದಲ್ಲಿ ಮೀಸಲಾತಿ ನೀತಿ ಜಾರಿಗೊಳಿಸಬೇಕು. ಕೃಷಿ ಉತ್ಪನ್ನಗಳಿಗೆ ವೈಜ್ಞಾನಿಕ ಬೆಂಬಲ ಬೆಲೆ ಘೋಷಿಸಬೇಕು. ರೈತರ ಸಾಲ ಮನ್ನ ಮಾಡಬೇಕು. ಕೃಷಿ ಕೂಲಿ ಕಾರ್ಮಿಕ ಮಹಿಳೆಯರಿಗೂ ಕೂಲಿ ಸಹಿತ ಋತುಚಕ್ರ ರಜೆ ಘೋಷಿಸಬೇಕೆಂದು ಒತ್ತಾಯಿಸಿದರು.

ಮಂಡ್ಯ ಜಿಲ್ಲಾ ಕೇಂದ್ರಕ್ಕೆ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ಮಂಜೂರು, ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಸಮುದಾಯ ಆರೋಗ್ಯ ಕೇಂದ್ರಗಳಾಗಿ ಪರಿವರ್ತನೆ, ಕೆರೆಗಳ ಹೂಳೆತ್ತಿಸಿ ನೀರು ತುಂಬಿಸುವುದು. ಅರಣ್ಯ ಸಂರಕ್ಷಣೆಗೆ ಅನುದಾನ, ಮೈಷುಗರ್ ಆಧುನೀಕರಣಕ್ಕೆ ಒಂದೇ ಕಂತಿನಲ್ಲಿ ಅನುದಾನ, ಹೇಮಾವತಿ ನಾಲಾ ನೀರಾವರಿ ಭಾಗದ ಅರೆ ಖುಷ್ಕಿ ಬೆಳೆಗೆ ಸಮರ್ಪಕ ನೀರು ಒದಗಿಸಲು ನಾಲೆಗಳ ಅಭಿವೃದ್ಧಿಗೆ ಅನುದಾನ, ಕಾವೇರಿ ದೀಪಾರತಿ ಬಿಟ್ಟು ಅದೇ ಅನುದಾನದ್ಲಿ ಕಾವೇರಿ ನೀರು ಸದ್ಬಳಕೆ, ಸಂಶೋಧನೆ ಮತ್ತು ತರಬೇತಿ ಕೇಂದ್ರ ಸ್ಥಾಪನೆ, ಮಂಡ್ಯ ವಿವಿಯಲ್ಲಿ ನಾಲ್ವಡಿ ಕಷ್ಣರಾಜ ಒಡೆಯರ್ ಮತ್ತು ಡಾ.ಬಿ.ಆರ್.ಅಂಬೇಡ್ಕರ್ ಹೆಸರಿನಲ್ಲಿ ಅಧ್ಯಯನ ಕೇಂದ್ರ ಸ್ಥಾಪನೆಗೆ ಅನುದಾನ, ಜಿಲ್ಲಾ ಎಲ್ಲ ತಾಲೂಕಿನಲ್ಲೂ ಬುದ್ಧ ವಿಹಾರ ಕೇಂದ್ರ ನಿರ್ಮಾಣಕ್ಕೆ ತಲಾ 10 ಎಕರೆ ಭೂಮಿ, ಬೌದ್ಧ ವಿಹಾರ ನಿರ್ಮಾಣಕ್ಕೆ ತಲಾ 10 ಕೋಟಿ ಅನುದಾನ ನೀಡುವಂತೆ ಆಗ್ರಹಿಸಿದರು.

ಇಲ್ಲವಾದಲ್ಲ ಮಂಡ್ಯ ಜಿಲ್ಲಾ ಉಸ್ತುವಾರಿ ಕಚೇರಿಗೆ ಮುತ್ತಿಗೆ ಹಾಕುವುದಾಗಿ ಎಚ್ಚರಿಸಿದರು.

ಗೋಷ್ಠಿಯಲ್ಲಿ ಜಿಲ್ಲಾಧ್ಯಕ್ಷ ಬಿ.ಆನಂದ್, ಸಂಘಟನಾ ಸಂಚಾಲಕ ಸುರೇಶ್‌ಕುಮಾರ್, ಮಹಿಳಾ ಜಿಲಾಧ್ಯಕ್ಷೆ ಜಿ.ಸುಶ್ಮಿತ, ತಾಲೂಕು ಅಧ್ಯಕ್ಷರಾದ ಬಿ.ಎಸ್.ಗೀತಾ, ಪುಟ್ಟಲಿಂಗಯ್ಯ, ಗೀತಾ ಇದ್ದರು.

# ಪ್ರೀತಿಗೆ ಹಾಕಬೇಕು ಆಗಾಗ ತಿಳುವಳಿಕೆಯ ಲಗಾಮು



| ಪುಷ್ಪ ಪ್ರಸಾದ್

ಪ್ರೀತಿ ಇದು ಪ್ರೇಮದ ಜಗತ್ತು. ಗಂಡು ಹೆಣ್ಣಿನ ಪ್ರೇಮ ಅನಾಹತದ ನಾದ, ಸದಾ ಜಿನುಗುವ ತೊರೆ, ಭಾವ ತೀವ್ರತೆಗಳಲ್ಲಿ ಅದ್ಭುತ ಪ್ರೇರಣೆಯ ಜೀವಧಾತು, ಪ್ರೇಮ ಸಂಬಂಧಗಳು ಹುಟ್ಟುವುದು ಕ್ಷಣಿಕ ಸುಖಕ್ಕಲ್ಲ. ಕೊಟ್ಟು ತೆಗೆದುಕೊಳ್ಳುವ ಜಾಯಮಾನವೇ ಪ್ರೀತಿಯ ಹರಿವು. ಆ ಮೂಲಸತ್ವವನ್ನು ಉಳಿಸಿಕೊಂಡ ಪ್ರೀತಿ ದೀರ್ಘಾಯುಷಿ ಎನ್ನಬಹುದು. ಆ ಪ್ರೇಮ ನಿರಂತರತೆಗೆ ದೇಹ ಸಾಧನವಾಗಿ ಸಮರ್ಪಣೆಯ ಸಾಕಾರದಲ್ಲಿ ಉತ್ಕೃಷ್ಟವಾಗುತ್ತ ಸ್ತ್ರೀ ಪುರುಷ ಸಹಕಾರ ಗಾಢವಾಗುತ್ತದೆ. ನಿನ್ನೆ ಇದ್ದಂತೆ ಇಂದು ಇರದು, ಬೇಕಾಗಲಿ ಬೇಡವಾಗಲಿ ಬದಲಾವಣೆ ಜೀವನದ ದಿಕ್ಕು. ಅದನ್ನು ಅರಗಿಸಿಕೊಂಡು ಪ್ರೀತಿಯ ಋಣ ಭಾರವನ್ನು ನಿಭಾಯಿಸುವ ಸಾಮರ್ಥ್ಯವೇ ಬದುಕಿನ ದೊಡ್ಡ ಸವಾಲು. ಪ್ರೀತಿ ಎಂಬ ಪದವೇ ಅಮೋಘ. ಆ ಶಬ್ದ ಕಿವಿಗೆ ಬೀಳುತ್ತಲೆ ನಮಗರಿವಿಲ್ಲದೆ ಅದೇಷ್ಟೋ ಭಾವಗಳು ಎದೆಯೊಳಗೆ ಒಮ್ಮೆ ಸುಳಿದಾಡಿಬಿಡುತ್ತವೆ. ಪ್ರೀತಿಯ ಮಧುರತೆಯೆ ಹಾಗೇ. ಅದರಲ್ಲಿ ಯಾವುದೇ ಸ್ವಾರ್ಥವಿಲ್ಲ ಪ್ರೀತಿಸುವ ಹೃದಯ ಸದಾ ಜೊತೆಯಿರಬೇಕು ಎಂಬುದೇ ಅದರ ಬಯಕೆ.

?ಇಲ್ಲಿ ಸಿರಿವಂತ–ಬಡವ, ಮೇಲು–ಕೀಳು ಎಂಬ ಮಾತೆ ಬರಲ್ಲ. ಯಾಕೆಂದರೆ



ಪ್ರೀತಿಗೆ ಯಾವುದೇ ಅಡೆತಡೆಗಳಿಲ್ಲ. ಜಾತಿ, ಧರ್ಮ, ಅಂದ–ಚಂದ, ಮೇಲು–ಕೀಳು ದೊಡ್ಡಸ್ತಿಕೆ ಅದೆಲ್ಲವನ್ನು ಮೆಟ್ಟಿ ಏರಿರುವುದು ಪ್ರೀತಿ. ಪ್ರೇಮದಲ್ಲಿರುವುದು ಹೃದಯಗಳ ಪಿಸುಮಾತುಗಳು, ಭಾವನೆಗಳ ಸಮಾಗಮ, ಮೌನಕವಿತೆ. ಪ್ರೀತಿಯಲ್ಲಿ ಹೆಚ್ಚು–ಕಡಿಮೆ ಎಂಬುದಿಲ್ಲ. ಅದು ಎಲ್ಲೋ ಇಲ್ಲ. ನಮ್ಮಲ್ಲೇ ಇದೆ. ನಾವದನ್ನು ಅಪ್ಪಿಕೊಳ್ಳಬೇಕಿದೆ ಅಷ್ಟೇ. ಪ್ರೀತಿ ಎಂದರೇನು ಎಂಬುದನ್ನು ಹುಡುಕಲು ಸಮಯ ಕಳೆಯಬಾರದು. ಅದು ಉತ್ತರವಿಲ್ಲದ ಭಾವ. ಅದನೇನಿದ್ದರು ಅನುಭವಿಸಬೇಕು ಅಷ್ಟೇ ಹೆಚ್ಚೇನಿಲ್ಲ. ಪ್ರೀತಿ ಎಂದರೆ ಎಲ್ಲರಲ್ಲೂ ಅಪಾರ್ಥ ಭಾವಗಳೇ ಹೆಚ್ಚು ಎನ್ನಬಹುದು. ಮಾತನಾಡಿದರೆ, ಅಪ್ಪಿಕೊಂಡರೆ ತಪ್ಪು ತಿಳಿದುಕೊಳ್ಳುವ ಜನ ಬಹಳಷ್ಟು. ಪ್ರೀತಿಯೆಂದರೆ ಹರೆಯದಲ್ಲಿ ಹುಡುಗಾಟವೂ ಹೌದು, ಹುಡುಕಾಟವೂ ಹೌದು. ಆದರೆ ಪ್ರಬುದ್ಧರಾಗುತ್ತಾ ಹೋದಂತೆ ಬದುಕನ್ನು ಜತನದಿಂದ ಮುನ್ನಡೆಸುವುದು ಒಂದಿನಿತು ಪ್ರೀತಿಯೇ. ಅದು ಅತಿ ಮಧುರ, ಅನುರಾಗ, ಜೀವನ ಸಂಧ್ಯಾರಾಗ. ಹದಿಹರೆಯದ್ದೂ, ಪ್ರೀತಿಯೇ? ಬದುಕನ್ನು ಮುನ್ನಡೆಸುವುದು. ಪ್ರೀತಿಯಲ್ಲಿ ಜವಾಬ್ದಾರಿ ಇದ್ದಾಗ, ಜವಾಬ್ದಾರಿ ಅರಿತಾಗ ಅದೇ ಬಾಳನ್ನು ಬೆಳಗುವ ಜ್ಯೋತಿಯಾಗುತ್ತದೆ. ಒಲವೇ ಜೀವನ ಸಾಕ್ಷಾತ್ಕಾರ ಎಂಬುದಕ್ಕೆ ಅಸಾಧ್ಯ ಅರ್ಥಗಳನ್ನು ಕೊಡಬೇಕಿಲ್ಲ. ಜೊತೆಯಾಗಿ ಹಿತವಾಗಿ ಬದುಕಿನ ಅರ್ಥವನ್ನು ಕಂಡುಕೊಳ್ಳುವುದೇ ಪ್ರೀತಿ.

?ಪ್ರೀತಿ ಎಂದರೆ ಹೃದಯದ ಹಸಿವು, ಎಲ್ಲ ಭಾವಗಳ ಮೂಲ. ಇದನ್ನು ಬಯಸದ ಮನುಷ್ಯ ಜಗತ್ತಿನಲ್ಲೇ ಇಲ್ಲ. ಹೆತ್ತವರ ಪ್ರೀತಿ, ಹೆತ್ತವರಿಗೆ ಮಕ್ಕಳ ಪ್ರೀತಿ, ಅಕ್ಕ ತಂಗಿಯರ ಪ್ರೀತಿ, ಅಣ್ಣ ತಮ್ಮನ ಪ್ರೀತಿ, ಗೆಳೆಯರ ಪ್ರೀತಿ, ಗಂಡ ಹೆಂಡತಿಯ ಪ್ರೀತಿ ಹೀಗೆ ಹೇಳುತ್ತ ಹೋದರೆ ಮುಗಿಯದ ಸಾಗರ. ಆ ದೇವರನ್ನೂ ಅಥವಾ ಕಾಣದ ಶಕ್ತಿ ಅಂತ ನಂಬಿಕೊಂಡಿರುವುದನ್ನ ಅದೆಷ್ಟು ಪ್ರೀತಿ ಮಾಡುತ್ತೇವೆ ಅಲ್ವಾ? ಹರೆಯದ ಹೆಬ್ಬಾಗಿಲು ತೆರೆದಿರುವ ಸಮಯಕ್ಕೆ ಈ ಪ್ರೀತಿಯೆಂಬ ಮಾಯೆ ಸುತ್ತಿಕೊಳ್ಳುತ್ತ ಬರುವಾಗ ಕಗ್ಗಂಟಾಗಲು ಬಿಡದೆ ತಡೆದು ನಿಲ್ಲಿಸುವ ತಿಳುವಳಿಕೆಯ ಬತ್ತಿ ನಮಗೆ ನಾವೆ ಹಚ್ಚಿಕೊಳ್ಳಬೇಕು. ಮಧುರವಾದ ಪ್ರೀತಿ ಯಾವತ್ತೂ ಹಾಳಲ್ಲ. ಕೆಟ್ಟದ್ದೂ ಅಲ್ಲ. ಅದಕ್ಕೊಂದು ಪಲ್ಲಕ್ಕಿಯಲ್ಲಿ ಸ್ಥಾನವಿದೆ. ಆ ಗೌರವ ಕಾಪಾಡಿಕೊಂಡು ಕಲ್ಮಶದ ಗಾಳಿಯ ಧೂಳನ್ನು ಆಗಾಗ ತಿಳುವಳಿಕೆಯ ಲಗಾಮು ಹಾಕಿ ಒರೆಸುತ್ತಿರಲೇಬೇಕು.



# ಖುಷಿ ಮತ್ತು ಸಾಧನೆ: ಸಮತೋಲನದ ಒಂದು ಹುಡುಕಾಟ

ಇತ್ತೀಚೆಗಷ್ಟೇ ನಾನು ಕ್ಯಾಲಿಫೋರ್ನಿಯಾದಿಂದ ಭಾರತಕ್ಕೆ ವಿಮಾನದಲ್ಲಿ ಹಿಂತಿರುಗುತ್ತಿದ್ದೆ. ಸುದೀರ್ಘ ಪ್ರಯಾಣದ ಆಯಾಸದಲ್ಲಿ ಗಾಢ ನಿದ್ರೆಗೆ ಜಾರಿದ್ದ ನನಗೆ, ಹಠಾತ್ತನೆ ಎಚ್ಚರವಾಯಿತು. ಕಿಟಕಿಯ ಗಾಜಿನಿಂದ ಹೊರಗೆ ಕಣ್ಣು ಹಾಯಿಸಿದಾಗ ಅಲ್ಲಿ ಕಂಡ ದೃಶ್ಯ ನನ್ನ ಮನಸ್ಸನ್ನು ಪುಳಕಿತಗೊಳಿಸಿತು. ಕಡು ನೀಲಿ ಆಕಾಶದ ಅಂಚಿನಲ್ಲಿ ಗಾಢ ಕೆಂಪು ಬಣ್ಣದ ಗೆರೆಯೊಂದು ಮೂಡುತ್ತಿತ್ತು. ಕತ್ತಲೆಯನ್ನು ಸೀಳಿಕೊಂಡು ಸೂರ್ಯನ ಮೊದಲ ಕಿರಣಗಳು ಇಣುಕುತ್ತಿದ್ದವು. ಮೆಲ್ಲ ಮೆಲ್ಲಗೆ ಆ ಕೆಂಪು ಬಣ್ಣವು ಕೇಸರಿಮಯವಾಗಿ, ಸೂರ್ಯ ತನ್ನ ಪೂರ್ಣ ವೈಭವದೊಂದಿಗೆ ಮೇಲೆದ್ದು ಬರುತ್ತಿದ್ದ ಆ ದೃಶ್ಯ ವರ್ಣನಾತೀತವಾಗಿತ್ತು. ಕಳೆದ ಹಲವಾರು ವರ್ಷಗಳಲ್ಲಿ ನಾನು ಈ ಸೂರ್ಯೋದಯದ ಅದ್ಭುತವನ್ನು ಇಷ್ಟು ಹತ್ತಿರದಿಂದ ಅನುಭವಿಸಿಯೇ ಇರಲಿಲ್ಲ.

ಆ ದೃಶ್ಯವನ್ನು ಆಸ್ವಾದಿಸುತ್ತಿದ್ದಂತೆ ಆಗಸದಲ್ಲಿ ಮತ್ತೊಂದು ಬದಲಾವಣೆ ತೋರಿತು. ಇಡೀ ಆಗಸವೇ ಹತ್ತಿಯಿಂದ ತುಂಬಿದಂತೆ ಭಾಸವಾಯಿತು. ಆ ಮೋಡಗಳ ಬೆಟ್ಟವನ್ನು ವಿಮಾನವು ಸೀಳಿ ಹೋಗುತ್ತಿದ್ದರೆ, ಅದು ಸಾಕ್ಷಾತ್ ಶಿವನ ಕೈಲಾಸವೇನೋ ಎಂಬ ಭಾವನೆ ಮನದಲ್ಲಿ ಮೂಡಿತು.

ಸೀಟಿಗೊರಗಿ ಕಣ್ಣು ಮುಚ್ಚಿ ಕುಳಿತಂತೆ, ನನ್ನ ಯೋಚನಾ ಲಹರಿ ಗಾಡವಾಯಿತು.

ದಿನನಿತ್ಯದ ಧಾವಂತದಲ್ಲಿ, ಗಡಿಯಾರದ ಮುಳ್ಳಿನ ಹಿಂದೆ ಓಡುವ ಭರಾಟೆಯಲ್ಲಿ, ಪ್ರಕೃತಿಯ ಇಂತಹ ಸೌಂದರ್ಯಗಳು ನಮ್ಮ ಕಣ್ಣಿಗೆ ಬೀಳುವುದೇ ಇಲ್ಲ. ಇಂದು ಆ ಮೋಡಗಳ ಎತ್ತರದಲ್ಲಿ ಕುಳಿತು ಆ ಸೂರ್ಯೋದಯವನ್ನು ನೋಡಿದಾಗ ನನಗೆ ಸಿಕ್ಕ ಆ ಆನಂದ, ಆ ಭವ್ಯ ಕ್ಷಣದ ಮೆರುಗು ನನ್ನೊಳಗೆ ಒಂದು ಪ್ರಶ್ನೆಯನ್ನು ಹುಟ್ಟುಹಾಕಿತು: "ನಿಜವಾದ ಖುಷಿ ಅಂದರೆ ಏನು? ಅದು ನಮಗೆ ಎಲ್ಲಿ ಸಿಗುತ್ತದೆ?"

ಜೀವನ ಎಂಬುದು ಒಂದು ಸುದೀರ್ಘ ಪಯಣ. ಈ ಪಯಣದಲ್ಲಿ ಪ್ರತಿಯೊಬ್ಬ ಪಥಿಕನೂ ಅಂತಿಮವಾಗಿ ಹುಡುಕುವುದು ಒಂದೇ ಒಂದು ನಿಲ್ದಾಣವನ್ನು?ಅದೇ 'ಖುಷಿ'. ಆದರೆ ವಿಪರ್ಯಾಸವೆಂದರೆ, ನಾವು ಎಲ್ಲಿಗೆ ತಲುಪಬೇಕು ಎಂದು ಬಯಸುತ್ತೇವೆಯೋ, ಆ ಖುಷಿಯ ಹಾದಿಯಲ್ಲೇ ಅದನ್ನು ಕಳೆದುಕೊಂಡು ಓಡುತ್ತಿದ್ದೇವೆ. ಇಂದಿನ ಆಧುನಿಕ ಜಗತ್ತಿನಲ್ಲಿ ಖುಷಿ ಎನ್ನುವುದು ಮಾರುಕಟ್ಟೆಯಲ್ಲಿ ಸಿಗುವ ವಸ್ತುವಿನಂತೆ ಬಿಂಬಿತವಾಗುತ್ತಿದೆ. ದೊಡ್ಡ ಮನೆ, ಐಷಾರಾಮಿ ಕಾರು, ಕೈತುಂಬಾ ಸಂಬಳ?ಇವೇ ಯಶಸ್ಸಿನ ಅಳತೆಗೋಲುಗಳಾದ ಮೇಲೆ, ಮನುಷ್ಯನ ಮನಸ್ಸು



ನೆಮ್ಮದಿಯನ್ನು ಕೇವಲ ಅಂಕಿ–ಅಂಶಗಳಲ್ಲಿ ಹುಡುಕಲು ಶುರು ಮಾಡಿದೆ.

ಹಾಗಾದರೆ ನಿಜವಾದ ಖುಷಿ ಇರುವುದು ನಾವು ಏರಿದ ಎತ್ತರದಲ್ಲೋ ಅಥವಾ ನಾವು ಕ್ರಮಿಸಿದ ಹಾದಿಯ ಸುಂದರ ಕ್ಷಣಗಳಲ್ಲೋ?

ನಮ್ಮ ಸಮಾಜವು 'ಸಾಧನೆ' ಎನ್ನುವ ಪದಕ್ಕೆ ಒಂದು ಕಟ್ಟುನಿಟ್ಟಾದ ಚೌಕಟ್ಟನ್ನು ಹಾಕಿದೆ. ಬಾಲ್ಯದಿಂದಲೇ ನಮಗೆ ಪಠ್ಯಪುಸ್ತಕಗಳ ಜೊತೆಗೆ "ಲೈಫ್ ಅಂದ್ರೆ ರೇಸ್" ಎಂಬ ಅಲಿಖಿತ ಪಾಠವನ್ನು ಕಲಿಸಲಾಗುತ್ತದೆ. ಆದರೆ ನಾವು ಓಡುತ್ತಿರುವ ಈ ಪಂದ್ಯದಲ್ಲಿ ಗೆಲುವಿನ ಗೆರೆ (ಈುಟ್ಝು ಟುಟಿಜ) ಸದಾ ಮುಂದಕ್ಕೆ ಸರಿಯುತ್ತಲೇ ಇರುತ್ತದೆ. ಐದಂಕಿ ಸಂಬಳ, ಸಮಾಜದಲ್ಲಿ ಘನತೆ, ಪ್ರತಿಭಾವಂತ ಮಕ್ಕಳು ಮತ್ತು ಬ್ಯಾಂಕ್ ಬ್ಯಾಲೆನ್ಸ್?ಇಷ್ಟಿದ್ದರೆ ಜೀವನದಲ್ಲಿ ಗೆದ್ದಂತೆ ಎಂದು ಸಮಾಜ ನಂಬುತ್ತದೆ. ಖಂಡಿತವಾಗಿಯೂ ಇವು ಜೀವನದ ನಿರ್ವಹಣೆಗೆ ಅಗತ್ಯ, ಆದರೆ ಇವೇ ಅಂತಿಮವೇ?

**ಒಮ್ಮೆ ವಿವೇಚನೆಯಿಂದ ಯೋಚಿಸಿ ನೋಡಿ:**

* ತಾಂತ್ರಿಕ ಬದಲಾವಣೆ ಅಥವಾ ಆರ್ಥಿಕ ಕುಸಿತದಿಂದ ಉದ್ಯೋಗ ಅಸ್ಥಿರವಾಗಬಹುದು.
* ಅತಿ ವ್ಯಾಮೋಹದಿಂದ ಕೊಂಡ ಐಷಾರಾಮಿ ವಸ್ತುಗಳು ಕಾಲಕ್ರಮೇಣ ಹಳೆಯ ಮಾದರಿಯಾಗಿ ಮೂಲೆ ಸೇರಬಹುದು.
* ಕೂಡಿಟ್ಟ ಹಣ ಆಕಸ್ಮಿಕ ಸಂಕಷ್ಟಗಳಲ್ಲಿ ಕರಗಿ ಹೋಗಬಹುದು.
* ಲೌಕಿಕ ಸಂಬಂಧಗಳು ಕಾಲದ ಓಟದಲ್ಲಿ ಅನಿವಾರ್ಯವಾಗಿ ಬದಲಾಗಬಹುದು.

ನಮ್ಮ ಖುಷಿಯನ್ನು ಇಂತಹ 'ಬದಲಾಗುವ' ಅಸ್ಥಿರ ವಸ್ತುಗಳ ಮೇಲೆ ಅವಲಂಬಿತವಾಗಿಸಿದರೆ, ಅವು ನಮ್ಮನ್ನು ಬಿಟ್ಟು ಹೋದಾಗ ನಮ್ಮ ಖುಷಿಯೂ ಮಾಯವಾಗುತ್ತದೆ. ಹಾಗಿದ್ದರೆ ಸಾಧನೆ ಎಂಬುದು ಕೇವಲ ಮರೀಚಿಕೆಯೇ?

ಖುಷಿ ಎನ್ನುವುದು ಒಂದು ಘಟನೆಯಲ್ಲ, ಅದೊಂದು ನಿರಂತರ ಅನುಭವ. ಅದು ಅತ್ಯಂತ ಸರಳ ಸಂಗತಿಗಳಲ್ಲಿ ಅಡಗಿದೆ:

1. **ಪ್ರಕೃತಿಯ ಒಡನಾಟ:** ಮುಂಜಾನೆಯ ಸೂರ್ಯೋದಯವನ್ನು ನೋಡುತ್ತಾ ಹಬೆಯಾಡುವ ಕಾಫಿ ಕುಡಿಯುವುದರಲ್ಲಿ ಇರುವ ನೆಮ್ಮದಿ, ಬಹುಶಃ ಯಾವುದೇ ಕಚೇರಿಯ ಪ್ರಶಸ್ತಿ ಪತ್ರ ನೀಡಲಾರದು. ಹಕ್ಕಿಗಳ ಚಿಲಿಪಿಲಿ, ಸಮುದ್ರದ ಅಲೆಗಳ ಅಬ್ಬರ ಅಥವಾ ಹರಿಯುವ ನದಿಯ ತಂಪು?ಇವು ಪ್ರಕೃತಿ ನಮಗೆ ನೀಡುವ ಉಚಿತ ಉಡುಗೊರೆಗಳು. ಇವುಗಳನ್ನು ಆಸ್ವಾದಿಸಲು ಹಣಕ್ಕಿಂತ ಹೆಚ್ಚಾಗಿ 'ಗಮನಿಸುವ ಮನಸ್ಸು' ಬೇಕು.
2. **ಸಂಬಂಧಗಳ ಆತ್ಮೀಯತೆ:** ಎಷ್ಟೋ ವರ್ಷಗಳ ನಂತರ ಹಳೆಯ ಗೆಳೆಯ ಸಿಕ್ಕಾಗ ಹಳೆಯ ನೆನಪುಗಳನ್ನು ಮೆಲುಕು ಹಾಕುವುದರಲ್ಲಿ ಇರುವ ತೃಪ್ತಿ ಅದ್ಭುತ. ನಮ್ಮ ಆಪ್ತರು ನಮಗಿಂತ ದೊಡ್ಡ ಮಟ್ಟಕ್ಕೆ ಬೆಳೆದಾಗ, ಅಸೂಯೆ ಪಡದೆ ಅವರ ಯಶಸ್ಸಿನಲ್ಲಿ ನಮ್ಮ ಸಂತೋಷವನ್ನು ಕಾಣುವುದು ಉನ್ನತ ಮಟ್ಟದ ವ್ಯಕ್ತಿತ್ವ.
3. **ಜ್ಞಾನ ಮತ್ತು ಹವ್ಯಾಸ:** ಒಂದು ಒಳ್ಳೆಯ ಪುಸ್ತಕ ಓದಿದಾಗ ಅಥವಾ ಕಲೆಯೊಂದರಲ್ಲಿ ಮಗ್ನರಾದಾಗ ನಾವು ಹೊಸ ಲೋಕವನ್ನು ಪ್ರವೇಶಿಸುತ್ತೇವೆ. ಇಂತಹ ಜ್ಞಾನದ ವಿಸ್ತರಣೆ ನಮ್ಮ ಒಳಗಿನ ತೃಪ್ತಿಯನ್ನು ಹೆಚ್ಚಿಸುತ್ತದೆ.

ಸಾಧಿಸಬೇಕೋ ಅಥವಾ ಖುಷಿಯಾಗಿರಬೇಕೋ?

ಈ ಪ್ರಶ್ನೆಗೆ ಉತ್ತರ "ಎರಡೂ" ಎನ್ನುವುದೇ ಆಗಿದೆ. ಆದರೆ ನಮ್ಮ ಆದ್ಯತೆಗಳು ಬದಲಾಗಬೇಕು.

* ಕೃತಜ್ಞತಾ ಭಾವ (Gratitude): ಇರುವುದಕ್ಕಾಗಿ ಕೃತಜ್ಞರಾಗಿರುವುದು ಖುಷಿಯ ಮೊದಲ ಮೆಟ್ಟಿಲು. ಆರೋಗ್ಯವಾಗಿರುವುದು ಮತ್ತು ಹೊಟ್ಟೆತುಂಬಾ ಊಟ ಸಿಗುತ್ತಿರುವುದು ಕೂಡ ಒಂದು ದೊಡ್ಡ ಸಾಧನೆಯೇ.
* ಕ್ಷಣದಲ್ಲಿ ಬದುಕು (Mindfulness): ಕೆಲಸ ಮತ್ತು ವೈಯಕ್ತಿಕ ಜೀವನದ ನಡುವೆ ಸ್ಪಷ್ಟ ಗೆರೆ ಇರಲಿ. ಒತ್ತಡವನ್ನು ಮನೆಗೆ ಹೊತ್ತು ತರದಿರುವುದು ಬಹು ಮುಖ್ಯ .
* ವಸ್ತುಗಳ ಮೇಲಿನ ಅವಲಂಬನೆ ತಗ್ಗಿಸಬೇಕು : ವಸ್ತುಗಳು ನಮಗೆ ಸೌಲಭ್ಯ ನೀಡುತ್ತವೆ, ಆದರೆ ಅವುಗಳೇ ನಮ್ಮ ಅಸ್ತಿತ್ವವಾಗಬಾರದು. ಕಾರು ಹಳೆಯದಾದರೂ ಚಲಿಸುತ್ತದೆ, ಮನೆ ಚಿಕ್ಕದಾದರೂ ಅಲ್ಲಿ ಪ್ರೀತಿ ತುಂಬಿರಬಹುದು ಎಂಬ ಸತ್ಯವನ್ನು ಅರಗಿಸಿಕೊಳ್ಳಬೇಕು.

**ಬದುಕು ಒಂದು ನೀರಿನ ಗುಳ್ಳೆಯಂತೆ;** ಅದು ಯಾವಾಗ ಒಡೆಯುತ್ತದೆ ಎಂದು ಯಾರಿಗೂ ತಿಳಿದಿಲ್ಲ.

ಹಾಗಿರುವಾಗ, ಸಿಕ್ಕಿರುವ ಈ ಅಮೂಲ್ಯ ಸಮಯದಲ್ಲಿ ಕೇವಲ ಭೌತಿಕ ಸಾಧನೆಗಳ ಬೆನ್ನು ಹತ್ತಿ ನಮ್ಮ ಒಳಗಿರುವ ಮುಗ್ಧ ಮನಸ್ಸನ್ನು ಕಮರಿಸಬಾರದು.

ಖುಷಿ ಎನ್ನುವುದು ಸಾಧನೆಯ ನಂತರ ಸಿಗುವ ಬಹುಮಾನವಲ್ಲ; ಅದು ಪ್ರತಿ ದಿನದ ಬದುಕಿನಲ್ಲಿ ನಾವು ಕಂಡುಕೊಳ್ಳಬೇಕಾದ ಲಯ. ದೊಡ್ಡ ಕಾರಿನಲ್ಲಿ ಹೋಗುವಾಗ ಸಿಗದ ನೆಮ್ಮದಿ, ಮಳೆಯ ಮೊದಲ ಹನಿ ಮೈಮೇಲೆ ಬಿದ್ದಾಗ ಅಥವಾ ಮಗುವಿನ ಮುಗ್ಧ ನಗು ನೋಡಿದಾಗ ಸಿಗುತ್ತದೆ ಎಂದರೆ, ನಾವು ನಿಜಕ್ಕೂ ಶ್ರೀಮಂತರು ಎಂದೇ ಅರ್ಥ.

ಸಾಧನೆಯ ಶಿಖರ ಏರಲು ಖಂಡಿತ ಪ್ರಯತ್ನಿಸೋಣ, ಆದರೆ ಆ ದಾರಿಯಲ್ಲಿ ಅರಳಿದ ಸಣ್ಣ ಸಣ್ಣ ಖುಷಿಯ ಹೂವುಗಳನ್ನು ಮುಡಿಯಲು ಮರೆಯದಿರೋಣ. ಸಾಧನೆಯು ನಮ್ಮ ಬದುಕಿನ ಹಾದಿಯಾಗಲಿ, ಆದರೆ ಆ ಹಾದಿಯ ಪ್ರತಿ ಹೆಜ್ಜೆಯೂ ಖುಷಿಯ ಪಯಣವಾಗಲಿ. ಕೊನೆಯಲ್ಲಿ ನೆನಪಿಗೆ ಬರುವುದು ನಾವು ಗಳಿಸಿದ ಅಂಕಿ–ಅಂಶಗಳಲ್ಲ, ಬದಲಾಗಿ ನಾವು ಹಂಚಿದ ಮತ್ತು ಅನುಭವಿಸಿದ ಪ್ರೀತಿಯ ಕ್ಷಣಗಳು ಮಾತ್ರ ಎಂಬುದನ್ನು ಮರೆಯದಿರೋಣ .



| ರಚನೆ : ಸ್ವಾಮಿನಾಥನ್
ಮೊಬೈಲ್ : 9880041516
Email : Swamynathann@gmail.com